ಸಂಪುಟ: ೦೭/ ಸಂಚಿಕೆ: ೧೧೮/ರವಿವಾರ ದಿನಾಂಕ : ೨೨-೦೬-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

■ ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 118/ SUNDAY Date : 22-06-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

### ಪರಿಶಿಷ್ಟ ಜಾತಿ/ವರ್ಗಗಳ ದೌರ್ಜನ್ಯ ನಿಯಂತ್ರಣ ಸಮಿತಿ ಸಭೆ

## ಪರಿಶಿಷ್ಟರ ದೂರು ನಿವಾರಣೆಗೆ ತ್ವರಿತ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿ ಸೂಚನೆ



**ಬೆಳಗಾವಿ,** : ಪರಿಶಿಷ್ಟ ಜಾತಿ/ವರ್ಗಗಳ ದೌರ್ಜನ್ಯ ಕುರಿತು ದೂರುಗಳು ದಾಖಲಾದಲ್ಲಿ ಸಂಬಂಧಿಸಿದ ದೂರುಗಳ ಕುರಿತು ತ್ವರಿತವಾಗಿ ಕ್ರಮ ಕೈಗೊಳ್ಳಬೇಕು. ಒಂದು ವೇಳೆ ವಿಳಂಬ ತೋರುವುದು ಕಂಡು ಬಂದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶನಿವಾರ (ಜೂ.21) ನಡೆದ ಪರಿಶಿಷ್ಟ ಜಾತಿ/ಪಂಗಡಗಳ (ದೌರ್ಜನ್ಯ ನಿಯಂತ್ರಣ) ಜಿಲ್ಲಾ ಮಟ್ಟದ ಜಾಗೃತಿ ಹಾಗೂ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ವ್ಯಾಪ್ತಿಯಲ್ಲಿ ಎಸ್.ಸಿ, ಎಸ್.ಟಿ ಸಮುದಾಯದ ಮುಖಂಡರು ಹಾಗೂ ಜಿಲ್ಲಾ ಮಟ್ಟದ ಸಮಿತಿ ಸದಸ್ಯರನ್ನು ಠಾಣೆ ವ್ಯಾಪ್ತಿಯ ಪ.ಜಾತಿ ಹಾಗೂ ಪ.ಪಂಗಡಗಳ ಕುಂದು ಕೊರತೆಗಳ ಸಭೆಗೆ ಆಹ್ವಾನಿಸಿದರೆ ಇದರಿಂದ ಸ್ಥಳೀಯವಾಗಿ ಸಮಸ್ಯೆಗಳನ್ನು ಬಗೆಹರಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

**ವೀರ ಮದಕರಿ ಪುತ್ಥಳಿ ಸ್ಥಾಪನೆ- ಸ್ಥಳ ಪರಿಶೀಲಿಸಿ ವರದಿ ನೀಡಲು ಸೂಚನೆ:** ವಿವಿಧ ಸಂಘಟನೆಗಳ ಬಹುದಿನಗಳ ಬೇಡಿಕೆಯಂತೆ ಬೆಳಗಾವಿ ನಗರದ ಆರ್.ಪಿ.ಡಿ. ವೃತ್ತದಲ್ಲಿ ವೀರಮದಕರಿ ಪುತ್ಥಳಿ ಸ್ಥಾಪನೆಗೆ ಸಂಬಂಧಿಸಿದ ವಿಷಯವನ್ನು ಪಾಲಿಕೆಯ ಪರಿಷತ್ ಸಭೆಯಲ್ಲಿ ಮಂಡಿಸಲು ಆದ್ಯತೆಯ ಮೇರೆಗೆ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದರು.

ಅದಕ್ಕೂ ಮುನ್ನ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಸರಕಾರದ ಮಾರ್ಗಸೂಚಿ ಪ್ರಕಾರ ವರದಿಯನ್ನು ಸಿದ್ಧಪಡಿಸಬೇಕು. ಈ ವರದಿ ಆಧರಿಸಿ ಮಹಾನಗರ ಪಾಲಿಕೆಯ ಪರಿಷತ್ ಸಭೆಯಲ್ಲಿ ಚರ್ಚಿಸಿ ಸರಕಾರದ ಮಾರ್ಗಸೂಚಿ ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಬಹುದು ಎಂದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯದವರಿಗೆ ಸರ್ಕಾರದಿಂದ ವಿತರಿಸುವ ಸಾಲಗಳನ್ನು ನೇರವಾಗಿ ಫಲಾನುಭವಿಗಳಿಗೆ ನೀಡಬೇಕು. ಇದರಲ್ಲಿ ಯಾವುದೇ ತಾರತಮ್ಯ ಮಾಡಬಾರದು. ಪೌರ ಕಾರ್ಮಿಕರಿಗೆ ಅಗತ್ಯದ ರಕ್ಷಣಾ ಸಾಮಗ್ರಿಗಳನ್ನು ಶೀಘ್ರವೇ ವಿತರಿಸಲು ಕ್ರಮ ಕೈಗೋಳ್ಳುವಂತೆ ತಿಳಿಸಿದರು.

**ತುರ್ತು ವೈದ್ಯಕೀಯ ಚಿಕಿತ್ಸೆಗೆ ಸೂಚನೆ:** ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ಬರುವಂತಹ ಪ.ಜಾ,ಪ.ಪಂಗಡದ ರೋಗಿಗಳಿಗೆ ತುರ್ತಾಗಿ ಚಿಕಿತ್ಸೆಗೆ ಕ್ರಮ ವಹಿಸಬೇಕು. ಯಾವುದೇ ಕಾರಣಕ್ಕೂ ಜಾತಿ ಪ್ರಮಾಣ ಪತ್ರದ ನೆಪವೊಡ್ಡಿ ಚಿಕಿತ್ಸೆ ನೀಡಲು ನಿರಾಕರಿಸದಂತೆ ತಿಳಿಸಿದರು. ಜಿಲ್ಲಾ ಆಸ್ಪತ್ರೆಯ ವೈದ್ಯರು ಹಾಗೂ ಸಹಾಯಕ ಸಿಬ್ಬಂದಿಗಳು ಆಸ್ಪತ್ರೆಗೆ ಬರುವಂತಹ ಜನರೊಂದಿಗೆ ಸೌಜನ್ಯದಿಂದ ವರ್ತಿಸುವಂತೆ ತಿಳಿಹೇಳಿದರು.

ಸ್ಮಶಾನ ಭೂಮಿಗೆ ಸಂಬಂಧಿಸಿದಂತೆ ಉಂಟಾಗುತ್ತಿರುವ ವಿಷಯವನ್ನು ಕೆಲದಿನಗಳ ಹಿಂದೆ ಜರುಗಿದ ಮಾನ್ಯ ಮುಖ್ಯಮಂತ್ರಿಗಳ ಸಭೆಯಲ್ಲಿ ಗಮನಕ್ಕೆ ತರಲಾಗಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಸರಕಾರಿ ನೌಕರರ ಪದೋನ್ನತಿಗೆ ವಿಳಂಬವಾಗುತ್ತಿರುವ ಕುರಿತು ವರದಿ ನೀಡಲು ತಿಳಿಸಿದರು.

**ಬಾಕಿ ಪ್ರಕರಣಗಳ ತ್ವರಿತ ವಿಲೇವಾರಿಗೆ ನಿರ್ದೇಶನ:** ನ್ಯಾಯಾಲಯಗಳಲ್ಲಿ ಬಾಕಿ ಇರುವ ದೌರ್ಜನ್ಯ ಪ್ರಕರಣಗಳನ್ನು ಆದ್ಯತೆ ಮೇರೆಗೆ ತ್ವರಿತವಾಗಿ ಇತ್ಯರ್ಥ ಪಡಿಸಬೇಕು. ಜಿಲ್ಲೆಯಲ್ಲಿ ಮಾದಕ ವಸ್ತುಗಳ ನಿಯಂತ್ರಣಕ್ಕೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ತಿಳಿಸಿದರು.

ಈ ವರ್ಷ ಬ್ಯಾಂಕ್ ಗಳಲ್ಲಿ ಶೇಕಡಾ 70% ಬ್ಯಾಂಕ್ ಗಳಲ್ಲಿ ಲೋನ್ ನೀಡಲಾಗುತ್ತಿದೆ. ಯಾವುದೇ ಕಾರಣಕ್ಕೂ ವಿನಾಕಾರಣ ಅರ್ಜಿಗಳನ್ನು ತಿರಸ್ಕರಿಸದಂತೆ ಬ್ಯಾಂಕ್ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕ ಅಧಿಕಾರಿ ರಾಹುಲ್ ಶಿಂಧೆ ಅವರು ತಿಳಿಸಿದರು.

ಪೊಲಿಸ್ ಕಮಿಷನರ ಭೂಷಣ ಗುಲಾಬರಾಬ್ ಬೊರಸೆ ಅವರು ಮಾತನಾಡಿ, ಜಿಲ್ಲೆಯಲ್ಲಿ ಮಾದಕ ವಸ್ತುಗಳ ಮಾರಾಟ, ಸುಗಮ ಸಂಚಾರ ವ್ಯವಸ್ಥೆ ಹಾಗೂ ಸರಗಳ್ಳತನ ಕುರಿತು ಹೆಚ್ಚಿನ ದೂರುಗಳು ಬರುತ್ತಿರುವ ಹಿನ್ನಲೆಯಲ್ಲಿ ಇವುಗಳ ಕುರಿತು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಸಮಿತಿ ಸದಸ್ಯರಾದ ಕರೆಪ್ಪ ಗುಡೇನ್ನವರ ಅವರು ಮಾತನಾಡಿ ಕೆಲ ಗ್ರಾಮಗಳಲ್ಲಿ ಸಾರ್ವಜನಿಕ ಸ್ಮಶಾನದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರಿಗೆ ಅಂತ್ಯಕ್ರಿಯೆಗೆ ಆಸ್ಪದೆ ನೀಡದೆ ಇರುವುದರಿಂದ ಸಮಸ್ಯೆಗಳು ಉಂಟಾಗುತ್ತಿವೆ ಎಂದು ಸಭೆಯ ಗಮನಕ್ಕೆ ತಂದರು. ಸರಕಾರಿ ಕಚೇರಿಗಳಲ್ಲಿ ಪ.ಜಾತಿ/ಪ.ಪಂಗಡದ ನೌಕರರಿಗೆ ಕಾರ್ಯ ಹಂಚಿಕೆಯಲ್ಲಿ ತಾರತಮ್ಯವಾಗುತ್ತಿರುವ ಕುರಿತು ಮಾತನಾಡಿ, ಪ್ರತಿ ಮಾಹೆ ಪೋಲಿಸ್ ಠಾಣೆಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸಮುದಾಯದವರೊಂದಿಗೆ ಸಭೆ ಜರುಗಿಸಲು ಸಭೆಗೆ ಮನವಿ ಮಾಡಿದರು.

ಸಮಿತಿ ಸದಸ್ಯರಾದ ಮಲ್ಲೇಶ ಚೌಗಲೆ ಅವರು ಮಾತನಾಡಿ ಮಳೆಗಾಲ ಪ್ರಾರಂಭವಾಗುತ್ತಿರುವ ಹಿನ್ನಲೆಯಲ್ಲಿ ಪೌರ ಕಾರ್ಮಿಕರಿಗೆ ಅಗತ್ಯವಿರುವ ರಕ್ಷಣಾ ಸಾಮಗ್ರಿಗಳನ್ನು ಪೂರೈಸಲು ಹಾಗೂ ಜಿಲ್ಲಾ ಆಸ್ಪತ್ರೆಯಲ್ಲಿ ಮಧ್ಯರಾತ್ರಿ ದಾಖಾಲಾಗುವ ಪರಿಶಿಷ್ಟ ಜಾತಿ, ಪ.ಪಂಗಡದ ಜನರಿಗೆ ಚಿಕಿತ್ಸೆ ನೀಡಲು ವಿಳಂಬ ಮಾಡುತ್ತಿರುವ ಕುರಿತು ಸಭೆಯ ಗಮನಕ್ಕೆ ತಂದರು. ಅಲ್ಲದೇ ಜಿಲ್ಲಾ ಆಸ್ಪತ್ರೆಯ ಸಿಬ್ಬಂದಿಗಳು ಆಸ್ಪತ್ರೆಗೆ ಆಗಮಿಸುವ ಸಾರ್ವಜನಿಕರೊಂದಿಗೆ ಸೌಜನ್ಯದೊಂದಿಗೆ ವರ್ತಿಸುವಂತೆ ಮನವಿ ಮಾಡಿದರು.

ಸಮಿತಿ ಸದಸ್ಯರಾದ ವಿಜಯ ತಳವಾರ ಮಾತನಾಡಿ ಬೆಳಗಾವಿ ಆರ್. ಪಿ.ಡಿ ವೃತ್ತದ ಬಳಿ ವೀರ ಮದಕರಿ ನಾಯಕರ ಪ್ರತಿಮೆ ಸ್ಥಾಪಿಸಲು ಕೋರಿ ಕಳೆದ 5 ವರ್ಷಗಳಿಂದ ದೌರ್ಜನ್ಯ ನಿಯಂತ್ರಣ ಸಮಿತಿ ಸಭೆಯಲ್ಲಿ ಚರ್ಚಿಸಲಾಗುತ್ತಿದೆ. ಈ ಕುರಿತು ಮಹಾನಗರ ಪಾಲಿಗೆ ಈಗಾಗಲೇ ನಿಯಮಾನುಸಾರ ಮನವಿ ಸಲ್ಲಿಸಲಾಗಿದೆ ಇದಕ್ಕೆ ಅನುಮತಿ ನೀಡಬೇಕು ಎಂದು ವಿನಂತಿ ಮಾಡಿಕೊಂಡರು.

ಸಭೆಯಲ್ಲಿ ಬಾಲ್ಯ ವಿವಾಹ ನಿಯಂತ್ರಣ, ಕಳ್ಳತನ,ಮಾದಕ ವಸ್ತುಗಳ ಮಾರಾಟ ನಿಯಂತ್ರಣ ಸೇರಿದಂತೆ ವಿವಿಧ ವಿಷಯಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಸಮಿತಿ ಸದಸ್ಯರುಗಳಾದ ಸಿದ್ದರಾಯ ಮೇತ್ರಿ, ಬಸಪ್ಪ ತಳವಾರ,ಜೀವನ ಮಾಂಜ್ರೇಕರ, ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿಗಳು, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶೃತಿ, ಪ್ರೊಬೇಷನರಿ ಐಎಎಸ್ ಅಧಿಕಾರಿ ಅಭಿನವ ಜೈನ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ರಾಮನಗೌಡ ಕನ್ನೊಳ್ಳಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಈಶ್ವರ ಗಡಾದ, ಆಹಾರ ಇಲಾಖೆ ಉಪ ನಿರ್ದೇಶಕ ಮಲ್ಲಿಕಾರ್ಜುನ್ ನಾಯಕ ಸೇರಿಯಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

***

## ಅಕ್ರಮ ಗಣಿಗಾರಿಕೆ ಕುರಿತು ಮುಖ್ಯಮಂತ್ರಿಗೆ ಪತ್ರ ಬರೆದ ಹೆಚ್‌ಕೆ ಪಾಟೀಲ್



ಬೆಂಗಳೂರು: ಅಕ್ರಮ ಗಣಿಗಾರಿಕೆ ಕುರಿತು ಸಿಎಂ ಸಿದ್ದರಾಮಯ್ಯಗೆ ಕಾನೂನು ಸಚಿವ ಹೆಚ್.ಕೆ.ಪಾಟೀಲ್ 7 ಪುಟಗಳ ಪತ್ರ ಬರೆದಿದ್ದು, ಈ ಸಂಬಂಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

ರಾಜಕಾ ರಣಿಗಳು, ಅಧಿಕಾರಶಾಹಿಗಳ ಅಕ್ರಮದಿಂದ ಈ ಹಿಂದೆ ಸಂಪತ್ತು ಲೂಟಿಯಾಗಿ 1.50 ಲಕ್ಷ ಕೋಟಿ ರೂ ಸರ್ಕಾರಕ್ಕೆ ನಷ್ಟವಾಗಿತ್ತು. 2017-18ರಲ್ಲಿ ನನ್ನ ಅಧ್ಯಕ್ಷತೆಯ ಉಪಸಮಿತಿಯಲ್ಲಿ ಇದನ್ನು ಬಹಿರಂಗಗೊಳಿಸಿತ್ತು ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಅಕ್ರಮ ಗಣಿಗಾರಿಕೆ ವಿರುದ್ಧ 320 ಕಿ.ಮೀ. ಪಾದಯಾತ್ರೆ ಮಾಡಲಾಗಿತ್ತು. ಆ ನಂತರ ಕೆಲ ಪ್ರಕರಣಗಳನ್ನು ತನಿಖಾ ಸಂಸ್ಥೆಗಳಿಗೆ ವಹಿಸಲಾಗಿತ್ತು. ಒಂದೆರಡು ಪ್ರಕರಣಗಳಲ್ಲಿ ಪ್ರಮುಖ ಅಪರಾಧಿಗಳಿಗೆ ಶಿಕ್ಷೆಯಾಗಿದ್ದರೆ, ಅನೇಕ ಪ್ರಕರಣಗಳು ಇನ್ನೂ ಎಸ್‌ಐಟಿ ವಿಚಾರಣೆ ಹಂತದಲ್ಲೇ ಇವೆ ಎಂದಿದ್ದಾರೆ.

ಅಕ್ರಮ ಗಣಿಗಾರಿಕೆಯ ಶೇ.7ರಷ್ಟು ಪ್ರಕರಣ ಮಾತ್ರ ತನಿಖೆಗೆ ಒಳಪಟ್ಟಿದೆ. ಆದರೆ ಶೇ.92ರಷ್ಟು ಪ್ರಕರಣಗಳು ತನಿಖೆಗೆ ಒಳಪಟ್ಟಿಲ್ಲ. ಅಧಿಕಾರಶಾಹಿಯ ಮನೋಭಾವದಿಂದ ಕೆಲ ಕೇಸ್ ತನಿಖೆ ಆಗಲೇ ಇಲ್ಲ. ಎಸ್‌ಐಟಿಗೆ ವಹಿಸಿದ ಪ್ರಕರಣಗಳಲ್ಲಿ ಪ್ರಗತಿಯೂ ಸಾಧಿಸಲಿಲ್ಲ. ಹೀಗಾಗಿ ಅಕ್ರಮ ಗಣಿಗಾರಿಕೆಗೆ ಸಂಬಂಧಿಸಿದಂತೆ ವಸೂಲಿ ಆಯುಕ್ತರ ನೇಮಿಸಬೇಕು. ಪೊಲೀಸ್ ಇಲಾಖೆಯಡಿ ವಿಶೇಷ ತನಿಖಾ ತಂಡ ರಚನೆ ಮಾಡಬೇಕು. ವಿಶೇಷ ನ್ಯಾಯಾಲಯ ಸ್ಥಾಪಿಸಿ ತಪ್ಪಿತಸ್ಥರಿಗೆ ಶಿಕ್ಷೆ ಆಗಬೇಕೆಂದು ಸಚಿವ ಹೆಚ್‌ಕೆ ಪಾಟೀಲ್ ಪತ್ರದಲ್ಲಿ ಒತ್ತಾಯಿಸಿದ್ದಾರೆ.

ಈ ಬಗ್ಗೆ ರಾಯಚೂರಿನಲ್ಲಿ ಪ್ರತಿಕ್ರಿಯಿಸಿರುವ ಸಚಿವ ಹೆಚ್.ಕೆ.ಪಾಟೀಲ್, ರಾಜ್ಯದ ಸೇವೆ ಆಗಬೇಕು. ನಮ್ಮ ಸರ್ಕಾರಕ್ಕೆ ಒಳ್ಳೆಯ ಹೆಸರು ಬೇಕು ಅನ್ನೋ ಕಾರಣಕ್ಕೆ ಪತ್ರ ಬರೆದಿದ್ದೇನೆ. ಸಿಎಂಗೆ ಈಗಾಗಲೇ ಪತ್ರ ತೋರಿಸಿದ್ದೇನೆ ಅವರು ಗಂಭೀರವಾಗಿ ತೆಗೆದುಕೊಂಡಿದ್ದಾರೆ ಎಂದರು.

12 ಸಾವಿರಕ್ಕೂ ಹೆಚ್ಚು ಪ್ರಕರಣ ದಾಖಲಾಗಿದ್ದರೂ ಅದರಲ್ಲಿ ಕೇವಲ ಶೇಕಡ 7 ತನಿಖೆಯಾಗುತ್ತಿವೆ. 7ರಲ್ಲಿ 2% ಅಂದರೆ ಒಟ್ಟು ಪ್ರಕರಣದಲ್ಲಿ 0.2% ತೀರ್ಪು ಬಂದಿವೆ. ಅದಕ್ಕೆ ತಾರ್ಕಿಕ ಅಂತ್ಯ ಕೊಡಬೇಕಿದೆ. ಸರ್ಕಾರದ ಹಣ, ರಾಜ್ಯದ ಹಣ 1 ಲಕ್ಷ 40 ಸಾವಿರ ಕೋಟಿ ರೂ ಆಗಿದೆ. ಸಿಬಿಐ ಅವರಿಗೆ ನಾವು 9 ಪ್ರಕರಣ ವಹಿಸಿದ್ದೇವೆ. ಅದರಲ್ಲಿ 3 ಪ್ರಕರಣ ಬಿಟ್ಟು 6 ಪ್ರಕರಣ ನಾವು ಮಾಡಲ್ಲ ಅಂತ ಕಳುಹಿಸಿದ್ದಾರೆ. ಎಸ್‌ಐಟಿನಲ್ಲಿ ಬಹುಭಾಗ ಪ್ರಕರಣಗಳು ತನಿಖೆಯಾಗಿಲ್ಲ. ಆ ಉದ್ದೇಶದಿಂದ ಸಿಎಂಗೆ ಪತ್ರ ಬರೆದಿದ್ದೇನೆ ಎಂದಿದ್ದಾರೆ.

ನಾವು 15 ವರ್ಷದ ಹಿಂದೆ ಪಾದಯಾತ್ರೆ ಮಾಡಿದ್ದೇವೆ. ಇಷ್ಟು ವರ್ಷ ಆದ ಮೇಲೂ ಮತ್ತೆ ನಾವೇ 2013 ರಿಂದ 2018 ರೊಳಗ ಸಿದ್ದರಾಮಯ್ಯ ಅವರೇ ಕ್ಯಾಬಿನೆಟ್ ಸಬ್ ಕಮಿಟಿ ಮಾಡಿದ್ದರು. ಕಮಿಟಿಯಲ್ಲಿ ಲೋಕಾಯುಕ್ತರು ಏನು ಮಾಡಿದ್ದರಲ್ಲಾ ಅದು ಅಲ್ಲದೆ, ಅದರ ಮುಂದಿನ ಅವಧಿಯೊಳಗಿನ ಹಾನಿ ಯಾವ ಪ್ರಮಾಣದ್ದು ಅಂತ ನಾವು ಎತ್ತಿ ಹಿಡಿದಿದ್ವಿ ಎಂದು ಹೇಳಿದ್ದಾರೆ.

## ಜಿಲ್ಲಾಸ್ಪತ್ರೆ, ಆರೋಗ್ಯ ಕೇಂದ್ರಗಳಲ್ಲಿ ಯೋಗ ಮಂದಿರ ಸ್ಥಾಪನೆ: ದಿನೇಶ್ ಗುಂಡೂರಾವ್

ಬೆಂಗಳೂರು: ರಾಜ್ಯದಲ್ಲಿ ಹೆಚ್ಚಿನ ಜನರಿಗೆ ಯೋಗ ಪರಿಚಯಿಸುವ ನಿಟ್ಟಿನಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ 'ಯೋಗ ಮಂದಿರ'ಗಳನ್ನು ಸ್ಥಾಪಿಸುವುದಾಗಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಬೆಂಗಳೂರಿನ ವಿಧಾನ ಸೌಧದಲ್ಲಿ ಇಂದು 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಪಾಲ್ಗೊಂಡು ಸಚಿವರು ಮಾತನಾಡುತ್ತಿದ್ದರು.

ವಿಶ್ವ ಮಟ್ಟದಲ್ಲಿ ಮನ್ನಣೆ ಪಡೆದಿರುವ ಯೋಗವನ್ನು ನಾವು ಹೆಚ್ಚಿನ ಜನರಿಗೆ ಪರಿಚಯಿಸಬೇಕಾಗಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಹಲವು ಕಾರ್ಯಕ್ರಮಗಳನ್ನ ಹಾಕಿಕೊಳ್ಳುತ್ತಿದೆ. ರಾಜ್ಯದ ಎಲ್ಲ ಜಿಲ್ಲಾಸ್ಪತ್ರೆಗಳು, ತಾಲೂಕು ಆಸ್ಪತ್ರೆಗಳು ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಯೋಗ ಪರಿಚಯಿಸುವ 'ಯೋಗ ಮಂದಿರ'ಗಳನ್ನ ಪ್ರಾರಂಭಿಸುವುದಾಗಿ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಮೈಸೂರು ಜಿಲ್ಲೆಯನ್ನು ಯೋಗ ಜಿಲ್ಲೆಯನ್ನಾಗಿ ನಿರ್ಮಿಸುವತ್ತ ಈಗಾಗಲೇ ಯೋಜನೆ ರೂಪಿಸಲಾಗಿದೆ. ಈ ಬಗ್ಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದೇವೆ. ಮೈಸೂರು ಜಿಲ್ಲೆಯ ಪ್ರತೀ ಮನೆಗಳಲ್ಲಿ ಒಬ್ಬರಾದರೂ ಯೋಗಭ್ಯಾಸ ನಡೆಸುವ ರೀತಿಯಲ್ಲಿ ವ್ಯವಸ್ಥೆ ಕಲ್ಪಿಸಲು ಗುರಿ ಹೊಂದಲಾಗಿದೆ. ದೇಶದಲ್ಲೇ ಪ್ರಥಮ ಬಾರಿಗೆ ರಾಜ್ಯದಲ್ಲಿ ಒಂದು ಜಿಲ್ಲೆಯನ್ನು ಸಂಪೂರ್ಣವಾಗಿ ಯೋಗ ಜಿಲ್ಲೆಯನ್ನಾಗಿ ರೂಪಿಸುವತ್ತ ಹೆಜ್ಜೆ ಇಟ್ಟಿದ್ದೇವೆ. ರಾಜ್ಯದಲ್ಲಿ ಪರಂಪರಾಗತವಾಗಿ ಬಂದ ಅಷ್ಟಾಂಗ ಯೋಗಕ್ಕೆ ಹೆಚ್ಚಿನ ಒತ್ತು ನೀಡಲಾಗುವುದು ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

## ದೇಶದಲ್ಲಿ ಭ್ರಷ್ಟಾಚಾರ ಇಲ್ಲ ಎನ್ನಲಾಗದು, ಅದನ್ನು ನಿಯಂತ್ರಿಸುವ ಕೆಲಸಗಳಾಗಬೇಕು: ಸಚಿವ ದಿನೇಶ್ ಗುಂಡೂರಾವ್

ಬೆಂಗಳೂರು: ನಮ್ಮ ದೇಶದಲ್ಲಿ ಭ್ರಷ್ಟಾಚಾರ ಇಲ್ಲ ಎಂದು ಹೇಳಲು ಸಾಧ್ಯವಿಲ್ಲ. ಕೇಂದ್ರ ಸರ್ಕಾರದಲ್ಲೂ ಭ್ರಷ್ಟಾಚಾರವಿದೆ. ಎಷ್ಟೋ ಐಟಿ, ಇ.ಡಿ ಇಲಾಖೆಗಳ ಅಧಿಕಾರಿಗಳೂ ಭ್ರಷ್ಟರಿದ್ದಾರೆ. ಇದು ವಸ್ತುಸ್ಥಿತಿ, ಭ್ರಷ್ಟಾಚಾರವನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಕೆಲಸಗಳಾಗಬೇಕು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅಭಿಪ್ರಾಯಪಟ್ಟರು.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಲಂಚ ನೀಡಿದವರಿಗೆ ಮಾತ್ರ ಮನೆಗಳನ್ನು ಹಂಚಿಕೆ ಮಾಡಲಾಗುತ್ತಿದೆ ಎಂಬ ಕಾಂಗ್ರೆಸ್ ಶಾಸಕ ಬಿ.ಆರ್. ಪಾಟೀಲ್ ಅವರದ್ದು ಎನ್ನಲಾದ ಆಡಿಯೋ ವೈರಲ್ ಬಗ್ಗೆ ಪ್ರತಿಕ್ರಿಯಿಸಿ, "ಇದರ ಬಗ್ಗೆ ಬಿ.ಆರ್. ಪಾಟೀಲ್ ಅವರನ್ನೇ ಕೇಳಬೇಕು. ನನ್ನ ಗಮನದಲ್ಲಿ ಇಲ್ಲ. ಅವರು ಸ್ಪಷ್ಟ ಮಾಹಿತಿ ನೀಡಿದರೆ ಖಂಡಿತ ಕ್ರಮ ಕೈಗೊಳ್ಳುತ್ತೇವೆ. ನಮ್ಮ ದೇಶದಲ್ಲಿ ಭ್ರಷ್ಟಾಚಾರ ಇದೆ, ಅದನ್ನು ತಡೆಯುವ ಕೆಲಸವಾಗಬೇಕು.



ಅದನ್ನು ಬಿಟ್ಟು ಏನೋ ಒಂದು ಆರೋಪ ಮಾಡಿ, ಅಷ್ಟಕ್ಕೆ ನಿಲ್ಲುವುದು ಸರಿಯಲ್ಲ. ಭ್ರಷ್ಟಾಚಾರವನ್ನು ಹೋಗಲಾಡಿಸುವ ಕೆಲಸ ಆಗಬೇಕು. ಯಾರೇ ಆದರೂ, ಯಾವುದೇ ಇಲಾಖೆಯಾದರೂ ಕ್ರಮ ಕೈಗೊಳ್ಳಬೇಕು" ಎಂದು ಹೇಳಿದರು.

ಸಾರ್ವಜನಿಕ ಕಾರ್ಯಕ್ರಮದಲ್ಲಿ ರಾಜಕೀಯ ಮಾತನಾಡಬಾರದೆಂದು ಚಿಂತಕ ಚಕ್ರವರ್ತಿ ಸೂಲಿಬೆಲೆಯವರಿಗೆ ಕುಂದಾಪುರ ಠಾಣೆ ಪೊಲೀಸರಿಂದ ನೋಟಿಸ್ ಜಾರಿಯಾಗಿರುವುದರ ಕುರಿತು ಮಾತನಾಡಿ, "ದ್ವೇಷ ಭಾಷಣ ಯಾರು ಮಾಡಿದರೂ ನೋಟಿಸ್ ಜಾರಿಯಾಗೇ ಆಗುತ್ತದೆ. ಭಾಷಣ ಸರಿಯಾಗಿದ್ದರೆ, ಯಾಕೆ ನೋಟಿಸ್ ಜಾರಿಯಾಗುತ್ತದೆ?" ಎಂದು ಪ್ರಶ್ನಿಸಿದರು.

"ನಾನಾದರೂ ಸರಿ, ಯಾರೇ ಆದರೂ ಸರಿ, ದ್ವೇಷ ಭಾಷಣವನ್ನು ಯಾರೇ ಮಾಡಿದರೂ ನೋಟಿಸ್ ಜಾರಿ ಆಗುತ್ತದೆ. ರಾಹುಲ್ ಗಾಂಧಿಯವರು ಯಾವ ದ್ವೇಷ ಭಾಷಣ ಮಾಡಿದ್ದರು ಎಂದು ಅವರನ್ನು ಟಾರ್ಗೆಟ್ ಮಾಡಿ ಪ್ರಕರಣ ದಾಖಲಿಸಲಾಗಿತ್ತು?" ಎಂದು ಸಚಿವರು ಪ್ರಶ್ನೆ ಮಾಡಿದರು.

*****

## ಮತ್ತೆ ಪಂಚಮಸಾಲಿ ಹೋರಾಟದ ಎಚ್ಚರಿಕೆ ನೀಡಿದ ಸ್ವಾಮೀಜಿ

ಬೆಳಗಾವಿ: ಕೆಲ ದಿನಗಳಿಂದ ತಣ್ಣಗಾಗಿದ್ದ ಮೀಸಲಾತಿ ಹೋರಾಟ ಇದೀಗ ಮತ್ತೆ ಶುರುವಾಗುವ ಲಕ್ಷಣಗಳು ಕಾಣುತ್ತಿವೆ. ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿಗೆ ಒತ್ತಾಯಿಸಿ ಮತ್ತೆ ಹೋರಾಟ ಮಾಡುತ್ತೇವೆ ಎಂದು ಕೂಡಲಸಂಗಮ ಪೀಠದ ಬಸವ ಜಯಮೃತ್ಯುಂಜಯ ಸ್ವಾಮೀಜಿ ಘೋಷಿಸಿದ್ದಾರೆ.

ಬೆಳಗಾವಿಯಲ್ಲಿ ಮಾತನಾಡಿದ ಬಸವ ಜಯಮೃತುಂಜಯ ಸ್ವಾಮೀಜಿ, ಸೋಮವಾರ ಉಳವಿಯಲ್ಲಿ ಹೋರಾಟದ ಬಗ್ಗೆ ರಾಜ್ಯಮಟ್ಟದ ಸಂಕಲ್ಪ ಮಾಡುತ್ತೇವೆ. ಜೂನ್ 24ರಂದು ಸಾಮೂಹಿಕ ಇಷ್ಟಲಿಂಗ ಪೂಜೆ ಮೂಲಕ ಎರಡನೇ ಬಾರಿ ಹೋರಾಟದ ಸಂಕಲ್ಪ ಮಾಡುತ್ತೇವೆ ಎಂದರು.

ಹೋರಾಟ ಎಲ್ಲಿಂದ ಆರಂಭವಾಗಲಿದೆ ಎಂಬುದನ್ನು ಅಂದೇ ತೀರ್ಮಾನಿಸುತ್ತೇವೆ. ಮೀಸಲಾತಿ ಆದೇಶ ಪತ್ರ ಸಿಗುವವರೆಗೂ ಹೋರಾಟ ನಿಲ್ಲಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದರು.



## ಜಾತಿಗಣತಿ ಮರು ಸಮೀಕ್ಷೆ : ಶಾಲಾ ಶಿಕ್ಷಕರ ಬಳಕೆ ಇಲ್ಲ : ಸಚಿವ ಮಧು ಬಂಗಾರಪ್ಪ

ಶಿವಮೊಗ್ಗ: ರಾಜ್ಯ ಸರಕಾರ ಮತ್ತೊಮ್ಮೆ ನಡೆಸಲಿರುವ ಸಾಮಾಜಿಕ ಮತ್ತು ಶೈಕ್ಷಣಿಕ, ಆರ್ಥಿಕ ಸಮೀಕ್ಷೆಗೆ ಸರಕಾರಿ ಶಾಲಾ ಶಿಕ್ಷಕರನ್ನು ಬಳಕೆ ಮಾಡುವುದಿಲ್ಲ, ಬದಲಿಗೆ ಹೊರಗುತ್ತಿಗೆ ನೀಡಲು ಯೋಚಿಸಲಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಶಿವಮೊಗ್ಗದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮೀಕ್ಷೆ ಕಾರ್ಯಕ್ಕೆ ಶಿಕ್ಷಕರನ್ನು ನಿಯೋಜಿಸಿದರೆ ವಾರಗಟ್ಟಲೇ ಶಾಲೆಗಳಲ್ಲಿ ಮಕ್ಕಳಿಗೆ ಪಾಠ ಪ್ರವಚನಕ್ಕೆ ತೊಂದರೆಯಾಗಲಿದೆ ಎಂಬುದನ್ನು ಸರಕಾರಕ್ಕೆ ಸ್ಪಷ್ಟಪಡಿಸಿದ್ದೇನೆ. ಹೀಗಾಗಿ ಶಿಕ್ಷಕರ ಬಳಕೆ ಮಾಡುತ್ತಿಲ್ಲ ಎಂದು ಸ್ಪಷ್ಟಪಡಿಸಿದರು.

ಎಐಸಿಸಿ ನಾಯಕ ರಾಹುಲ್ ಗಾಂಧಿ ಹಾಗೂ ಜನಾಭಿಪ್ರಾಯದ ಒತ್ತಡಕ್ಕೆ ಮಣಿದಿರುವ ಕೇಂದ್ರ ಸರಕಾರ ಜಾತಿ ಸಮೀಕ್ಷೆಗೆ ಮುಂದಾಗಿದೆ. ಬಿಜೆಪಿ ರಾಜಕೀಯ ಲಾಭದ ಆಶಯದೊದಿಗೆ ಈ ಸಮೀಕ್ಷೆ ನಡೆಸಲಿದೆ. ಆದರೆ, ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಸಂವಿಧಾನತ್ತ ಅವಕಾಶಗಳು ರಾಜ್ಯದ ಕಟ್ಟೆಕಡೆಯ ಮನುಷ್ಯನಿಗೂ ದೊರೆಯಬೇಕು ಎಂಬ ಆಶಯದೊಂದಿಗೆ ಮತ್ತೊಮೆ ಜಾತಿಗಣತಿಗೆ ಮುಂದಾಗಿದೆ. ಹೀಗಾಗಿ ರಾಜ್ಯದ ಜಾತಿಗಣತಿಯೇ ಹೆಚ್ಚು ನಿಖರ, ಸ್ಪಷ್ಟ ಹಾಗೂ ವಿಶ್ವಾಸಾರ್ಹ ಎಂದರು.

ಶರಾವತಿ ಮುಳುಗಡೆ ಸಂತ್ರಸ್ಥರಿಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಎಲ್ಲಾ ಪ್ರಯತ್ನಗಳು ನಡೆದಿವೆ. ಈಗಾಗಲೇ ಶೇ.75 ರಷ್ಟು ಕೆಲಸ ಆಗಿದೆ. ಈಗ ಕೋರ್ಟ್ ನಲ್ಲಿ ಎಲ್ಲವೂ ಇತ್ಯರ್ಥವಾಗಬೇಕಿದೆ. ಬ್ಲಾಕ್ ಸಮಸ್ಯೆ ಸೇರಿದಂತೆ ಯಾವುದೇ ಅಹವಾಲು ಇದ್ದರೆ ಸಂತ್ರಸ್ಥರು ತಮ್ಮ ಅಹವಾಲುಗಳನ್ನು ಜಿಲ್ಲಾಧಿಕಾರಿಗಳಿಗೆ ನೀಡಬೇಕು, ಅವು ಸರಕಾರಕ್ಕೆ ಸಲ್ಲಿಕೆಯಾಗಿ ಅಲ್ಲಿಂದ ಕೋರ್ಟ್ ತಲುಪಲಿವೆ ಎಂದರು.

ಶರಾವತಿ ಸಂತ್ರಸ್ಥರಿಗೆ ಭೂಮಿ ಹಕ್ಕು ಸಮಸ್ಯೆಗೆ ಶಾಶ್ವತ ಪರಿಹಾರ ನೀಡಬೇಕೆನ್ನುವ ವಿಚಾರದಲ್ಲಿ ನಮ್ಮ ಸರಕಾರ ಬದ್ಧವಾಗಿದೆ. ಇದು ತುಂಬಾ ಹಿಂದಿನ ಸಮಸ್ಯೆ. ಕಾಗೋಡು ತಿಮ್ಮಪ್ಪ ಅವರು ಒಂದು ಹಂತದಲ್ಲಿ ಹೋರಾಟ ನಡೆಸಿ, ಸಂತ್ರಸ್ಥರಿಗೆ ಭೂಮಿಹಕ್ಕು ನೀಡುವ ವಿಚಾರಕ್ಕೆ ಕಾನೂನು ರೂಪ ನೀಡುವ ಹಂತದಲ್ಲಿ ಅದಕ್ಕೆ ಅಡ್ಡವಾಗಿದ್ದೇ ಬಿಜೆಪಿಯವರು. ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿಯಾಗಿದ್ದಾಗ ಅದನ್ನು ಹಾಳುಮಾಡಿದರು. ಶರಾವತಿ ಸಂತ್ರಸ್ಥರ ಸಮಸ್ಯೆ ಬಿಜೆಪಿಯ ಪಾಪದ ಕೂಸು. ಅದನ್ನು ಸರಿಪಡಿಸುವ ಕೆಲಸವನ್ನು ಕಾಂಗ್ರೆಸ್ ಸರಕಾರ ಮಾಡುತ್ತಿದೆ ಎಂದರು.

ರಾಜ್ಯದಲ್ಲಿ ಕರ್ನಾಟಕ ಪಬ್ಲಿಕ್ ಸ್ಕೂಲ್ ಗಳಿಗೆ ಬೇಡಿಕೆ ಹೆಚ್ಚಾಗಿದೆ. ಹಾಗಾಗಿ ಇಲ್ಲಿ ನಮಕ್ಕಳ ಪ್ರವೇಶಾತಿ ಸಂಖ್ಯೆಯನ್ನು 30 ರಿಂದ 50ಕ್ಕೆ ಹೆಚ್ಚಿಸಲಾಗಿದೆ. ಹಾಗೆಯೇ ಪ್ರತಿವಿಧಾನ ಸಭಾ ಕ್ಷೇತ್ರದಲ್ಲೂ ಕನಿಷ್ಠ 2 ರಿಂದ 3 ಕರ್ನಾಟಕ ಪಬ್ಲಿಕ್ ಸ್ಕೂಲ್ ಪ್ರಾರಂಭಿಸಲು ಉದ್ದೇಶಿಸಲಾಗಿದೆ. ಮುಂದೆ ಈ ಸಂಖ್ಯೆ ಹೆಚ್ಚಾಗಬಹುದು. ಆದರೂ ಸರಕಾರಿ ಶಾಲೆಗಳಿಗೆ ದಕ್ಕೆಯಾಗದಂತೆ ಸಮತೋಲನ ಕಾಯ್ದುಕೊಳ್ಳಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಕೆ.ಪಿ.ಶ್ರೀಪಾಲ್, ಜಿ.ಡಿ. ಮಂಜುನಾಥ್, ಶ್ವೇತಾ ಬಂಡಿ, ಆದರ್ಶ್ ಹುಂಚದಕಟ್ಟೆ, ತೇಜಪ್ಪ, ರವಿ ಎಂ.ಡಿ ಇದ್ದರು.

## ಪ್ರತಿಭೆ ಅಂದರೆ ಪರೀಕ್ಷೆ ಫಲಿತಾಂಶ ಅಲ್ಲ : ಶ್ರಮ-ಸಾಧನೆಯ ಮಿಶ್ರಣ
## ವಿದ್ಯಾರ್ಥಿಗಳಲ್ಲಿ ಜ್ಞಾನ ದಾಹ, ವಿವೇಕದ ಹಸಿವು ಜ್ವರದಂತೆ ಕಾಡಬೇಕು

ಮಲೆಮಹದೇಶ್ವರ ಬೆಟ್ಟ/ಬೆಂಗಳೂರು: ಕಲಿಯುವ ವಯಸ್ಸಿನಲ್ಲಿ ವಿದ್ಯಾರ್ಥಿಗಳಲ್ಲಿ ಜ್ಞಾನದ ದಾಹ ಮತ್ತು ಕಲಿಕೆಯ ಹಂಬಲ ಜ್ವರದಂತೆ ಕಾಡಬೇಕು. ಪ್ರತಿಭೆ ಅಂದರೆ ಕೇವಲ ಪರೀಕ್ಷಾ ಫಲಿತಾಂಶ ಅಲ್ಲ. ಜ್ಞಾನ ಮತ್ತು ನಿರಂತರ ಸಾಧನೆ ಮತ್ತು ನೀವು ಪಟ್ಟ ಪರಿಶ್ರಮ ಮೂರೂ ಬೆರೆತ ಮಿಶ್ರಣ. ಇಂದು ಪ್ರತಿಭಾ ಪುರಸ್ಕಾರ ಸ್ವೀಕರಿಸುತ್ತಿರುವ ಎಲ್ಲಾ ಮಕ್ಕಳಿಗೂ ಎಲ್ಲಾ ಪೋಷಕರ ಪರವಾಗಿ ನಾನು ಅಭಿನಂದನೆ ಸಲ್ಲಿಸುತ್ತೇನೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್ ತಿಳಿಸಿದರು.

ನಗರದಲ್ಲಿ ಕರ್ನಾಟಕ ರಾಜ್ಯ ಪತ್ರಕರ್ತರ ಸಂಘದ ವತಿಯಿಂದ ಶನಿವಾರದಂದು ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿಯಲ್ಲಿ ಸಾಧನೆ ಮಾಡಿದ ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ವಿತರಿಸಿ ಅವರು ಮಾತನಾಡಿದರು.

ಇವತ್ತು ಶಿಕ್ಷಣ ವ್ಯವಸ್ಥೆ ಹೇಗಾಗಿದೆ, ಎಷ್ಟು ದುಬಾರಿ ಆಗಿದೆ ಎಂದರೆ, ಪೋಷಕರು ಸದಾ ಮಕ್ಕಳ ಶಿಕ್ಷಣದ ಬಗ್ಗೆಯೇ ಯೋಚಿಸುವಂತಾಗಿದೆ. ಮಕ್ಕಳ ಶಿಕ್ಷಣ ಮತ್ತು ಭವಿಷ್ಯಕ್ಕಾಗಿ ಪೋಷಕರು ತಮ್ಮ ಅಗತ್ಯ ಮತ್ತು ಅನುಕೂಲಗಳ ಜೊತೆ ರಾಜಿ ಮಾಡಿಕೊಳ್ಳುತ್ತಾರೆ. ಪೋಷಕರ ಈ ತಪಸ್ಸಿಗೆ ಸಾರ್ಥಕತೆ ಬರುವುದು ಅವರ ಮಕ್ಕಳು ಸಾಧನೆ ಮಾಡಿದಾಗ, ಮಕ್ಕಳ ಪ್ರತಿಭಾ ಪುರಸ್ಕಾರವನ್ನು ಕಣ್ಣಲ್ಲಿ ಕಾಣುವ ಪೋಷಕರಿಗೆ ಇದಕ್ಕಿಂತ ದೊಡ್ಡ ಸಮಾಧಾನ ಬೇರೆ ಇರುವುದಿಲ್ಲ. ಜೊತೆಗೆ ಮಕ್ಕಳು ಪರಿಶ್ರಮದಿಂದ ಕಲಿತರೆ ಪೋಷಕರ ಮೇಲಿನ ಆರ್ಥಿಕ ಹೊರೆಯೂ



ಕಡಿಮೆ ಆಗುತ್ತದೆ. ಆರ್ಥಿಕ ಹೊರೆ ಕಡಿಮೆ ಇದ್ದಾಗ ಸಹಜವಾಗಿ ಪೋಷಕರ ಆರೋಗ್ಯ ಮತ್ತು ಮನೆಯ ಆರೋಗ್ಯವೂ ಚೆನ್ನಾಗಿರುತ್ತದೆ. ಹೀಗಾಗಿ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ದಾಟಿದ ನಿಮ್ಮಗಳ ಮೇಲೆ ಪೋಷಕರನ್ನು ಖುಷಿಯಾಗಿಡುವ ಜವಾಬ್ದಾರಿ ಇರುತ್ತದೆ. ನಿಮ್ಮ ಪರಿಶ್ರಮ ಮತ್ತು ಜ್ಞಾನದಾಹ ಹಾಗೂ ಕಲಿಕೆಯ ಹಸಿವು ಹೆಚ್ಚಾಗಬೇಕು. ಈ ದಾಹ ಮತ್ತು ಹಸಿವು ನಿಮಗೆ ಜ್ವರದಂತೆ ಕಾಡಬೇಕು.

ಇಲ್ಲಿ ಪ್ರತಿಭಾ ಸ್ವೀಕಾರಕ್ಕೆ ಬಂದಿರುವ ಮಕ್ಕಳ ಜೊತೆ ಎರಡು ವಿಚಾರಗಳನ್ನು ಹಂಚಿಕೊಳ್ಳಲು ಬಯಸುತ್ತೇನೆ.

ಒಂದು, ನಮ್ಮ ಎಲ್ಲಾ ಸಾಧನೆಗಳಿಗೂ ನಾವು ಬದುಕುತ್ತಿರುವ ಸಮಾಜದ ಕೊಡುಗೆ ಇರುತ್ತದೆ. ಸಮಾಜ ಎಂದರೆ ಶರೀರ ಇದ್ದ ಹಾಗೆ. ನಾವು ಈ ಶರೀರದೊಳಗೆ ಬದುಕುತ್ತಿದ್ದೇವೆ. ನಾವು ಇರುವ ಶರೀರವನ್ನು ಕಟ್ಟುಮಸ್ತಾಗಿ, ಆರೋಗ್ಯಕರವಾಗಿ, ಆನಂದಮಯವಾಗಿ ಇಟ್ಟುಕೊಳ್ಳುವುದೇ ನಮ್ಮ ಪ್ರತಿಭೆಗೆ, ನಮ್ಮ ಸಾಧನೆಗೆ ಸಿಗುವ ನಿಜವಾದ ಪುರಸ್ಕಾರ ಎಂದು ಭಾವಿಸುತ್ತೇನೆ.

ಎರಡು, ಇಂದು ಸಮಾಜದಲ್ಲಿ ಭ್ರಷ್ಟಾಚಾರ ಇರುವುದಕ್ಕೆ ಮುಖ್ಯ ಕಾರಣ ಆರೋಗ್ಯ ಮತ್ತು ಶಿಕ್ಷಣ ಅತ್ಯಂತ ದುಬಾರಿ ಆಗಿರುವುದೇ ಕಾರಣ ಆಗಿದೆ. ಮಕ್ಕಳ ಓದಿನ ಖರ್ಚು, ಹಿರಿಯರ ಆಸ್ಪತ್ರೆ ಖರ್ಚು ನಮ್ಮ ನಿದ್ದೆಗೆಡಿಸುತ್ತದೆ. ಸಮಾಜದಲ್ಲಿ ಇದು ಬದಲಾಗಬೇಕು. ಈ ಬದಲಾವಣೆಗೆ ಪೂರಕವಾಗಿ ನೀವುಗಳು ವಿದ್ಯಾರ್ಥಿ ಜೀವನದಿಂದಲೇ ಯೋಚಿಸಬೇಕು. ನಾವು ಬದುಕುತ್ತಿರುವ ಸಮಾಜವೆಂಬ ಈ ಶರೀರ ಇನ್ನಷ್ಟು ಆನಂದವಾಗಿರಲು, ಇನ್ನಷ್ಟು ಆರೋಗ್ಯಕರವಾಗಿರಲು ನಾವೇನು ಮಾಡಬೇಕು ಎನ್ನುವ ದಿಕ್ಕಿನಲ್ಲಿ ಸದಾ ಚಿಂತನಾಶೀಲರಾಗಿರಬೇಕು. ಈ ಚಿಂತನಶೀಲತೆ ನಮ್ಮ ಜ್ಞಾನ ದಾಹ ಮತ್ತು ವಿವೇಕದ ಹಸಿವನ್ನು ಹೆಚ್ಚಿಸುತ್ತದೆ.

ಈ ಎರಡು ಸಂಗತಿಗಳನ್ನು ಮಕ್ಕಳ ಜೊತೆ ಹಂಚಿಕೊಳ್ಳುವುಕ್ಕಾಗಿ ಮತ್ತು ಪೋಷಕರನ್ನು ವೃದ್ಧಾಶ್ರಮಗಳಿಗೆ ಕಳುಹಿಸದಂತೆ ನಾವು ಜವಾಬ್ದಾರರಾಗಬೇಕು ಎನ್ನುವ ನನ್ನ ಕೋರಿಕೆಗಳನ್ನು ನಿಮ್ಮ ಮುಂದೆ ಇಡಲು ನಾನು ಇಲ್ಲಿಗೆ ಬಂದಿದ್ದೇನೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಸತತ ಐದನೇ ವರ್ಷ ಈ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಆಯೋಜಿಸಿದೆ. ಇದಕ್ಕಾಗಿ ಸಂಘದ ಅಧ್ಯಕ್ಷರಾದ ಶಿವಾನಂದ ತಗಡೂರು ಮತ್ತು ಪದಾಧಿಕಾರಿಗಳನ್ನೂ ನಾನು ಅಭಿನಂದಿಸುತ್ತೇನೆ ಎಂದರು.

## ಆರೋಗ್ಯಕರ ಜೀವನಕ್ಕೆ ಯೋಗಾಭ್ಯಾಸ ಸಹಕಾರಿ

ಬೆಳಗಾವಿ, ಯೋಗ ಅಭ್ಯಾಸ ಸಾವಿರಾರು ವರ್ಷಗಳಿಂದ ಪಾಲಿಸುತ್ತಿರುವ ಆರೋಗ್ಯ ಸುಧಾರಣಾ ಕ್ರಮವಾಗಿದೆ. ಯೋಗದಿಂದ ಶಾರೀರಿಕ, ಮಾನಸಿಕ ಸ್ಥಿರತೆ ಕಾಯ್ದುಕೊಳ್ಳಬಹುದು. ಜೀವನ ಶೈಲಿಯಲ್ಲಿ ಯೋಗವನ್ನು ಅಳವಡಿಸುವ ಮೂಲಕ ಆರೋಗ್ಯಕರ ಜೀವನ ರೂಪಿಸಿಕೊಳ್ಳಬಹುದು ಎಂದು ಸಂಸದ ಜಗದೀಶ್ ಶೆಟ್ಟರ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಜಿಲ್ಲಾ ಆಯುಷ್ ಇಲಾಖೆ ಹಾಗೂ ಇತರೆ ಇಲಾಖೆಯ ಸಹಯೋಗದಲ್ಲಿ ಶನಿವಾರ (ಜೂ.21) ಸುವರ್ಣ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ನಡೆದ "11 ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ" ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈ ಬಾರಿ "ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ" ಘೋಷವಾಕ್ಯದೊಂದಿಗೆ ಪ್ರತಿಯೊಬ್ಬರಿಗೂ ಆರೋಗ್ಯ ಬಹು ಮುಖ್ಯ ಎಂಬ ಸಂದೇಶ ಸಾರುವ ನಿಟ್ಟಿನಲ್ಲಿ ಯೋಗ ದಿನಾಚರಣೆಯನ್ನು ಆಚರಿಸಲಾಗುತ್ತಿದೆ ಎಂದು ಹೇಳಿದರು.

ಇಡೀ ವಿಶ್ವದಾದ್ಯಂತ ಯೋಗ ದಿನಾಚರಣೆ ಆಚರಿಲಾಗುತ್ತಿದೆ. 2014 ರಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಯೋಗ ದಿನಾಚರಣೆ ಜಾರಿಗೆ ತಂದರು. ಜಗತ್ತಿನ ಎಲ್ಲ ರಾಷ್ಟ್ರದಲ್ಲಿಯಲ್ಲಿ ಯೋಗ ದಿನಾಚರಣೆಯಲ್ಲಿ ಜನರು ಪಾಲ್ಗೊಳ್ಳುತ್ತಿದ್ದಾರೆ. ಆರೋಗ್ಯದಲ್ಲಿ ಉತ್ತಮ ಬದಲಾವಣೆ ತರುವ ನಿಟ್ಟಿನಲ್ಲಿ ಇಡೀ ಜಗತ್ತಿಗೆ ಯೋಗದ ಮಹತ್ವ ತಿಳಿಯಲಾಗಿದೆ ಎಂದು ಹೇಳಿದವರು.

ಯೋಗವು ಋಷಿಮುನಿಗಳ ಕಾಲದಿಂದಲೂ ಇತಿಹಾಸ ಹೊಂದಿದೆ. ಇದು ವೈದಿಕ ಕಾಲದಿಂದಲೂ ಬೆಳೆದುಬಂದಿದೆ, ಋಗ್ವೇದ ಮತ್ತು ಉಪನಿಷತ್ತುಗಳಲ್ಲಿ ಯೋಗಾಭ್ಯಾಸ ಉಲ್ಲೇಖಿಸಲಾಗಿದೆ.

ಯೋಗಾಭ್ಯಾಸದಿಂದ ಆರೋಗ್ಯ, ಮಾನಸಿಕ ಸಮತೋಲನ



ಕಾಯ್ದುಕೊಳ್ಳಬಹುದು. ಪ್ರತಿಯೊಬ್ಬರು ದಿನನಿತ್ಯ ಯೋಗಾಭ್ಯಾಸ ಮೂಲಕ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಲೋಕಸಭಾ ಸಂಸದ ಜಗದೀಶ್ ಶೆಟ್ಟರ ಕರೆ ನೀಡಿದರು.

ಕೆ.ಎಲ್.ಇ ಪ್ರಭಾಕರ ಕೋರೆ ಆಸ್ಪತ್ರೆಯ ಯೋಗ ತರಬೇತಿದಾರ ಆರತಿ ಸಂಕೇಶ್ವರಿ ಅವರು ಯೋಗ ವಿವಿಧ ಆಸನಗಳ ಕುರಿತು ತರಬೇತಿ ನೀಡಿದರು.

ನಗರ ಪೊಲೀಸ್ ಆಯುಕ್ತ ಭೂಷಣ್ ಗುಲಾಬರಾವ ಬೊರಸೆ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ರವಿ ಬಂಗಾರಪ್ಪನವರ, ಪ್ರವಾಸೋದ್ಯಮ ಇಲಾಖೆ ಜಂಟಿ ನಿರ್ದೇಶಕರಾದ ಸೌಮ್ಯ ಬಾಪಟ, ಏರ್ಫೋರ್ಸ್ ಲೆಫ್ಟಿನೆಂಟ್ ಕರ್ನಲ್ ನಿಖಿತಾ ಸಿಂಗ್, ಲೋಕೋಪಯೋಗಿ ಇಲಾಖೆ ಕಾರ್ಯನಿರ್ವಾಹಕ ಅಭಿಯಂತರ ಎಸ್.ಎಸ್ ಸೊಬರದ, ಜಿಲ್ಲಾ ಆಯುಷ್ ಅಧಿಕಾರಿ ಡಾ. ಶ್ರೀಕಾಂತ ಸುಣಧೋಳಿ, ವಿವಿಧ ಶಾಲಾ, ಕಾಲೇಜು ವಿದ್ಯಾರ್ಥಿಗಳು ಯೋಗಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

*

# ಯೋಗವು ಭಾರತ ದೇಶದಲ್ಲಿ ಮಾನವ ಶರೀರದ ರೋಗ ಹೋಗಲಾಡಿಸುವ ಪಾರಂಪರಿಕ

**ಮೂಡಲಗಿ** : ಯೋಗವು ಭಾರತ ದೇಶದಲ್ಲಿ ಮಾನವ ಶರೀರದ ರೋಗವನ್ನು ಹೋಗಲಾಡಿಸುವ ಪಾರಂಪರಿಕ ಚಿಕಿತ್ಸಾ ಪದ್ಧತಿಯಾಗಿದ್ದು, ನಮ್ಮ ದೇಶ ಜಗತ್ತಿಗೆ ನೀಡಿದ ಬೆಲೆ ಕಟ್ಟಲಾಗದ ಒಂದು ಮಹಾನ ಕೊಡುಗೆ ಯೋಗಭ್ಯಾಸವಾಗಿದೆ ಎಂದು ರಾಜ್ಯಸಭೆ ಸಂಸದ ಈರಣ್ಣ ಕಡಾಡಿ ಹೇಳಿದರು.

ಶನಿವಾರ ಮೂಡಲಗಿ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಕೇಂದ್ರ ಆಯುಷ್ಯ ಸಚಿವಾಲಯ, ಮೊರಾರ್ಜಿ ದೇಸಾಯಿ ರಾಷ್ಟ್ರೀಯ ಯೋಗ ಸಂಸ್ಥೆ, ನವದೆಹಲಿ, ತಾಲೂಕಾಡಳಿತ ಮೂಡಲಗಿ, ಸಾಮಾಜಿಕ ಆರ್ಥಿಕ ಮತ್ತು ಕಲ್ಯಾಣ ಸಂಸ್ಥೆ ಕಲ್ಲೋಳಿ, ಮೂಡಲಗಿ ಶಿಕ್ಷಣ ಸಂಸ್ಥೆ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಭಾರತ ಸರ್ಕಾರದ 'ಹಸಿರು ಯೋಗ' ಪರಿಕಲ್ಪನೆಯೊಂದಿಗೆ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಸಸಿಗೆ ನೀರು ಉಣಿಸುವ ಮೂಲಕ ಸಂಸದ



ಈರಣ್ಣ ಕಡಾಡಿ ಚಾಲನೆ ನೀಡಿ ಅವರು ಮಾತನಾಡಿದರು. ಭಾರತ ದೇಶ ಜಗತ್ತಿಗೆ ಸೊನ್ನೆ ಮತ್ತು ಆಯುರ್ವೇದಗಳಂತಹ ಅತಿ ದೊಡ್ಡ ಕೊಡುಗೆಗಳ ಜೊತೆಗೆ ಯೋಗವನ್ನು ಕೂಡಾ ನೀಡಿದೆ. 5000 ವರ್ಷಗಳಿಂದ ಭಾರತೀಯ ನೆಲದ ಋಷಿಮುನಿಗಳಿಂದ ಪ್ರಾರಂಭವಾದ ಯೋಗಾಭ್ಯಾಸವನ್ನು ಪಾಶ್ಚಾತ್ಯ ಸಂಸ್ಕೃತಿಗೆ ಮಾರುಹೋದ ನಮ್ಮ ಜನರು ಮರತೇ ಬಿಟ್ಟಿದ್ದರು. ಆದರೆ ಕಳೆದ 11 ವರ್ಷಗಳಿಂದ ಪ್ರಧಾನಿ ನರೇಂದ್ರ ಮೋದಿ ಅವರ ವಿಶೇಷ ಪರಿಶ್ರಮ ಮತ್ತು ಕಾಳಜಿಯ ಪರಿಣಾಮವಾಗಿ ಇಡಿ ವಿಶ್ವಕ್ಕೆ ಯೋಗವನ್ನು ಪರಿಚಯಿಸಿದ ಹಿರಿಮೆ ಭಾರತಕ್ಕಿದೆ ಎಂದರು.

ಯೋಗದಿಂದ ರೋಗವನ್ನು ದೂರ ಮಾಡಿ ಸ್ವಸ್ಥ, ಸದೃಢ ಸಮಾಜ ಕಟ್ಟಲು ಸಾಧ್ಯವಿದೆ. ಹೀಗಾಗಿ ಪ್ರತಿಯೊಬ್ಬರು ಪ್ರತಿದಿನ ಯೋಗ ಮಾಡಿ ಆರೋಗ್ಯಯುತ ಜೀವನ ರೂಪಿಸಿಕೊಳ್ಳಲು ಕಂಕಣ ಬದ್ದರಾಗಬೇಕೆಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಮೂಡಲಗಿ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಭಾರತ ಸರ್ಕಾರದ 'ಹಸಿರು ಯೋಗ' ಪರಿಕಲ್ಪನೆ ಅಂಗವಾಗಿ ಸಸಿಗಳನ್ನು ನೆಡಲಾಯಿತು.

ಮೂಡಲಗಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ವೆಂಕಟೇಶ ಸೋನವಾಲ್ಕರ, ನಿರ್ದೇಶಕರಾದ ವಿಜಯ ಸೋನವಾಲ್ಕರ, ಪ್ರಮುಖರಾದ ಶಿವಬಸು ಹಂದಿಗುಂದ, ನಿಂಗಪ್ಪ ಪಿರೋಜಿ, ಕುಮಾರ ಗಿರಡ್ಡಿ, ಈಶ್ವರ ಮುರಗೋಡ, ಈರಪ್ಪ ಢವಳೇಶ್ವರ, ಸದಾಶಿವ ನೇರ್ಲಿ, ಶಿವಾನಂದ ಮಗದುಮ್ಮ, ಪ್ರಾಚಾರ್ಯ ಎಸ್ ಎಲ್ ಚಿತ್ರಗಾರ, ಮಹಾಂತೇಶ ಪಾಟೀಲ, ಮಲ್ಲಪ್ಪ ಕಂಕಣವಾಡಿ, ಸೇವಾ ಸಂಸ್ಥೆ ಅಧ್ಯಕ್ಷ ಪರಪ್ಪ ಗಿರೆಣ್ಣವರ ಸೇರಿದಂತೆ ಸ್ಥಳೀಯ ಮುಖಂಡರು, ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಆಯುಷ್ ಇಲಾಖೆಯ ಅಧಿಕಾರಿಗಳು, ವಿದ್ಯಾರ್ಥಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಅಂತರಾಷ್ಟ್ರೀಯ ಯೋಗ ದಿನ



ಮೂಡಲಗಿ : ಸಮೀಪದ ಅರಬಾವಿ ಕಿತ್ತೂರ ರಾಣಿ ಚನ್ನಮ್ಮ ತೋಟಗಾರಿಕಾ ಮಹಾವಿದ್ಯಾಲಯದಲ್ಲಿ ರಾಷ್ಟ್ರೀಯ ಸ್ವಯಂ ಸೇವಾ ಯೋಜನೆಯ ವತಿಯಿಂದ ಶನಿವಾರ ಅಂತರಾಷ್ಟ್ರೀಯ ಯೋಗ ದಿನವನ್ನು ಆಚರಿಸಲಾಯಿತು. ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿ ಗೋಕಾಕದ ಪತಂಜಲಿ ಯೋಗ ಸಮಿತಿಯ ಚಿದಾನಂದ ಮೆಣಸಿನಕಾಯಿ, ಇವರು ಆಗಮಿಸಿ ಪ್ರಾರ್ಥನೆ ಮತ್ತು ಧ್ಯಾನದೊಂದಿಗೆ ಕಾರ್ಯಕ್ರಮವನ್ನು ಪ್ರಾರಂಭಿಸಿದರು. ನಂತರ ಅವರು ಯೋಗ ಅಧಿವೇಶನವನ್ನು ನಡೆಸಿಕೊಟ್ಟು ಯೋಗದ ಮಹತ್ವವನ್ನು ವಿವರಿಸಿದರು.

ಮಹಾವಿದ್ಯಾಲಯದ ಡೀನ್ ಡಾ. ಎಮ್. ಜಿ. ಕೆರುಟಗಿ ಕಾರ್ಯಕ್ರಮದ ಕುರಿತು ಗಟ್ಟಿ ಮನಸಿದ್ದರೆ ಗಟ್ಟಿಯಾದ ದೇಹ ಎಂಬ ಸಂದೇಶದೊಂದಿಗೆ ಮಾತನಾಡಿ ಭಾರತ ದೇಶವೇ ಯೋಗವನ್ನು ಪ್ರಾರಂಭಿಸಿತು. ನಂತರ 176 ದೇಶಗಳು ಅದನ್ನು ಅನುಸರಿಸುತ್ತಿವೆ. ಹಾಗೆಯೇ ಇದರಿಂದಾಗುವ ಪ್ರಯೋಜನಗಳನ್ನು ವಿದ್ಯಾರ್ಥಿಗಳಿಗೆ ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಡಾ. ವಿಲಾಸ ಗಸ್ತಿ, ಪ್ರಾಧ್ಯಾಪಕರು, ಡಾ. ಎಸ್.ಜಿ. ಪ್ರವೀಣಕುಮಾರ, ಎ.ಡಿ.ಎಸ್.ಡ್ಬ್ಲೊ. ಹಾಗೂ ಡಾ. ಪ್ರತೀಕ್ಷಾ, ಎನ್.ಎಸ್.ಎಸ್., ಯೋಜನಾಧಿಕಾರಿಗಳು ಉಪಸ್ಥಿತರಿದ್ದರು. ಮತ್ತು ರಾಷ್ಟ್ರೀಯ ಸ್ವಯಂ ಸೇವಾ ಯೋಜನೆಯ ಸ್ವಯಂ ಸೇವಕ, ಸೇವಕಿಯರು ಕೂಡಾ ಪಾಲ್ಗೊಂಡಿದ್ದರು.

## ಅಂತಾರಾಷ್ಟ್ರೀಯ ಯೋಗ ದಿನಾಚರಣೆ

ಕಾರವಾರ. –ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಉತ್ತರ ಕನ್ನಡ ಜಿಲ್ಲೆ ಆಯುಷ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಸಮಾಜ ಕಲ್ಯಾಣ, ಆರೋಗ್ಯ, ಶಿಕ್ಷಣ, ಕ್ರೀಡಾ ಮತ್ತು ಯುವ ಸಬಲೀಕರಣ, ಕನ್ನಡ ಮತ್ತು ಸಂಸ್ಕೃತಿ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ನಗರಸಭೆ ಕಾರವಾರ, ಸ್ಕೌಟ್ ಮತ್ತು ಗೈಡ್ಸ್, ಎನ್.ಸಿ.ಸಿ, ಎನ್.ಎಸ್.ಎಸ್, ರೆಡ್‌ಕ್ರಾಸ್, ಪತಂಜಲಿ, ರೋಟರಿ ಕ್ಲಬ್, ರೋಟರಿ ಸಿಸೈಡ್,ರೋಟರಿ ಪಶ್ಚಿಮ, ಸರಕಾರಿ ನೌಕರರ ಸಂಘ ಜಿಲ್ಲಾ ಶಾಖೆ ಕಾರವಾರ, ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ 11 ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ–2025 ಕಾರ್ಯಕ್ರಮವನ್ನು ಜೂ.21 ರಂದು ಬೆಳಗ್ಗೆ 6.30 ಗಂಟೆಗೆ ಪೋಲಿಸ್ ಕಲ್ಯಾಣ ಮಂಟಪ ಕಾಜುಭಾಗ ಕಾರವಾರದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಮೀನುಗಾರಿಕೆ,ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಉದ್ಘಾಟಿಸಲಿದ್ದು, ಕರ್ನಾಟಕ ಮಾರ್ಕೇಟಿಂಗ್ ಕನ್ಸಲ್ಟೆಂಟ ಅಂಡ್ ಏಜೆನ್ಸಿಸ್ ಅಧ್ಯಕ್ಷ ಸತೀಶ ಕೆ. ಸೈಲ್ ಅಧ್ಯಕ್ಷತೆ ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಚಿವ ದಿನೇಶ ಗುಂಡೂರಾವ್, ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ ದೇಶಪಾಂಡೆ, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಶಾಸಕರಾದ ಶಿವರಾಮ ಹೆಬ್ಬಾರ್, ದಿನಕರ ಕೆ. ಶೆಟ್ಟಿ, ಭೀಮಣ್ಣ ಟಿ. ನಾಯ್ಕ, ವಿಧಾನ ಪರಿಷತ್ ಶಾಸಕರಾದ ಎಸ್. ವಿ.ಸಂಕನೂರು, ಶಾಂತಾರಾಮ ಬುಡ್ನ ಸಿದ್ದಿ, ಗಣಪತಿ ಡಿ.ಉಳ್ವೇಕರ ಹಾಗೂ ನಗರಸಭೆ ಅಧ್ಯಕ್ಷ ರವಿರಾಜ ಚಂದ್ರಹಾಸ ಅಂಕೋಲೆಕರ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಸತೀಶ ನಾಯ್ಕ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.

## 11 ವರ್ಷ ಮೋದಿಜೀ ಆಡಳಿತ- ದೇಶದ ಅಭಿವೃದ್ಧಿ ಅಮೋಘ:ಮಹಾಂತೇಶ ದೊಡ್ಡಗೌಡರ



ನೇಸರಗಿ: ದೇಶದ ರಸ್ತೆ, ಆರ್ಥಿಕತೆ, ಮಹಿಳಾ ಅಭಿವೃದ್ಧಿ, ಜಾಗತಿಕ ಮಟ್ಟದಲ್ಲಿ ಭಾರತ ಹೆಮ್ಮರವಾಗಿ ಬೆಳೆಯಲು, ಗ್ರಾಮೀಣ ಮೂಲಭೂತ ಸೌಕರ್ಯ, ರೈತರ ಉದ್ದಾರಕ್ಕೆ, ಕೈಗಾರಿಕೆ, ಸ್ವದೇಸಿ ವಸ್ತು ಉತ್ಪಾದನೆ, ಮೇಕ್ ಇಂಡಿಯಾ, ದೇಶ ರಕ್ಷಣೆಗೆ ಭಾರತ ದೇಶದ ಪ್ರಧಾನಿ ನರೇಂದ್ರ ಮೋದಿಜೀ ಅವರ 11 ವರ್ಷದ ಆಡಳಿತ ಕಾರ್ಯವೈಖರಿ ಕಾರಣ ಎಂದು ಮಾಜಿ ಶಾಸಕ, ಬಿಡಿಸಿಸಿ ಬ್ಯಾಂಕ ನಿರ್ದೇಶಕರಾದ ಮಹಾಂತೇಶ ದೊಡ್ಡಗೌಡರ ಹೇಳಿದರು.

ಅವರು ಶುಕ್ರವಾರದಂದು ಕಿತ್ತೂರುವಿಧಾನ ಸಭೆ ಕ್ಷೇತ್ರದ ಬಿಜೆಪಿ ಮಂಡಲ ವತಿಯಿಂದ ಸಮೀಪದ ದೇಶನೂರ ಗ್ರಾಮದಲ್ಲಿ ವಿಕಸಿತ ಭಾರತ ಅಮೃತಕಾಲ,ಸೇವೆ,ಸುಶಾಸನ,ಬಡವರ ಕಲ್ಯಾಣ ಮೋದಿಜೀ ಸರ್ಕಾರಕ್ಕೆ 11 ವರ್ಷಗಳ ಸಿದ್ಧಿಯಿಂದ ಸಾಧನೆಯವರೆಗೆ ಮೋದಿಜೀ ಸರ್ಕಾರ ಎಂಬ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.. ಮಾಜಿ ಶಾಸಕ ಸಂಜಯ ಪಾಟೀಲ ಮಾತನಾಡಿ ದೇಶ ಇಂದು ಆರ್ಥಿಕವಾಗಿ ಮತ್ತು ಭಾರತ ದೇಶ ಎಲ್ಲಾ ಕ್ಷೇತ್ರಗಳಲ್ಲಿ ಬೆಳವಣಿಗೆ ಹೊಂದಲು ಮತ್ತು ಇಡೀ ಜಗತ್ತು ಭಾರತದತ್ತ ನೋಡುವಂತೆ ಮಾಡಿದ್ದು ದೇಶದ ಪ್ರಧಾನಿ ನರೇಂದ್ರ ಮೋದೀಜಿ ಅವರ 11 ವರ್ಷದ ಆಡಳಿತ ಮತ್ತು ದಿನನಿತ್ಯ 18 ಘಂಟೆಗಳ ಪರಿಶ್ರಮ ಕಾರಣ ಎಂದರು.

ಕಿತ್ತೂರು ಬಿಜೆಪಿ ಮಂಡಳ ಅಧ್ಯಕ್ಷ ಶ್ರೀಕರ ಕುಲಕರ್ಣಿ ಮಾತನಾಡಿ 60 ವರ್ಷ ಕಾಂಗ್ರೆಸ್ ಸರ್ಕಾರ ಮಾಡದ್ದನ್ನು ಕೇವಲ 11 ವರ್ಷಗಳಲ್ಲಿ ಮೋದಿಜೀ ದೇಶಕ್ಕೆ ಮತ್ತು ಜಗತ್ತಿಗೆ ಮಾಡಿ ತೋರಿಸಿದ್ದಾರೆ ಎಂದರು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಶ್ರೀಮತಿ ಧನಶ್ರೀ ದೇಸಾಯಿ, ಮನೋಜ್ ಪಾಟೀಲ, ಮಾಜಿ ಮದ್ಯಪಾನ ಮಂಡಳಿಯ ಅಧ್ಯಕ್ಷರಾದ ಮಲ್ಲಿಕಾರ್ಜುನ ತುಬಾಕಿ, ಕೆ ಎಮ್ ಎಫ್ ನಿರ್ದೇಶಕ ಬಸವರಾಜ ಪರವಣ್ಣವರ, ಶ್ರೀಮತಿ ಲಕ್ಷ್ಮಿ ಇನಾಮದಾರ, ಮುಖಂಡ ಬಸನಗೌಡ ಶಿದ್ರಾಮಣಿ, ಮಾಜಿ ತಾ ಪಂ ಸದಸ್ಯ ಶ್ರೀಶೈಲ ಕಮತಗಿ,ಪ್ರಶಾಂತ ಚಡಚಾಳ, ಸಂತೋಷ ತಿಳಗಂಜಿ, ನೇಸರಗಿ ಗ್ರಾ ಪಂ ಅಧ್ಯಕ್ಷ ವೀರಭದ್ರ ಚೋಬಾರಿ, ತೇಜಪ್ಪಗೌಡ ಪಾಟೀಲ, ಮಲ್ಲಿಕಾರ್ಜುನ ಸೋಮಣ್ಣವರ, ಆನಂದ ಗುರಣ್ಣವರ, ಅಡಿವಪ್ಪ ಕಮತಗಿ, ಬಸವರಾಜ ಕೇಥಾರಿ, ಅಡಿವಪ್ಪ ಹೊಸಮನಿ,ಮಹಾಂತೇಶ ಮೋಹರೆ, ಮಲ್ಲಿಕಾರ್ಜುನ ಗೌಡರ ಹಾಗೂ ಪಕ್ಷದ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಯಾಂತ್ರಿಕ ಬದುಕಿಗೆ ಯೋಗಾಭ್ಯಾಸ ಅತ್ಯಗತ್ಯ -ಸುರೇಶಗೌಡ ಬಿರಾದಾರ



ವಿಜಯಪುರ: ಇಂದಿನ ಯಾಂತ್ರಿಕ ಬದುಕಿನಲ್ಲಿ ಯೋಗಾಭ್ಯಾಸ ಅತ್ಯಗತ್ಯವಾಗಿದ್ದು, ಯೋಗ ಎಲ್ಲಾ ರೋಗಕ್ಕೂ ಮದ್ದಾಗಿದೆ ಎಂದು ಮುಖ್ಯ ಶಿಕ್ಷಕ ಸುರೇಶಗೌಡ ಬಿರಾದಾರ ಹೇಳಿದರು.

ಶನಿವಾರದಂದು ತಾಲೂಕಿನ ನಾಗಠಾಣ ಗ್ರಾಮದ ಶ್ರೀ ಮಲ್ಲಿಕಾರ್ಜುನ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ಹಮ್ಮಿಕೊಂಡ 'ಅಂತಾರಾಷ್ಟ್ರೀಯ ಯೋಗ ದಿನ' ವನ್ನು ಉದ್ಧೇಶಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ಇತರರೊಡನೆ ಬೆರೆಯುವ ಮನೋಸ್ಥೈರ್ಯ ಹೆಚ್ಚಾಗಬೇಕೆಂದರೆ ಯೋಗಾಭ್ಯಾಸ ಮಾಡಬೇಕು. ಇದರಿಂದ ತನ್ನ ಮನಸ್ಸಿನ ಮೇಲೆ ನಿಯಂತ್ರಣ ಪಡೆದುಕೊಳ್ಳಲು ಸಾಧ್ಯವಾಗುತ್ತದೆ ಎಂದರು. ಸಂಸ್ಥೆಯ ಅಧ್ಯಕ್ಷ ಶಂಕರ ಹುಣಶ್ಯಾಳ ಮಾತನಾಡಿ,

ಯೋಗವು ಭಾರತೀಯ ಸಂಸ್ಕೃತಿಯ ಮೂಲ ಬೇರು. ಇಡೀ ವಿಶ್ವಕ್ಕೆ ನಮ್ಮ ದೇಶದ ಪರಿಚಯ ಆಗಿರುವುದೇ ಯೋಗ ಮತ್ತು ಅಧ್ಯಾತ್ಮಿಕತೆಯಿಂದ. ಯೋಗವು ಆರೋಗ್ಯ ವೃದ್ಧಿಸುವ ಸಾಧನವಾಗಿದೆ ಎಂದು ಹೇಳಿದರು.

ಕಾರ್ಯದರ್ಶಿ ಸುನಂದಾ ಹುಣಶ್ಯಾಳ ಹಾಗೂ ಶಿಕ್ಷಕರಾದ ಎಂ ಎಸ್ ಪಾಪನಾಳಮಠ, ರಾಘು ಮೊಗಳ, ಸಚಿನ ಅವಟಿ, ನವೀನ ಬಂಡೆನ್ನವರ, ಜಯಶ್ರೀ ಬಂಗಾರಿ, ಲಕ್ಷ್ಮೀ ಮಸೂತಿ,ರೇಣುಕಾ ಭಜಂತ್ರಿ, ಶ್ರುತಿ ಪೂಜಾರಿ, ಸಿದ್ದು ರತ್ನಾಕರ, ರಾಜಶೇಖರ ಶಿರಶ್ಯಾಡ, ಅಲ್ಲಾಭಕ್ಷ ಇನಾಮದಾರ ಸೇರಿದಂತೆ ಶಾಲಾ ಮಕ್ಕಳು ಭಾಗವಹಿಸಿದ್ದರು.

## ನಾಗರೀಕ ಬಂದೂಕು ತರಬೇತಿ

ಕಾರವಾರ, – ನಾಗರೀಕ ಬಂದೂಕು ತರಬೇತಿ ಪಡೆಯಲು ಇಚ್ಚಿಸಿ ಅರ್ಜಿ ಸಲ್ಲಿಸಿರುವ ನಾಗರೀಕರಿಗೆ ಜೂ.22 ರಿಂದ ಜೂ.23 ರವರೆಗೆ ಶಿರಸಿ ತಾಲೂಕಿನ ಶ್ರೀ ಮಾರಿಕಾಂಬಾ ಕ್ರೀಡಾಂಗಣದಲ್ಲಿ ನಾಗರೀಕ ಬಂದೂಕು ತರಬೇತಿ ನಡೆಸಲಾಗುವುದು ಆದ್ದರಿಂದ ತರಬೇತಿಗಾಗಿ ಅರ್ಜಿ ಸಲ್ಲಿಸಿದ ನಾಗರೀಕರು ಜೂ. 22 ರಂದು ಬೆಳಗ್ಗೆ 8 ಗಂಟೆಗೆ ತರಬೇತಿಗೆ ಹಾಜರಾಗುವಂತೆ ಹಾಗೂ ತರಬೇತಿಗೆ ಸಂಬಂಧಿಸಿದ ಹೆಚ್ಚಿನ ವಿವರಗಳಿಗಾಗಿ ಆರ್.ಪಿ.ಐ, ಡಿ.ಎ.ಆರ್, ಕಾರವಾರ ದೂರವಾಣಿ ಸಂಖ್ಯೆ: 9480805210 ನ್ನು ಸಂಪರ್ಕಿಸುವಂತೆ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ಅದಾಲತ್ ಹಾಗೂ ಗ್ರಾಹಕರ ಸಂವಾದ ಸಭೆ

ಕಾರವಾರ. : ಕುಮಟಾ ಉಪ–ವಿಭಾಗ ವ್ಯಾಪ್ತಿಯಲ್ಲಿ ಜೂ.21 ರಂದು ಬೆಳಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ವಿದ್ಯುತ್ ಅದಾಲತ್ ಹಾಗೂ ಮಧ್ಯಾಹ್ನ 3.30 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಗ್ರಾಹಕರ ಸಂವಾದ ಸಭೆಯನ್ನು ಕುಮಟಾ ಉಪ– ವಿಭಾಗ ಕಚೇರಿಯ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ತಮ್ಮ ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬಹುದು. ಈ ಕುರಿತು ಗ್ರಾಹಕರಿಗೆ ಹೆಚ್ಚಿನ ಮಾಹಿತಿ ಬೇಕಾದಲ್ಲಿ ಕಚೇರಿ ವೇಳೆಯಲ್ಲಿ 08386–(222034/224865/256177) ದೂರವಾಣಿಗೆ ಸಂಪರ್ಕಿಸಿ ಮಾಹಿತಿ ಪಡೆಯಬಹುದು ಎಂದು ಕುಮಟಾ ಉಪ–ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್(ವಿ) ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ

# ಮಕ್ಕಳ ಅಸಹಜ ಸಾವು ಸಂಭವಿಸದಂತೆ ಅಧಿಕಾರಿಗಳು ಗಮನಹರಿಸಿ: ಶೇಖರಗೌರ ಜಿ. ರಾಮತ್ನಾಳ

ಕೊಪ್ಪಳ : ಮಕ್ಕಳ ಅಸಹಜ ಸಾವಿನ ಪ್ರಕರಣಗಳು ಸಂಭವಿಸದಂತೆ ಎಲ್ಲಾ ಇಲಾಖೆಯ ಅಧಿಕಾರಿಗಳು ಸೂಕ್ತ ಗಮನಹರಿಸುವಂತೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌರ ಜಿ. ರಾಮತ್ನಾಳ ಹೇಳಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಡಾ. ಕೆ.ಟಿ. ತಿಪ್ಪೇಸ್ವಾಮಿ ಅವರ ಉಪಸ್ಥಿತಿಯಲ್ಲಿ ಕೊಪ್ಪಳ ಜಿಲ್ಲೆಯ "ಮಕ್ಕಳ ಅಸಹಜ ಸಾವಿನ ಪ್ರಕರಣಗಳನ್ನು ತಡೆಗಟ್ಟುವ ಸಂಬಂಧ" ವಿವಿಧ ಭಾಗೀದಾರರ ಇಲಾಖೆಗಳ ಅಧಿಕಾರಿಗಳೊಂದಿಗೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಇತ್ತೀಚೆಗೆ ವಿದ್ಯುತ್ ಸ್ಪರ್ಶ, ನಿಷ್ಕ್ರಿಯ ಕಲ್ಲುಕ್ವಾರಿ ಮತ್ತು ಕೃಷಿಹೊಂಡಗಳಲ್ಲಿ ಈಜಲು ಹೋಗಿ ಮಕ್ಕಳು ಸಾವನ್ನಪ್ಪಿರುವುದು, ಆತ್ಮಹತ್ಯೆ ಹಾಗೂ ಹಾವುಕಡಿತ ಮುಂತಾದ ಕಾರಣಗಳಿಂದ ಮಕ್ಕಳು ಮರಣಹೊಂದುತ್ತಿರುವ ಪ್ರಕರಣಗಳು ಹೆಚ್ಚಾಗುತ್ತಿದ್ದು, ಜಿಲ್ಲೆಯಲ್ಲಿ 2023ನೇ ಸಾಲಿನಲ್ಲಿ 31 ಮಕ್ಕಳು 2024ನೇ ಸಾಲಿನಲ್ಲಿ 42 ಮಕ್ಕಳು ಹಾಗೂ ಪ್ರಸ್ತುತ ಸಾಲಿನಲ್ಲಿ ಇದುವರೆಗೆ 18 ಮಕ್ಕಳು ಸಾವನ್ನಪ್ಪಿರುವುದು ಅಘಾತಕಾರಿ ಸಂಗತಿಯಾಗಿದೆ. ಆದ್ದರಿಂದ ಮಕ್ಕಳ ಸುರಕ್ಷತೆ ಮತ್ತು ಮಕ್ಕಳ ಅಸಹಜ ಸಾವಿನ ಪ್ರಕರಣಗಳು ಸಂಭವಿಸದಂತೆ ಎಲ್ಲಾ




ಇಲಾಖೆಯ ಅಧಿಕಾರಿಗಳು ಸೂಕ್ತ ಗಮನಹರಿಸಿ ಕಾರ್ಯನಿರ್ವಹಿಸುವಂತೆ ಸೂಚನೆ ನೀಡಿದರು.

ಇದೆ ಜೂನ್ 19 ರಂದು ಜಿಲ್ಲೆಯ ವಿವಿಧ ಶಾಲೆ, ವಸತಿ ಶಾಲೆ, ಅಂಗನವಾಡಿ ಕೇಂದ್ರ, ಪಂಚಾಯತಿ, ಮಕ್ಕಳ ಪಾಲನಾ ಸಂಸ್ಥೆಗಳು, ಮಕ್ಕಳ ವಿಶೇಷ ಪೊಲೀಸ್ ಘಟಕ ಮತ್ತು ಪೋಲೀಸ್ ಠಾಣೆಗಳಿಗೆ ಪ್ರವಾಸ ಕೈಗೊಂಡು ಪರಿಶೀಲಿಸಿ ಮಕ್ಕಳ ಹಕ್ಕುಗಳ ಅನುಷ್ಟಾನ ಮತ್ತು ತೆಗೆದುಕೊಂಡ ರಕ್ಷಣಾ ಕ್ರಮಗಳ ಕುರಿತು ಮಾಹಿತಿ ಪಡೆಯಲಾಗಿದೆ ಎಂದರು.

ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಡಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ, ಸರ್ಕಾರಿ ಮತ್ತು ಖಾಸಗಿ ಶಾಲೆ, ಕಾಲೇಜು, ವಸತಿಯುತ ಶಾಲೆಯ ಮಕ್ಕಳ ಪಾಲನಾ ಸಂಸ್ಥೆಗಳಗಳ ಕಂಪೌಡ ಒಳಗೆ ಯಾವುದೇ ವಿದ್ಯುತ್ ಟಿ.ಸಿಯನ್ನು ಅಳವಡಿಸಿರಬಾರದು. ಶಾಲೆಯ ಮೇಲ್ಚಾವಣಿ, ಆವರಣ ಹಾಗೂ ಮೈದಾನಗಳ ಮೇಲೆ ಯಾವುದೇ ತರಹದ ವಿದ್ಯುತ್ ತಂತಿಗಳು ಹಾದುಹೋಗಿರಬಾರದು. ಒಂದುವೇಳೆ ಅಂಗನವಾಡಿ ಶಾಲೆ, ಕಾಲೇಜು ಮತ್ತು ವಸತಿಯುತ ಶಾಲೆಗಳ ಕಂಪೌಡ ಒಳಗೆ ವಿದ್ಯುತ್ ತಂತಿಗಳು ಹಾದುಹೋಗಿದ್ದಲ್ಲಿ ಅದರ ಮಾಹಿತಿಯನ್ನು ಇಲಾಖಾ ಮುಖ್ಯಸ್ಥರು ಜುಲೈ 10ರೊಳಗಾಗಿ ಸಂಗ್ರಹಿಸಿ ಸಂಬಂಧಿಸಿದ ಜೆಸ್ಕಾಂ ಇಲಾಖೆರವರಿಗೆ ಮಾಹಿತಿಯನ್ನು ಸಲ್ಲಿಸಿ, ವಿದ್ಯುತ್ ಲೈನ್ ತೆರವುಗೊಳಿಸಲು ಕ್ರಮವಹಿಸಿ ಆಯೋಗಕ್ಕೆ ತುರ್ತಾಗಿ ವರದಿ ಸಲ್ಲಿಸುವಂತೆ ಸೂಚಿಸಿದರು. ಮಕ್ಕಳ ಸಂರಕ್ಷಣೆ ಹಿತದೃಷ್ಟಿಯಿಂದ ಎಲ್ಲಾ ಶಾಲೆ, ಕಾಲೇಜು ಮತ್ತು ವಸತಿ ನಿಲಯಗಳಲ್ಲಿ ಮಕ್ಕಳ ರಕ್ಷಣಾ ನೀತಿ–2016ರನ್ನು ಅನುಷ್ಟಾನಗೊಳಿಸಿ ಮಕ್ಕಳಿಗೆ ಸೂಕ್ತ ಭದ್ರತೆ ನೀಡಿರುವ ಬಗ್ಗೆ ಖಾತ್ರಿಪಡಿಕೊಂಡು ಆಯೋಗಕ್ಕೆ 20ದಿನಗಳ ಒಳಗಾಗಿ ವರದಿ ಸಲ್ಲಿಸಲು ಶಿಕ್ಷಣ ಇಲಾಖೆ, ಹಿಂದುಗಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧಿಕಾರಿಗಳಿಗೆ ಕ್ರಮ ವಹಿಸುವಂತೆ ತಿಳಿಸಿದರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಡಾ. ಕೆ.ಟಿ. ತಿಪ್ಪೇಸ್ವಾಮಿ ಅವರು ಮಾತನಾಡಿ, ಶಾಲೆ ಮತ್ತು ಕಾಲೇಜುಗಳಿಂದ ಮಕ್ಕಳು ಹೊರಗುಳಿಯದಂತೆ ಸೂಕ್ತ ಕ್ರಮವಹಿಸಿ ಪುನಃ ಮಕ್ಕಳನ್ನು ಶಾಲೆ, ಕಾಲೇಜುಗಳಿಗೆ ಹಾಜರಾಗಲು ಕ್ರಮವಹಿಸಬೇಕು. ಬಾಲ್ಯವಿವಾಹ, ಪೋಕ್ಸೊ ಹಾಗೂ ಮುಂತಾದ ದೌರ್ಜನ್ಯಗಳಿಂದ ಮಕ್ಕಳನ್ನು ರಕ್ಷಿಸಲು ಅಧೀನ ಅಧಿಕಾರಿಗಳಿಗೆ ಜವಾಬ್ದಾರಿ ನಿಗದಿಪಡಿಸಬೇಜು. ಯಾವುದೇ ಮಗು ಶಾಲೆಯಿಂದ ಹೊರಗುಳಿಯದೇ ಶಿಕ್ಷಣ ಪಡೆಯಲು ಮತ್ತು ಸೂಕ್ತ ರಕ್ಷಣೆ ಹೊಂದಲು ಕ್ರಮವಹಿಸುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. ಪೊಲೀಸ್ ಇಲಾಖೆಯಿಂದ ನಿಯಮಿತವಾಗಿ ತೆರೆದಮನೆ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಆಯೋಜಿಸುವ ಮೂಲಕ ಮಕ್ಕಳ ಸುರಕ್ಷತಾ ಕ್ರಮಗಳ ಕುರಿತು ಹೆಚ್ಚು ಮಕ್ಕಳು ಹಾಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಮತ್ತು ಶಾಲಾ ಅವಧಿ ಮತ್ತು ರಜಾ ದಿನಗಳಲ್ಲಿ ಶಾಲಾ ಆವರಣದಲ್ಲಿ ಅಹಿತಕರ ಘಟನೆಗಳು ನಡೆಯದಂತೆ ನಿಯಮಿತವಾಗಿ ಪೊಲೀಸ್ ಬೀಟ್ ವ್ಯವಸ್ಥೆಯನ್ನು ಎಲ್ಲಾ ಶಾಲೆ ಮತ್ತು ಕಾಲೇಜುಗಳಿಗೆ ಒದಗಿಸಲು ಹಾಗೂ ಶಾಲೆ, ಕಾಲೇಜುಗಳ ಸುತ್ತಮುತ್ತ ಯಾವುದೇ ತಂಬಾಕು ಮತ್ತು ಮದ್ಯ ಮಾರಾಟ ಅಂಗಡಿಗಳಿದ್ದಲ್ಲಿ ಪರಿಶೀಲಿಸಿ, ಒಂದು ತಿಂಗಳ ಒಳಗಾಗಿ ಅವುಗಳನ್ನು ತೆರವುಗೊಳಿಸಲು ಕ್ರಮವಹಿಸುವಂತೆ ತಿಳಿಸಿದರು. ಎಲ್ಲಾ ಇಲಾಖೆಗಳು ಪತ್ರ ವ್ಯವಹಾರ ಮಾಡುವ ಸಂದರ್ಭದಲ್ಲಿ ಪತ್ರದ ಕೆಳಭಾಗದಲ್ಲಿ ಕಡ್ಡಾಯವಾಗಿ "ಬಾಲ್ಯವಿವಾಹ ಶಿಕ್ಷಾರ್ಹ ಅಪರಾಧ" ಎಂಬ ಬರಹವನ್ನು ಮುದ್ರಿಸುವುದು ಹಾಗೂ ಎಲ್ಲಾ ಇಲಾಖೆಯ ಕಚೇರಿಗಳ ಮುಂಭಾಗದಲ್ಲಿ "ಮಕ್ಕಳ ಸಹಾಯವಾಣಿ 1098ರ ಶಾಶ್ವತ ಗೋಡೆಬರಹವನ್ನು ಕಡ್ಡಾಯವಾಗಿ ಒಂದು ತಿಂಗಳ ಒಳಗಾಗಿ ಬರೆಯಿಸಿ ಜಿ.ಪಿ.ಎಸ್ ಪೋಟೋ ಸಹಿತ ಆಯೋಗಕ್ಕೆ ವರದಿ ನೀಡುವ ಮೂಲಕ ಸಾರ್ವಜನಿಕರಿಗೆ ಬಾಲ್ಯವಿವಾಹ ನಿಷೇದ ಹಾಗೂ ಮಕ್ಕಳ ರಕ್ಷಣೆಯ ಅವಶ್ಯಕತೆ ಕುರಿತು ಹೆಚ್ಚು ಪ್ರಚಾರ ಮಾಡಲು ಕ್ರಮವಹಿಸುವಂತೆ ಸೂಚನೆ ನೀಡಿದರು.

ಈ ಸಭೆಯಲ್ಲಿ ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹೇಮಂತ್ ಕುಮಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪರಶುರಾಮ ಶೆಟ್ಟಪ್ಪನವರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತಸ್ವಾಮಿ ಪೂಜಾರ ಸೇರಿದಂತೆ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರು ಹಾಗೂ ಎಲ್ಲಾ ಇಲಾಖೆಗಳ ಜಿಲಾಮಟ್ಟದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಡಾ.ಬಿ.ಆರ್.ಅಂಬೇಡ್ಕರ್ ಅವರ ಚಿಂತನೆಗಳ ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಬೇಕು



ರಾಯಬಾಗ: ಡಾ.ಬಿ.ಆರ್.ಅಂಬೇಡ್ಕರ್ ಅವರ ಚಿಂತನೆಗಳನ್ನು ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಬೇಕೆಂದು ಶಾಸಕ ಡಿ.ಎಮ್.ಐಹೊಳೆ ಹೇಳಿದರು.

ಶನಿವಾರ ತಾಲೂಕಿನ ಚಿಂಚಲಿ ಪಟ್ಟಣದಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಮಂಜೂರಾದ 20 ಲಕ್ಷ ರೂ. ಅನುದಾನದಲ್ಲಿ ಡಾ.ಬಿ.ಆರ್. ಅಂಬೇಡ್ಕರ ಭವನ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಸಮಾಜದ ಮುಖಂಡರು ಮುತುರ್ವಜಿಯಿಂದ ಅಂಬೇಡ್ಕರ ಭವನವನ್ನು ಒಳ್ಳೆ ಗುಣಮಟ್ಟದಲ್ಲಿ ನಿರ್ಮಿಸಿಕೊಳ್ಳಬೇಕು. ಭವನದ ಸದುಪಯೋಗ ಎಲ್ಲರೂ ಪಡೆದುಕೊಳ್ಳಬೇಕೆಂದರು.

ಜಿ.ಪಂ.ಎಇ ಎಸ್.ಎಸ್.ಹೊಸಮನಿ, ಸದಾಶಿವ ಘೋರ್ಪಡೆ, ಅಂಕುಶ ಜಾಧವ, ಸುಭಾಷ ಕೋರೆ, ವಿಲಾಸ ಬಸನಾಯ್ಕ, ಸಂಜು ಮೈಶಾಳೆ, ನಾಗು ಥಾಲೆ, ಜಯಪಾಲ ಬಸನಾಯ್ಕ, ಪ್ರಕಾಶ ಸಂಗಣ್ಣವರ, ಜಾನು ಕೋಳಿಗುಡ್ಡೆ, ಕುಮಾರ ಖೋತ, ರಾಜು ಪೋಳ, ಮಲ್ಲು ಕಮತೆ, ತುಕಾರಾಂ ಟೊನ್ನೆ, ಅಜೀತ ಈರಗಾರ, ಮಹೇಂದ್ರ ಗಾಣಿಗೇರ, ರಮೇಶ ಹಾರೂಗೇರಿ, ರಾಜು ವಡ್ಡರ, ಪುರಂದರ ಕಾಂಬಳೆ ಸೇರಿ ಅನೇಕರು ಇದ್ದರು.


****

## ಕುಮಟಾ :ಜೂ.23 ಮತ್ತು 25 ರಂದು ಅಂಚೆ ವ್ಯವಹಾರ ಸ್ಥಗಿತ

ಕಾರವಾರ, –ಅಂಚೆ ಇಲಾಖೆಯು ಪ್ರಸಕ್ತ ಉಪಯೋಗಿಸುತ್ತಿರುವ ಸಾಫ್ಟ್‌ವೇರ್ ಅನ್ನು ಬದಲಾವಣೆ ಮಾಡುತ್ತಿದ್ದು ಹೊಸ ಸಾಫ್ಟ್‌ವೇರ್ ಅಳವಡಿಕೆಯ ಪ್ರಕ್ರಿಯೆಯು ಕುಮಟಾ ಪ್ರಧಾನ ಅಂಚೆ ಕಚೇರಿಯ ಅಡಿಯಲ್ಲಿ ಬರುವ ಉಪ ಅಂಚೆ ಕಚೇರಿ ಮತ್ತು ಶಾಖಾ ಅಂಚೆ ಕಚೇರಿಗಳಲ್ಲಿ ಜೂ.23 ಮತ್ತು 25 ರವರೆಗೆ ನಡೆಯಲಿದ್ದು, ಆ ದಿನಗಳಲ್ಲಿ ಯಾವುದೇ ರೀತಿಯ ಅಂಚೆ ವ್ಯವಹಾರ ವಹಿವಾಟುಗಳನ್ನು ಸ್ಥಗಿತಗೊಳಿಸಲಾಗಿದೆ.

ಕುಮಟಾ ತಾಲೂಕಿನ ಬಂಕಿಕೊಡ್ಲ, ಚಂದಾವರ, ಗೋಕರ್ಣ, ಗುಡೇಅಂಗಡಿ, ಹೆಗಡೆ ಹೆರವಟ್ಟ, ಹಿರೇಗುತ್ತಿ, ಮಾದನಗೇರಿ, ಮಿರ್ಜಾನ, ಕುಮಟಾ ಕೆನರಾ ಕಾಲೇಜು ರಸ್ತೆ ಕುಮಟಾ, ಕುಮಟಾ ಕಚೇರಿ, ತಡತೋಕ ಮತ್ತು ಹೊನ್ನಾವರ ತಾಲೂಕಿನ ಗೇರಸೊಪ್ಪ, ಜ್ಯೋತಿನಗರ, ಹಡಿನಬಾಳ, ಹಳದೀಪುರ, ಹೊನ್ನಾವರ, ಹೊಸಾಡ, ಕರ್ಕಿ, ಕಾಸರಕೋಡು, ಮಂಕಿ, ಮೆಲಿನ್ ಇಡಗುಂಜಿ, ಪ್ರಭಾತನಗರ ಹಾಗೂ ಭಟ್ಕಳ ತಾಲೂಕಿನ ಭಟ್ಕಳ ಬಜಾರ್, ಭಟ್ಕಳ, ಕಾಯ್ಕಿಣಿ, ಮುರ್ಡೇಶ್ವರ, ಶಿರಾಲಿ ಬಜಾರ್, ಶಿರಾಲಿ ಅಂಚೆ ಕಚೇರಿ ಮತ್ತು ಇವುಗಳ ಅಡಿ ಬರುವ ಶಾಖಾ ಅಂಚೆ ಕಚೇರಿಗಳಲ್ಲಿ ಮೂರು ದಿನಗಳ ಎಲ್ಲಾ ಕೆಲಸ ಕಾರ್ಯಗಳು ಸ್ಥಗಿತಗೊಳ್ಳಲಿದ್ದು ಅಂಚೆ ಗ್ರಾಹಕರು ಸಹಕರಿಸುವಂತೆ ಕಾರವಾರ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುರುಹಿನಶೆಟ್ಟಿ ಜಗದ್ಗುರುಗಳಿಂದ ಮಕ್ಕಳಿಗೆ ಯೋಗಾಭ್ಯಾಸ



ತೇರದಾಳ–ವಿಶ್ವ ಯೋಗ ದಿನದ ನಿಮಿತ್ತ ಇಲ್ಲಿನ ರಬಕವಿ ರಸ್ತೆಯ ಕುರುಹಿನಶೆಟ್ಟಿ ನೀಲಕಂಠೇಶ್ವರ ಶಿಕ್ಷಣ ಸಂಸ್ಥೆಯಲ್ಲಿ ಯೋಗ ದಿನಾಚರಣೆ ಆಚರಿಸಲಾಯಿತು. ಸಂಸ್ಥೆಯ ಹಾಗೂ ಸಮಾಜದ ಜಗದ್ಗುರು ಶಿವಶಂಕರ ಶಿವಾಚಾರ್ಯರು ತಾವೇ ಯೋಗ ಮಾಡುವ ಮೂಲಕ ವಿದ್ಯಾರ್ಥಿಗಳಿಗೆ ಯೋಗಾಭ್ಯಾಸ ಮಾಡಿಸಿದರು.

ಏಕಪಾದ ಪಶ್ಚಿಮೂರ್ತಾಸನ. ದ್ವಿಪಾದ ಪಶ್ಚಿಮೂರ್ತಾಸನ, ಚಕ್ರಾಸನ, ಧನುರಾಸನ, ಬಕಾಸನ, ಹನುಮಾನ ಬೈಟೆಕ್, ಸರ್ವಾಂಗಾಸನ, ತಾಡಾಸನ, ವೃಕ್ಷಾಸನ, ಗರುಡಾಸನ, ನಟರಾಜಾಸನ, ಹನುಮಾನ ನಮಸ್ಕಾರ, ಸೂರ್ಯ ನಮಸ್ಕಾರ ಸೇರಿದಂತೆ ವಿವಿಧ ಬಗೆಯ ಯೋಗಾಸನಗಳನ್ನು ಶ್ರೀಗಳು ಮಾಡುವ ಮೂಲಕ ಮಕ್ಕಳನ್ನು ಹುರುದುಂಬಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಜಗದ್ಗುರು ಶಿವಶಂಕರ ಶಿವಾಚಾರ್ಯ, ಯೋಗಾಸನ ಭಾರತ ದೇಶದ ಸಂಸ್ಕೃತಿಯಾಗಿದೆ. ಯೋಗದ ಮಹತ್ವವನ್ನು ಜಗತ್ತಿಗೆ ಸಾರಿದ ಕೀರ್ತಿ ಭಾರತ ದೇಶದ್ದು ಎಂದು ಹೇಳಲು ಹೆಮ್ಮೆ ಎನಿಸುತ್ತದೆ. ಆದ್ದರಿಂದ ಯೋಗವನ್ನು ಒಂದು ದಿನಕ್ಕೆ ಮಾತ್ರ ಸಿಮೀತಗೊಳಿಸಿದೆ ಪ್ರತಿದಿನ ಯೋಗ ಮಾಡುವ ಪ್ರವೃತ್ತಿ ರೂಢಿಸಿಕೊಳ್ಳಬೇಕೆಂದು ಸಲಹೆ ನೀಡಿದರು. ಆಡಳಿತ ಮಂಡಳಿ ಸಿಬ್ಬಂದಿ ಪಾಲ್ಗೊಂಡಿದ್ದರು.

# ಘಟಪ್ರಭಾದ ಸಂಘಟನೆಗಳಿಂದ ಯೋಗ ದಿನ ಆಚರಣೆ




ಘಟಪ್ರಭಾ. ಪ್ರತಿ ದಿನ ಕೆಲವೊಂದು ಸಮಯ ಯೋಗ ಮಾಡಿ ಶರೀರವನ್ನು ಸ್ವಾಸ್ತ್ಯ ಗೊಳಿಸಿ, ಸಧೃಡವಾಗಿ ಇಟ್ಟುಕೊಂಡು ಮುಂದೆ ಹೋಗಬೇಕೆಂದು ಹಿರಿಯ ಮುಖಂಡರಾದ ಸುರೇಶ ಪಾಟೀಲ ಮತ್ತು ಸಾಮಾಜಿಕ ಹೋರಾಟಗಾರರಾದ ಶ್ರೀಕಾಂತ ಕುಲಕರ್ಣಿ ಹೇಳಿದರು.

ಅವರು ಅಂತಾರಾಷ್ಟ್ರೀಯ ಯೋಗ ದಿನಾಚರಣೆ ನಿಮಿತ್ಯವಾಗಿ ಜೆ ಜಿ ಸಹಕಾರಿ ಆಸ್ಪತ್ರೆ, ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಜೈಂಟ್ಸ್ ಗ್ರೂಪ್ ಆಫ್ ಘಟಪ್ರಭಾ, ಶ್ರೀ ರಾಮ ಪ್ರಭಾತ ಶಾಖೆ ಇವುಗಳ ಸಂಯುಕ್ತ ಆಶ್ರಯದಲ್ಲಿ ಯೋಗ ಶಿಬಿರ ಸಭೆಯಲ್ಲಿ ಮಾತನಾಡಿದರು.

ಈ ಸಂದರ್ಭದಲ್ಲಿ ಭೂಪಾಲ್ ಖೆಮಲಾಪುರೆ, ಜಯಂತ ಶರ್ಮಾ ಅವರು ಮಾತನಾಡದರು. ಡಾ ವಿ ಬಿ ನಾಯಿಕವಾಡಿ, ವಿಠ್ಠಲ ಕೌಜಲಗಿ ಮುಂತಾದವರು ವೇದಿಕೆಯಲ್ಲಿ ಇದ್ದರು. ಎಲ್ ಎಸ್ ಹಿಡಕಲ್ ಸ್ವಾಗತಿಸಿದರು. ಡಾ ಎನ್ ವಾಯ್ ಪಾಟೀಲ, ರಮೇಶ್ ಕಬಾಡಗಿ, ಈಶ್ವರ ಚೌಗಲಾ, ಸುರೇಶ ಕರೋಶಿ, ಆನಂದ ದೇಶಪಾಂಡೆ, ಮಹಾದೇವ ಯರನಾಳ, ಸುಭಾಷ ಗಾಯಕ್ವಾಡ, ಗುರು ಚಚಡಿ, ಪ್ರಭುಲಿಂಗ ಅಂತರಗಂಗಿ, ಕೆಂಪಣ್ಣ ಚೌಕಾಶಿ, ಕಲ್ಲಪ್ಪ ಕಾಳಗೆ, ಸಂತೋಷ ದೇಶಪಾಂಡೆ, ಕೆ ಪಿ ಕಳ್ಳೀಮಠ, ಸಂದೀಪ ಪೇಟಕರ ಮುಂತಾದವರು ಭಾಗವಹಿಸಿದ್ದರು.

# ಆಧುನಿಕ ಜೀವನದಲ್ಲಿ ಯೋಗಕ್ಕೆ ಆದ್ಯತೆ ನೀಡಿ- ಸಂತೋಷ ಬಂಡೆ



ಇಂಡಿ: ಆಧುನಿಕ ಜೀವನ ಪದ್ಧತಿಯಲ್ಲಿ ಒತ್ತಡ ಹಾಗೂ ಆಹಾರ ಪದ್ಧತಿಯಿಂದಾಗಿ ದೇಹ ಸದೃಢವಾಗಿರಲು ಸಾಧ್ಯವಾಗುತ್ತಿಲ್ಲ. ಪೂರ್ಣ ಆಯಸ್ಸು ಪಡೆಯಬೇಕಾದರೆ ಯೋಗಕ್ಕೆ ಆಧ್ಯತೆ ನೀಡಬೇಕು ಎಂದು ತಿಳಿಸಿದರು.

ಶನಿವಾರದಂದು ತಾಲೂಕಿನ ಹಿರೇರೂಗಿ ಗ್ರಾಮದ ಕೆಬಿಎಸ್, ಕೆಜಿಎಸ್, ಯುಬಿಎಸ್ ಶಾಲೆಯಲ್ಲಿ ಹಮ್ಮಿಕೊಂಡ ಅಂತಾರಾಷ್ಟ್ರೀಯ ಯೋಗ ದಿನವನ್ನು ಉದ್ಧೇಶಿಸಿ ಅವರು ಮಾತನಾಡಿದರು.

ಭಾರತವು ವಿಶ್ವಕ್ಕೆ ಯೋಗದ ಮೂಲಕ ಶಾಂತಿಯನ್ನು ರಫ್ತು ಮಾಡಿದೆ. ಜೀವನದಲ್ಲಿ ಯೋಗವನ್ನು ಅಳಪಡಿಸಿಕೊಳ್ಳುವುದರಿಂದ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದರು.

ಶಿಕ್ಷಕ ಎಸ್ ಆರ್ ಚಾಳೇಕರ ಮಾತನಾಡಿ,'ಸದೃಢ ಆರೋಗ್ಯ ಹೊಂದಲು ಯೋಗ ಸಹಕಾರಿಯಾಗಿದ್ದು, ರೋಗಗಳಿಂದಲೂ ದೂರವಿರಬಹುದು. ವಿಶ್ವಕ್ಕೆ ಯೋಗವನ್ನು ಪರಿಚಯಿಸಿದ ಕೀರ್ತಿ ಭಾರತಕ್ಕೆ ಸಲ್ಲುತ್ತದೆ' ಎಂದು ಹೇಳಿದರು.

ಕೆಬಿಎಸ್ ಮುಖ್ಯ ಶಿಕ್ಷಕ ಅನಿಲ ಪತಂಗಿ ಮಾತನಾಡಿ, ಯೋಗವು ಮನುಷ್ಯನ ಮನಸ್ಸು ಏಕಾಗ್ರಗೊಳಿಸುವ ಶಿಕ್ಷಣ ಕ್ರಮವಾಗಿದೆ. ಯೋಗವು ಸೀಮಿತ ಧರ್ಮ, ಜಾತಿ, ಪಂಗಡ ರಾಷ್ಟ್ರೀಯತೆಗಳ ಭೇದ ಮೀರಿ ನಿಂತಿದೆ. ಇದು ಒಂದು ರಾಷ್ಟ್ರೀಯ ಭಾವೈಕ್ಯತೆ ಸಮನ್ವಯ ಜೀವನದ ಶಿಕ್ಷಣವಾಗಿದೆ ಎಂದರು.

ಮುಖ್ಯ ಶಿಕ್ಷಕ ಎಸ್ ಎಸ್ ಅರಬ ಹಾಗೂ ಶಿಕ್ಷಕರಾದ ಎಸ್ ಎಂ ಪಂಚಮುಖಿ, ಸುರೇಶ ದೊಡ್ಯಾಳಕರ, ಜೆ ಎಂ ಪತಂಗಿ, ಸಾವಿತ್ರಿ ಸಂಗಮದ, ಎಸ್ ಎನ್ ಡಂಗಿ, ಎಸ್ ಬಿ ಕುಲಕರ್ಣಿ, ಎಸ್ ಡಿ ಬಿರಾದಾರ, ಎಫ್ ಎ ಹೊರ್ತಿ, ಶ್ರದ್ಧಾ ಬಂಕಲಗಾ, ಎಸ್ ವ್ಹಿ ಬೇನೂರ, ಸುಮಿತ್ರಾ ನಂದಗೊಂಡ, ಜೆ ಸಿ ಗುಣಕಿ, ಎನ್ ಬಿ ಚೌಧರಿ, ಎಸ್ ಪಿ ಪೂಜಾರಿ, ಅತಿಥಿ ಶಿಕ್ಷಕರಾದ ಬಿ ಎಸ್ ಹೊಸೂರ, ಪ್ರಜ್ವಲ ಕುಲಕರ್ಣಿ, ಅಲ್ಫಿಯಾ ಅಂಗಡಿ ಸೇರಿದಂತೆ ಅನೇರು, ಶಾಲಾ ಮಕ್ಕಳು ಭಾಗವಹಿಸಿದ್ದರು.

# ಮೀನುಗಾರರಿಂದ ಅರ್ಜಿ ಆಹ್ವಾನ

ಬಾಗಲಕೋಟ, : 2025–26ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ಜಿಲ್ಲಾ ವಲಯ ಯೋಜನೆಯಡಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ಮೀನುಗಾರರಿಗೆ ಉಚಿತವಾಗಿ ಮೀನುಗಾ–ರಿಕಾ ಸಲಕರಣೆ ಕಿಟ್ಟುಗಳನ್ನು ವಿತರಿಸಲಾಗುವುದು. ಮೀನುಗಾರಿಕೆಯಲ್ಲಿ ಅನುಭವ ಹೊಂದಿರುವ ಅರ್ಹ ಸಾಮಾನ್ಯ ವರ್ಗ, ಮಹಿಳೆಯರಿಗೆ, ಅಲ್ಪಸಂಖ್ಯಾತ–ರಿಗೆ ಮತ್ತು ಅಂಗವಿಕಲರಿಗೆ ಮೀನು ಮಾರಾಟಕ್ಕೆ ದ್ವಿಚಕ್ರ ವಾಹನ ಖರೀದಿಗೆ ಸಹಾಯ, ರಾಜ್ಯ ವಲಯ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಮೀನುಗಾರಿಕೆ ಸಲಕರಣೆ ಕಿಟ್ (ಹರಿಗೋಲು, ಹುಟ್ಟು, ಬಲೆ ಜೀವರಕ್ಷಕ ಸಾಧನಗಳನ್ನು) ಉಚಿತವಾಗಿ ವಿತ–ರಿಸುವುದು, ಕೆರೆ ಅಂಚಿನಲ್ಲಿ ಮೀನುಮರಿ ಪಾಲನೆಗೆ ಸಹಾಯ, ಮೀನುಮರಿ ಖರೀದಿಗೆ ಸಹಾಯಧನ ಯೋಜನೆಗಳನ್ನು ಪಾರದರ್ಶಕವಾಗಿ ಹಾಗೂ ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಬಾಗಲಕೋಟೆ ಜಿಲ್ಲೆಯ ಅರ್ಹ ಮೀನುಗಾರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಯೋಜನೆಗಳ ಸೌಲಭ್ಯ ಪಡೆಯಲು ಮೀನುಗಾರಿಕೆ ಸಹಾಯಕ ನಿರ್ದೇಶಕರು, ಬಾದಾಮಿ, ಜಮಖಂಡಿ ಕಛೇರಿಗಳಿಂದ ಮಾಹಿತಿ/ಅರ್ಜಿಗಳನ್ನು ಪಡೆದು, ನಿಯಮಾನುಸಾರ ಅವಶ್ಯ ದಾಖಲೆಗಳೊಂದಿಗೆ ಅರ್ಜಿಗಳನ್ನು ಜುಲೈ.18 ರೊಳಗೆ ಮೀನುಗಾರಿಕೆ ಸಹಾಯಕ ನಿರ್ದೇಶಕರು, ಬಾದಾಮಿ, ಜಮಖಂಡಿ ಕಛೇರಿಗಳಿಗೆ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕರು, ಬಾದಾಮಿ, ಜಮಖಂಡಿ ಕಛೇ–ರಿಯನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬೇಕೆಂದು ಮೀನುಗಾರಿಕೆ ಉಪನಿರ್ದೇಶಕರಾದ ಅಂಜನಾದೇವಿ. ಟಿ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಸಕ್ಕರೆ ರಫ್ತಿಗೆ ಅನುಮತಿ ನೀಡಲು ಕೇಂದ್ರ ಸರ್ಕಾರಕ್ಕೆ ಆಗ್ರಹ

## ಕಬ್ಬು ಬೆಳೆಗಾರರ ಹಿತರಕ್ಷಣೆಗೆ ಆದ್ಯತೆ ನೀಡಲು ಸಕ್ಕರೆ ಸಚಿವರ ಮನವಿ

ಬೆಳಗಾವಿ: ಸಕ್ಕರೆ ರಫ್ತು ಮಾಡಲು ಕಾರ್ಖಾನೆಗಳಿಗೆ ಅನುಮತಿ ನೀಡಬೇಕೆಂದು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವ ಶಿವಾನಂದ ಪಾಟೀಲ ಅವರು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯ ವಾರ್ಷಿಕ ಸರ್ವಸಾಧಾರಣ ಮಹಾ ಸಭೆಯ ನಂತರ ತಮ್ಮನ್ನು ಭೇಟಿ ಮಾಡಿದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಕೇಂದ್ರ ಸರ್ಕಾರ ಸಕ್ಕರೆ ರಫ್ತು ಮಾಡಲು ಅನುಮತಿ ನೀಡಿದರೆ ಮಾತ್ರ ಕಬ್ಬು ಬೆಳೆಗಾರರ ಹಿತರಕ್ಷಣೆ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಕಬ್ಬು ಬೆಳೆಗಾರರಿಗೆ ಬಾಕಿ ಬಿಲ್ ಪಾವತಿ ಮಾಡಲು ಕಾರ್ಖಾನೆಗಳಿಗೆ ಸಕ್ಕರೆ ರಫ್ತಿಗೆ ಅನುಮತಿ ಇದ್ದರೆ ಸಮಸ್ಯೆಯಾಗದು. ರಫ್ತಿಗೆ ಅನುಮತಿ ನೀಡದ ಕಾರಣ ಹಲವು ಕಾರ್ಖಾನೆಗಳು ರೈತರಿಗೆ ಕಬ್ಬಿನ ಬಿಲ್ ಬಾಕಿ ಉಳಿಸಿಕೊಂಡಿವೆ. ಬಿಲ್ ಪಾವತಿ ಮಾಡಲು ಕಾರ್ಖಾನೆಗಳ ಬಳಿ ಪ್ರತ್ಯೇಕ ಬಂಡವಾಳ ಇರುವುದಿಲ್ಲ. ಕೇಂದ್ರ ಸರ್ಕಾರ ಇದನ್ನು ಮನಗಂಡು ರೈತರ ಹಿತರಕ್ಷಣೆಯ ಪೂರಕ ಕ್ರಮಗಳನ್ನು ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ತೊಗರಿ ನಮ್ಮಲ್ಲೆ ಗಣನೀಯ ಪ್ರಮಾಣದಲ್ಲಿ ಬೆಳೆಯಲಾಗುತ್ತಿದೆ. ಆದರೂ, ಆಮದು ಮಾಡಿಕೊಳ್ಳಲು ಕೇಂದ್ರ ಸರ್ಕಾರ ಅನುಮತಿ ನೀಡಿದೆ. ಇದರಿಂದ ತೊಗರಿ ಬೆಲೆ ಕೆ.ಜಿ.ಗೆ ರೂ.90/– ಗೆ ಕುಸಿದಿದೆ. ಹೀಗಾಗಿ, ಯಾವುದನ್ನು ಆಮದು ಮಾಡಿಕೊಳ್ಳಬೇಕು, ಯಾವುದನ್ನು ರಫ್ತು ಮಾಡಲು ಅನುಮತಿ ನೀಡಬೇಕು ಎಂಬ ಬಗ್ಗೆ ಕೇಂದ್ರ ಚಿಂತಿಸಬೇಕು. ಈರುಳ್ಳಿ ಮತ್ತು ಟೊಮ್ಯಾಟೊ ಬೆಲೆ ಕುಸಿದು ರೈತರು ಅವುಗಳನ್ನು ರಸ್ತೆಗೆ ಸುರಿಯುವ ಪರಿಸ್ಥಿತಿ ಬರಬಾರದು. ಈ ನಿಟ್ಟಿನಲ್ಲಿ ಕೇಂದ್ರ ಚಿಂತನೆ ಮಾಡಬೇಕು ಎಂದು ಹೇಳಿದರು.

# ಯೋಗದಿಂದಲೇ ಮನಸ್ಸು ಸಂತೋಷಗೊಳ್ಳುವುದು-ವಸ್ತ್ರದ





ತೇರದಾಳ–ಯೋಗಕ್ಕೆ ಇರುವ ಶಕ್ತಿ ಬಹಳಷ್ಟು ದೊಡ್ಡದು. ಮನುಷ್ಯ ನಿಜವಾಗಿ ಯೂ ಸಂತೋಷ ವಾಗಿರಬೇಕು ಎಂದರೆ ಪ್ರತಿದಿನ ಯೋಗ ಮಾಡುವುದನ್ನು ರೂಢಿಸಿಕೊಳಳ್ಳಬೇಕೆಂದು ರಬಕ 'ವಿಯ ಯೋಗಪಟು ಪತ್ರಕರ್ತ ಬಸಯ್ಯ ವಸ್ತ್ರದ ಹೇಳಿದರು.

ಇಲ್ಲಿನ ಸಿದ್ಧೇಶ್ವರ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಯೋಗ ಹೇಳಿ ಮಾತನಾಡಿದರು.

ಇಂದು ಮನುಷ್ಯ ಸಾಕಷ್ಟು ಒತ್ತಡದ ಜೀವನ ನಡೆಸುತ್ತಿರುವುದರಿಂದ ಆರೋಗ್ಯದ ಮೇಲೆ ಪರಿಣಾಮ ಬೀರುವಂತಾಗುತ್ತಿದೆ. ಆದ–'ರೆ ಉತ್ತಮ ಆರೋಗ್ಯಕ್ಕಾಗಿ ಯೋಗ ಬಹಳಷ್ಟು ಅವಶ್ಯಕತೆ ಇದೆ ಎಂಬುದನ್ನು ಅರಿಯಬೇಕೆಂದು ಹೇಳಿದರು. ಸಂಸ್ಥೆ ಅಧ್ಯಕ್ಷ ಡಾ. ಶಂಕರ ಅಥಣಿ ಅಧ್ಯಕ್ಷತೆ ವಹಿಸಿದ್ದರು. ಮುಖ್ಯಗುರು ಬಿ.ಟಿ. ಪತ್ತಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಚೇರಮನ್ ಮಹೇಶ ಯಾದವಾಡ, ಪ್ರೌಢ ವಿಭಾಗದ ಮಹೇಶ ಹಂಜಿ, ಪ್ರಾಥಮಿಕ ವಿಭಾಗದ ಕಾಶಿನಾಥ ತಳ್ಳಿ, ಡಿ.ಎ. ಉಗಾರ ಇದ್ದರು.

# ಇಡೀ ವಿಶ್ವಕ್ಕೆ ಯೋಗ ಕಲಿಸಿದ್ದು ಭಾರತ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್

# ಯೋಗವೇ ನನ್ನ ಆರೋಗ್ಯದ ಗುಟ್ಟು: ಸಚಿವೆ ಲಕ್ಷ್ಮೀ ಹೆಬ್ಬಾಳಕರ್




ಉಡುಪಿ: ಇಡೀ ವಿಶ್ವವೇ ಭಾರತದ ಆರೋಗ್ಯ ಪದ್ಧತಿಯನ್ನು ಅಳವಡಿಸಿಕೊಂಡಿದೆ. ಪ್ರತಿಯೊಬ್ಬರು ಯೋಗವನ್ನು ನಿತ್ಯ ಪರಂಪರೆಯಾಗಿ ಅಳವಡಿಸಿಕೊಳ್ಳಬೇಕು, ಪ್ರತಿದಿನ ಕನಿಷ್ಠ 30 ನಿಮಿಷವಾದರೂ ಯೋಗ ಮಾಡಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಅಜ್ಜರಕಾಡುವಿನಲ್ಲಿರುವ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಶನಿವಾರ ನಡೆದ 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ಯೋಗದಿಂದ ಮಾತ್ರ ಮನಸ್ಸಿಗೆ ಉಲ್ಲಾಸ ಸಿಗುತ್ತದೆ ಎಂದರು.

ನಾನು ಕಳೆದ 25 ವರ್ಷಗಳಿಂದ ಯೋಗಾಭ್ಯಾಸ ಮಾಡುತ್ತಿದ್ದೇನೆ. ನಾನು ದಿನಕ್ಕೆ 15 ಗಂಟೆ ಕೆಲಸ ಮಾಡುವ ಸಾಮರ್ಥ್ಯದ ಹಿಂದೆ ಯೋಗವಿದೆ. ಇದೇ ಜನವರಿ 14 ರಂದು ನನಗೆ ಅಪಘಾತ ಆಯಿತು, ಬೆನ್ನು ನೋವಿನಿಂದಾಗಿ ಇಂದು ಯೋಗ ಮಾಡಲು ಸಾಧ್ಯವಾಗಲಿಲ್ಲ ಎಂದು ಹೇಳಿದರು.

ನಾನು ವಾರಕ್ಕೆ ಐದು ದಿನ ಯೋಗ ಮಾಡುತ್ತೇನೆ. ಇವತ್ತಿನ ಆಧುನಿಕ ಜಗತ್ತಿನಲ್ಲಿ ಯೋಗ ಬೇಕೇ ಬೇಕು. ಪ್ರತಿ ದಿನ 25 ರಿಂದ 50 ಸೂರ್ಯ ನಮಸ್ಕಾರ ಮಾಡುತ್ತಿದ್ದೆ. ಭುಜಂಗಾಸನ, ವೀರಭದ್ರಾಸನ, ಪ್ರಾಣಾಯಾಮ ನನ್ನ ಆರೋಗ್ಯದ ಗುಟ್ಟು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಉಡುಪಿ ಜಿಲ್ಲೆ ಎಸ್‌ಎಸ್ ಎಲ್ಸಿಯಲ್ಲಿ ಎರಡನೇ, ಪಿಯುಸಿಯಲ್ಲಿ ಮೊದಲ ಸ್ಥಾನ ಪಡೆದಿದ್ದು, ಶೈಕ್ಷಣಿಕವಾಗಿ ಜಿಲ್ಲೆ ತನ್ನ ಸಾಮರ್ಥ್ಯ ಹೆಚ್ಚಿಸಿಕೊಂಡಿದೆ. ದೇಶದ ಸಂಸ್ಕೃತಿ ಆಚಾರ, ವಿಚಾರವನ್ನು ಎಲ್ಲರೂ ಅಳವಡಿಸಿ ಕೊಳ್ಳಬೇಕು, ತಂದೆ ತಾಯಂದಿರು ನಮ್ಮ ಮಕ್ಕಳೇ ನಮಗೆ ಆಸ್ತಿ ಎನ್ನುತ್ತಾರೆ. ಮಕ್ಕಳು ಕೂಡ ನಮ್ಮ ತಂದೆ ತಾಯಿಯೇ ನಮ್ಮ ಆಸ್ತಿ ಎನ್ನುವಂತೆ ಆಗಲಿ ಎಂದು ಹೇಳಿದರು.

ಯೋಗವೆಂದರೆ ಕೇವಲ ವ್ಯಾಯಾಮ, ಪ್ರಾಣಾಯಾಮ ಮಾತ್ರ ಅಲ್ಲ, ಅದೊಂದು ಆರೋಗ್ಯಕರ ಜೀವನದ ವಿಧಾನ, ಯೋಗವಿದ್ದಲ್ಲಿ ರೋಗವಿಲ್ಲ, ಯೋಗವೇ ಭೋಗವಾದರೆ ಮನುಷ್ಯನ ಎಲ್ಲಾ ಚಟುವಟಿಕೆಗಳು ಸ್ವಾಭಿಮಾನದ ಸ್ವಾತಂತ್ರ್ಯವನ್ನು ಗಳಿಸುತ್ತದೆ. ನಮ್ಮ ಪ್ರಧಾನಿ ಮೋದಿ ಅವರು ಇಡೀ ವಿಶ್ವಕ್ಕೆ ಯೋಗದ ಮಹತ್ವದ ಬಗ್ಗೆ ಹೇಳಿಕೊಟ್ಟರು ಎಂದರು.

ಈ ವೇಳೆ ಶಾಸಕ ಯಶ್ಪಾಲ್ ಸುವರ್ಣ, ಗುರ್ಮೆ ಸುರೇಶ್ ಶೆಟ್ಟಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಅಶೋಕ್ ಕೊಡವೂರು, ಪ್ರವಾಸ್ ರಾಜ್ ಕಾಂಚನ್, ರಮೇಶ್ ಕಾಂಚನ್, ಜಿಲ್ಲಾಧಿಕಾರಿ ಸ್ವರೂಪ. ಟಿ.ಕೆ, ಜಿಲ್ಲಾ ಪಂಚಾಯತ್ ಸಿಇಒ ಪ್ರತೀಕ್ ಬಾಯಲ್, ಡಿಎಫ್ ಒ ಗಣಪತಿ, ಜಿಲ್ಲಾ ಆಯುಷ್ ಅಧಿಕಾರಿ ಡಾ.ಸತೀಶ್ ಆಚ–ಾರ್ಯ, ಕ್ರೀಡಾ ಇಲಾಖೆ ಉಪ ನಿರ್ದೇಶಕ ರೋಷನ್ ಶೆಟ್ಟಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅರ್ಜಿ ಆಹ್ವಾನ

ಬಾಗಲಕೋಟ, : ಪ್ರಸಕ್ತ ಸಾಲಿನ ನಗರ ಆಶ್ರಯ ಯೋಜನೆ ಅಡಿಯಲ್ಲಿ ಬಡ,ವಸತಿ–ನಿವೇಶನ ರಹಿತ ನಾಗರಿಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಬಿಎಲಸಿ, ಎಎಚಪಿ, ಐಆರಪಿ, ಐಎಸ್ಸಿ ಯೋಜನೆಗಳಡಿಯಲ್ಲಿ ಅರ್ಜಿ ಸಲ್ಲಿಸಲು **https://pmay-urban.gov.in** ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ,ನಕಲು ಪ್ರತಿಯನ್ನು ನಗರಸಭೆಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ನಗರಸಭೆಯ ವಸತಿ ಶಾಖೆಯನ್ನು ಸಂಪರ್ಕಿಸಬಹುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂ.23 ರಂದು ಉದ್ಯೋಗ ಮೇಳ

ಬಾಗಲಕೋಟ, : ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಜೂ.23 ರಂದು ನಾರಾಯಣ ಹುಂಡೈ ಶೋರೂಮ್ ಹುಬ್ಬಳಿ ಬೈಪಾಸ್,ನವನಗರ ನಲ್ಲಿ ಬೆಳಗ್ಗೆ 10:30 ರಿಂದ 4:30 ವರೆಗೆ ನೇರ ಸಂದರ್ಶನ ನಡೆಯಲಿದೆ. ಬ್ರ್ಯಾಂಚ ಮ್ಯಾನೆಜರ್, ಸೇಲ್ಸ್ ಎಕ್ಸಿಕ್ಯುಟೀವ್, ಸರ್ವಿಸ್ ಅಡ್ವೈಸರ್ ಟೇಕ್ನಿಸಿಯನ್, ಮೇಕ್ಯಾನಿಕ್ ಮತ್ತು ಪೈಂಟ–ರ್ ಹುದ್ದೆಗಳಿಗೆ ನೇಮಕಾತಿ ನಡೆಯಲಿದ್ದು, 19 ರಿಂದ 27ರ ವಯೋಮಿತಿಯಲ್ಲಿನ ಎಸ್‌ಎಸ್–ಎಲ್‌ಸಿ , ಪಿಯುಸಿ , ಐಟಿಐ ಹಾಗೂ ಯಾವುದೇ ಪದವೀಧರರು ತಮ್ಮ ಬಯೋ ಡೆಟಾ ಮತ್ತು ಮೂಲ ಅಂಕ ಪಟ್ಟಿ ಪ್ರತಿಗಳೊಂದಿಗೆ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ.08354–235337, 7676692029 ಸಂಪರ್ಕಿಸಬಹುದು.

## ಸಂಶೋಧನಾ ಸಹಾಯಕರ ನೇಮಕಕ್ಕೆ ಅರ್ಜಿ

ಬಾಗಲಕೋಟ, : ಕರ್ನಾಟಕ ಬಯಲಾಟ ಅಕಾಡೆಮಿ ಅಡಿಯಲ್ಲಿ ಬಯಲಾಟದ ಕಲಾ ಪ್ರಕಾರಗಳ ಉಳಿವಿಗಾಗಿ ಕಲಾವಿದರ ಸಾಂಸ್ಕೃತಿ–ಕ ಚರಿತ್ರೆಯನ್ನು ದಾಖಲಿಸಲು ಮತ್ತು ಬಯಲಾಟದ ಕಲಾ ಪ್ರತಿಗಳ ಹಸ್ತಪ್ರತಿಗಳನ್ನು ಸಂಗ್ರಹಿಸಲು ಬೆಂಗಳೂರು ಮತ್ತು ಮೈಸೂರು ವಿಭಾಗದ ವ್ಯಾಪ್ತಿಯ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ರಾಮನಗರ, ಶಿವಮೊಗ್ಗ, ತುಮಕೂರು, ಮೈಸೂರು, ಮಂಡ್ಯ, ಕೊಡಗು, ಚಾಮರಾಜನಗರ, ಹಾಸನ, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಮತ್ತು ಉಡುಪಿ ಜಿಲ್ಲೆಗಳಿಗೆ ಪ್ರತಿ ಜಿಲ್ಲೆಗೆ ಒಬ್ಬರಂತೆ ಎರಡು ತಿಂಗಳ ಅವಧಿಗೆ ಸಂಶೋದನಾ ಸಹಾಯಕರನ್ನು ನೇಮಿಸಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಎಂ.ಎ (ಜಾನಪದ, ಕನ್ನಡ, ಇಂಗ್ಲೀಷ್, ಸಮಾಜ ಕಾರ್ಯ, ಭಾಷಾಶಾಸ್ತ್ರ ಇತರೆ ಮಾನವಿಕ) ಮತ್ತು ಸಮಾಜ ವಿಜ್ಞಾನ ಸ್ನಾತಕೋತ್ತರ ಪದವಿ ಪೂರೈಸಿದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿಯನ್ನು ಜುಲೈ 15 ರೊಳಗಾಗಿ ರಿಜಿಸ್ಟ್ರಾರ್, ಕರ್ನಾಟಕ ಬಯಲಾಟ ಅಕಾಡೆಮಿ, ಸೆಕ್ಟರ್ ನಂ.19, ಕಲಾಭವನ, ಸಾಂಸ್ಕೃತಿಕ ಸಂಕೀರ್ಣ, ನವನಗರ, ಬಾಗಲಕೋಟೆ ಹೆಚ್ಚಿನ ವಿವರಗಳಿಗಾಗಿ ದೂ.ಸಂ.08354–235070, 8970678147 ಇವರಿಗೆ ಸಲ್ಲಿಸಬೇಕು ಎಂದು ಕರ್ನಾಟಕ ಬಯಲಾಟ ಅಕಾಡೆಮಿ ರಿಜಿಸ್ಟ್ರಾರ್ ಕಸ್ತೂರಿ ಪಾಟೀಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಪರಾಧ ತಡೆಗೆ ಪೋಲೀಸ್ ದೂರವಾಣಿ ಸಂಖ್ಯೆ 112 ಹೊಸ ತಂತ್ರಜ್ಞಾನ ನಾಗರಿಕ ಸುರಕ್ಷಾ ಸೇವೆ ಕೊಡುಗೆ



ಧಾರವಾಡ ಜೂ.20: ಅಪರಾಧ ತಡೆಗೆ ಪೊಲೀಸ್ ದೂರವಾಣಿ ಸಂಖ್ಯೆ 112 ನಾಗರಿಕ ಸುರಕ್ಷಾ ಸೇವೆ ಕೊಡುಗೆಯಾಗಿದೆ.. ದೂರು ಕರೆ ಮಾಡಿದ 3 ರಿಂದ 6 ನಿಮಿಷಗಳಲ್ಲಿ ಡಿಜಿಟಲ್ ಆಧಾರಿತ ದೂರು ದಾಖಲಾಗಿ, ವೈಜ್ಞಾನಿಕ ಹೊಸ ತಂತ್ರಜ್ಞಾನ ಅಳವಡಿಕೆಯಿಂದ ಘಟನಾ ಸ್ಥಳಕ್ಕೆ ಪೊಲೀಸ್ ತಂಡ ಆಗಮಿಸಲಿದೆ. ಇದರ ಸದುಪಯೋಗ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಡೆದುಕೊಳ್ಳ ಬೇಕೆಂದು ವಿದ್ಯಾಗಿರಿ ಪೊಲೀಸ್ ಠಾಣೆ ಪೊಲೀಸ್ ಇನ್ಸ್‌ಫೆಕ್ಟರ್ ಮುಖ್ಯ ಮಂತ್ರಿಗಳ ಪದಕ ವಿಜೇತ ಶ್ರೀ ಸಂಗಮೇಶ ದೀಡಿಗಿನಾಲ್ ಅವರು ತಿಳಿಸಿದರು.

ಅವರು ನಿನ್ನೆ (ಜೂ.19) ರಂದು ಧಾರವಾಡ ಸರಸ್ವತಪೂರ ರಹವಾಸಿಗಳ ಸಂಘ ವಿಜಯಲಕ್ಷ್ಮೀ ಗುಗ್ಗಳಿ ಅವರ ಮನೆ ಆವರಣದಲ್ಲಿ ಸಾರ್ವಜನಿಕ ಕುಂದುಕೊರತೆ ಸಭೆ ಮತ್ತು ಮುಖ್ಯ ಮಂತ್ರಿಗಳ ಪದಕ ವಿಜೇತ ಸನ್ಮಾನ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಕಳ್ಳತನ, ಹಿರಿಯನಾಗರಿಕ ಸಮಸ್ಯೆಗಳು, ಹೆಣ್ಣು ಮಕ್ಕಳ ದೌಜನ್ಯ, ಫೋಕ್ಸೊ ಅಪರಾಧ ಪ್ರಕರಣ ಪತ್ತೆ ಹಚ್ಚಲು, ಡಿಜಿ–ಟಿಲ್ ದೂರು (ದಾಖಲೆ) ಕರೆ, ಹೊಸ ವೈಜ್ಞಾನಿಕ ತಂತ್ರಜ್ಞಾನ ಅಳವಡಿಕೆ, ಸಿಸಿಟಿವಿ ಪೂಟೇಜ್‌ಗಳು ಸಹಕಾರಿಯಾಗಿವೆ. ಠಾಣೆ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಿಲ್ಲಿ ಹೆಚ್ಚಾಗಿ ಫೊಕ್ಸೊ ಪ್ರಕರಣಗಳು ದಾಖಲಾಗಿವೆ. ಮನೆ ಕಳ್ಳತನ ಕಡಿವಾಣ ಹಾಕಿ ಪತ್ತೆ ಹಚ್ಚಿ ಬಂಧಿಸಲು ಸಹಕಾರಿಯಾಗಿವೆ, ಅಪರಾಧ ರಾತ್ರಿ ನಡೆಯುವ ಸ್ಥಳದಲ್ಲಿ ಹೊಸ ವೈಜ್ಞಾನಿಕ ತಂತ್ರಜ್ಞಾನ ಅಳವಡಿಕೆ, ಬೀಟ್ (ಪೊಲೀಸ್ ಪಹರೆ) ಮಾಡಲಾಗುತ್ತಿದೆಂದು, ಹಾಗೂ ಠಾಣೆ ಗಮನಕ್ಕೆ ಬಂದ ಸಮಸ್ಯೆಗಳ ಬಗ್ಗೆ ಕ್ರಮ ಜರುಗಿಸಲಾಗುತ್ತಿದೆ ಎಂದು ಶ್ರೀ. ಸಂಗಮೇಶ ದೀಡಿಗಿನಾಲ್ ಅವರು ತಿಳಿಸಿದರು.

ರಹವಾಸಿಗಳ ಸಂಘದ ಅಧ್ಯಕ್ಷರಾದ ವಿಜಯಲಕ್ಷ್ಮೀ ಗುಗ್ಗಳಿ ಕುಂದುಕೊರತೆ ಬಗ್ಗೆ ತಿಳಿಸಿದರು. ಶ್ರೀ ಸಂಗಮೇಶ ದೀಡಿಗಿನಾಳ್ ವಿದ್ಯಾಗಿರಿ ಸಿಪಿಐ ಮಾನ್ಯ ಮುಖ್ಯ ಮಂತ್ರಿಗಳ ಪದಕ ವಿಜೇತರನ್ನು ಫಲಪುಷ್ಪ ಶಾಲು ಹೊದಿಸಿ, ಸನ್ಮಾನಿಸಿದರು.

ಸಂಘದ ಕಾರ್ಯದರ್ಶಿಗಳಾದ ಸಿದ್ದು ಪಾಟೀಲ ಪರಿಚಯ ಮಾಡಿ, ಸ್ವಾಗತಿಸಿದರು. ಖಜಾಂಚಿ ಕವಿಯತ್ರಿ ರಾಧಾ ಶ್ಯಾಮ್, ಇಂದಿರಾ ಪ್ರಸಾದ, ಎಸ್.ಎನ್.ಕುಲಕರ್ಣಿ, ಪದಾಧಿಕಾರಿಗಳಾದ ಎಮ್.ಆರ್. ಹಂಪಸಾಗರ, ಸುಧೀಂದ್ರ ಕುಲಕರ್ಣಿ, ಎಸ್.ವ್ಹಿ. ಮುತಾಲಿಕ ದೇಸಾಯಿ, ಡಾ. ಸಿ.ಬಿ. ಪುರಾಣಿಕ, ಇಂದಿರಾ ಪ್ರಸಾದ್, ಅಶೋಕ ಇರಡ್ಡಿ, ಪ್ರಮೋದ ಡಿ. ಪಾಟೀಲ, ಪ್ರದೀಪ ಎಚ್. ಶೆಟ್ಟಿ, ಸುಧಾ ಅರಿಕೆರಿ, ಅನಂತ ವ್ಹಿ. ಮಹಾಲೆ ಹಾಗೂ ಸದಸ್ಯರಾದ ರಾಜೇಶ್ವರಿ ಎಮ್.ಕುಲಕರ್ಣಿ, ಕೆ.ಕೆ.ಕುಲಕರ್ಣಿ, ಸಿ.ಬಿ. ಭೋವಿ, ಶಾರಧಾ ದೊಡ್ಡಮನಿ, ಎಸ್.ಡಿ.ಕುಲಕರ್ಣಿ, ಸುಧೀಂದ್ರ ರಾವ್ ಸುಂಕದ, ವಿ.ಎಸ್.ಹರ್ತಿ, ಮಧುಸೂದನ ಕೆ.ವಿ., ಸಿ.ಎ ಬಂಕಾಪೂರ, ಸುರೇಶ. ಎಸ್. ಹಂಪಣ್ಣನವರ, ಅನೀಲ. ಜಿ. ಪುರಾಣಿಕ, ನಾಗರಾಜ.ಎಮ್.ಪಿ., ಲಕ್ಷ್ಮಣ, ಡಾ. ಸಂಗೀತಾ ಪಿ. ಸಾಂಬ್ರಾಣಿ, ಅಮರಾಜ ಪಿ. ಪಾಟೀಲ, ಅನಿಲ ಸಾಣಿಕೊಪ್ಪ ಮತ್ತು ಶಕುಂತಲಾ ಪಿ. ವಿಠೋಜಿ ಅವರು ತಮ್ಮ ತಮ್ಮ ಕುಂದುಕೊರತೆಗಳ ಬಗ್ಗೆ ವಿವ–ರಿಸಿದರು.

## ನರಗುಂದ ಶಾಸಕ ಸಿ.ಸಿ.ಪಾಟೀಲ ಅವರಿಂದ ವಿವಿಧ ಕಾಮಗಾರಿಗಳಿಗೆ ಚಾಲನೆ

# ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು



ಗದಗ : ಶೈಕ್ಷಣಿಕ, ಸಾಮಾಜಿ–ಕ, ವಿವಿಧ ಅಭಿವೃದ್ಧಿಗಳಿಗೆ ಕೈಗೊಳ್ಳುತ್ತಿರುವ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು ಎಂದು ನರಗುಂದ ಶಾಸಕ ಸಿ.ಸಿ.ಪಾಟೀಲ ತಿಳಿಸಿದರು.

ಹೊಂಬಳ ಗ್ರಾಮದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶುಕ್ರವಾರ ಭೂಮಿ ಪೂಜೆ ಹಾಗೂ ಉದ್ಘಾಟನಾ ಕಾರ್ಯಕ್ರಮ ನೆರವೇರಿಸಿ ಅವರು ಮಾತನಾಡಿದರು.

ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ ಕಾರ್ಯಕ್ರಮ: 2024–25 ನೇ ಸಾಲಿನ ಹೊಂಬಳ ಗ್ರಾಮದ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ, ಹೊಂಬಳ ಗ್ರಾಮದ 5 ನೇ ವಾರ್ಡಿನ ರಘು ಬಸಪ್ಪ ಹುಣಸಿಮರದ ಇವರ ಮನೆಯಿಂದ ಬಸವರಾಜ ಹುಣಸಿಮರದ ಇವರ ಮನೆಯವರಿಗೆ ಸಿ.ಸಿ.ಗಟಾರ ಸಿ.ಡಿ. ನಿರ್ಮಾಣ ಕಾಮಗಾರಿ ಭೂಮಿ ಪೂಜೆ, ಹೊಂಬಳ ಗ್ರಾಮದ ಶ್ರೀ ಹೊನ್ನಕೇರಿ ಮಲ್ಲಯ್ಯ ಸಮುದಾಯ ಭವನ ನಿರ್ಮಾಣ ಭೂಮಿ ಪೂಜೆ , ಹೊಂಬಳ ಗ್ರಾಮದ ಹರಣಸಿಕಾರಿ ಜನಾಂಗದ ಸಮುದಾಯ ಭವನ ನಿರ್ಮಾಣ ಒಟ್ಟಾರೆ ಅಂ–ದಾಜು ಮೊತ್ತ 418 ಲಕ್ಷ ರೂ. ವೆಚ್ಚದ ಮೇಲ್ಕಂಡ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.

ಕಾಮಗಾರಿಗಳ ಉದ್ಘಾಟನೆ : ಅಂ–ದಾಜು ಮೊತ್ತ 25.30 ಲಕ್ಷ ರೂ. ವೆಚ್ಚದ ಹೊಂಬಳ ಗ್ರಾಮದ ಸರಕಾರಿ ಮಾದ–ರಿಯ ಪ್ರಾಥಮಿಕ ಶಾಲೆಯ 4 ಕೊಠಡಿಗಳ ಉದ್ಘಾಟನೆ, ಅಂದಾಜು ಮೊತ್ತ 13.90 ಲಕ್ಷ ರೂ. ವೆಚ್ಚದ ಹೊಂಬಳ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಎಂ.ಕೆ.ಬಿ. ಎಸ್. ಶಾಲೆಯ 1 ಕೊಠಡಿ , ಅಂ–ದಾಜು ಮೊತ್ತ 13.90 ಲಕ್ಷ ರೂ. ವೆಚ್ಚದಡಿ ಹೊಂಬಳ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯ 1 ಕೊಠಡಿ ಇವುಗಳ ಉದ್ಘಾಟನೆ ನೆರವೇರಿಸಿದರು. ಈ ಸಂದರ್ಭದಲ್ಲಿ ಹೊಂಬಳ ಗ್ರಾಮ ಪಂಚಾಯತ್ ಅಧ್ಯಕ್ಷೆ ದಾವನಬಿ ಮುಲ್ಲಾನವರ, ಉಪಾಧ್ಯಕ್ಷರಾದ ನೀಲಮ್ಮ ಬಾಳಮ್ಮನವರ, ಬಸವರಾಜ ಹುಣಸಿಮರದ, ಶಾಲಾ ಶಿಕ್ಷಣ ಇಲಾಖೆಯ ಆರ್.ಎಸ್.ಬುರಡಿ, ಎಸ್‌ಡಿಎಂಸಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಮೆಹಬೂಬ ತುಂಬರಮಟ್ಟಿ, ಹಿಂದುಳಿದ ವರ್ಗಗಳ ತಾಲೂಕಾ ಅಧಿಕಾರಿ ಬಸವರಾಜ ಬಳ್ಳಾರಿ, ತಾ.ಪಂ. ಕಾರ್ಯನಿರ್ವಹಣಾಧಿಕಾರಿ ಮಲ್ಲಯ್ಯ ಕೊರನವರ, ಬಿ.ಇ.ಓ ವಿ.ವಿ.ನಡುವಿನಮನಿ, ವಿವಿಧ ಗಣ್ಯರು. ಅಧಿಕಾರಿಗಳು ಹಾಜರಿದ್ದರು.

# ಶ್ರೀ ಅಂಜನಾ ಮಹಿಳಾ ಮಂಡಳದಿಂದ ಅಂತರಾಷ್ಟೀಯ ಯೋಗ ದಿನಾಚರಣೆ




ಬೆಳಗಾವಿ: ಇಲ್ಲಿನ ಆಂಜನೇಯ ನಗರದಲ್ಲಿ ಶನಿವಾರ ಶ್ರೀ ಅಂಜನಾ ಮಹಿಳಾ ಮಂಡಳ ವತಿಯಿಂದ ಅಂತರಾಷ್ಟೀಯ ಯೋಗ ದಿನಾಚರಣೆ ಆಚರಿಸಿಲಾಯಿತು. ಮಹಿಳಾ ಯೋಗ ಗುರುಗಳಾದ ಮೀನಾ ಚೌಗುಲೆ ಅವರು ಸಸಿಗೆ ನೀರೆರೆಯುವ ಮೂಲಕ ಯೋಗ ದಿನಾಚರಣೆಗೆ ಚಾಲನೆ ನೀಡಿದರು.

ಮಹಿಳಾ ಮಂಡಳದ ಅಧ್ಯಕ್ಷೇ ಭಾಗ್ಯಶ್ರೀ ಭೈರಪ್ಪನವರ ಮಾತನಾಡಿ, ಸದೃಢ ದೇಹದಲ್ಲಿ ಸದೃಢ ಮನಸ್ಸನ್ನು ಹೊಂದಲು ಯೋಗವು ಪರಿಣಾಮಕಾರಿ. ಯೋಗದ ನೋವು ಕ್ಷ ಣಿಕವಾಗಿದ್ದು, ರೋಗದ ನೋವು ನಿರಂತರವಾಗಿರುತ್ತದೆ. ಯೋಗದಿಂದ ಹಲವಾರು ರೋಗಗಳನ್ನು ಗುಣಪಡಿಸಬಹುದು.

ಹೀಗಾಗಿ ಮಹಿಳೆಯರು ಸಂಸಾರ ನಿಭಾಯಿಸುವುದರ ಜೊತೆಗೆ ಸದೃಢ ಆರೋಗ್ಯ ಹೊಂದಲು ನಿತ್ಯವೂ ಯೋಗವನ್ನು ಮಾಡಬೇಕು. ಅದಕ್ಕಾಗಿ ಸ್ವಲ್ಪ ಸಮಯವನ್ನು ಮೀಸಲು ಇಡಬೇಕು ಎಂದು ತಿಳಿಸಿದರು.

ಮಹಿಳಾ ಮಂಡಳದ ಅಧ್ಯಕ್ಷೇ ಭಾಗ್ಯಶ್ರೀ ಭೈರಪ್ಪನವರ, ಉಪಾಧ್ಯಕ್ಷೇ ಲಲಿತಾ ಹೂಗಾರ, ಖಜಾಂಚಿ ಜಯಶ್ರೀ ಮಗ್ಗಾಣಿ, ಹಾಗೂಸದಸ್ಯರಾದ ಲತಾಸಿಂಗ್ , ಪ್ರಭಾ ಹಾದಿಮನಿ, ಸುಮಿತ್ರಾ ಕುಲಕರ್ಣಿ , ಸರೋಜ ಇರಕಲ್ , ಆಂಜನೇಯ ನಗರದ ಮಹಿಳಾ ಸದಸ್ಯರು ಹಾಗೂ ಇತರರು ಇದ್ದರು.

# ಇಂದು ಮಲಪ್ರಭಾ ಮಲ್ಟಿ ಸ್ಪೆಷಾಲಿಟಿ ಹಾಸ್ಪಿಟಲ್ ನೂತನ ಕಟ್ಟಡ ಉದ್ಘಾಟನೆ




ಬೈಲಹೊಂಗಲ: ಈ ಭಾಗದ ಜನತೆ ಅನುಕೂಲಕ್ಕಾಗಿ ಸುಸಜ್ಜಿತವಾದ ಮಲಪ್ರಭಾ ಮಲ್ಟಿ ಸ್ಪೆಷಾಲಿಟಿ ಹಾಸ್ಪಿಟಲ್ ನೂತನ ಕಟ್ಟಡದ ಉದ್ಘಾಟನಾ ಸಮಾರಂಭ ಇಂದು ಜೂ. 22 ರಂದು ಮುಂಜಾನೆ 10.30 ಕ್ಕೆ ಪಟ್ಟಣದ ಸೋಮವಾರ ಪೇಟೆಯ ಶ್ರೀ ದಾನಮ್ಮದೇವಿ ದೇವಸ್ಥಾನದ ಹತ್ತಿರ ಅದ್ದೂರಿಯಾಗಿ ಜರುಗಲಿದೆ ಎಂದು ಎಲುವು ಕೀಲು ರೋಗ ಶಸ್ತ್ರಜ್ಞ ಡಾ। ಮಂಜುನಾಥ ಮುದಕನಗೌಡರ ಹೇಳಿದರು.ಅವರು ಗುರುವಾರ ಪಟ್ಟಣದ ನೂತನ ಮಲಪ್ರಭಾ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಈಗಾಗಲೇ ಪಟ್ಟಣದಲ್ಲಿ ಕಳೆದ 13 ವರ್ಷಗಳಿಂದ ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡುವ ಮೂಲಕ ಆಸ್ಪತ್ರೆ ಮನೆ ಮಾತಾಗಿದ್ದು, 12 ಗುಂಟೆ ಜಾಗೆಯಲ್ಲಿ ನಿರ್ಮಿಸಿದ ನಮ್ಮನೂತನ 100 ಹಾಸಿಗೆಯ ಸುಸಜ್ಜಿತ ಆಸ್ಪತ್ರೆಯಲ್ಲಿ ಎಲ್ಲ ತರಹದ ಚಿಕಿತ್ಸೆಗೆ ಸಕಲ ಸೌಲಭ್ಯ ನೀಡಲು ಸಿದ್ಧತೆ ಕೈಗೊಳ್ಳಲಾಗಿದೆ. ಸುಸಜ್ಜಿತವಾದ ಹೆರಿಗೆ ವಿಭಾಗ, ಹೈಟೆಕ್ ಶಸ್ತ್ರ ಚಿಕಿತ್ಸಾ ನಿಗಾ ಘಟಕ, 24ಘಿ7 ತುರ್ತು ನಿಗಾ ಸೇವೆ ಇನ್ನಿತರ ಸೌಲಭ್ಯ ದೊರಕಲಿದೆ. ಅಲ್ಲದೇ ಸರ್ಕಾರದ ಆರೋಗ್ಯ ಯೋಜನೆಗಳನ್ನು ಕೂಡ ಪಡೆದುಕೊಳ್ಳಬಹುದಾಗಿದೆ. ಈ ಆಸ್ಪತ್ರೆಯಲ್ಲಿ ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದೆ ಎಂದರು.

ಉದ್ಘಾಟನಾ ಸಮಾರಂಭದ ಸಾನ್ನಿಧ್ಯವನ್ನು ಸುಕ್ಷೇತ್ರ ಇಂಚಲದ ಡಾ.ಶಿವಾನಂದ ಭಾರತಿ ಸ್ವಾಮೀಜಿ, ಮುರಗೋಡದ ನೀಲಕಂಠ ಸ್ವಾಮೀಜಿ, ಮೂರುಸಾವಿರ ಮಠದ ಪ್ರಭು ನೀಲಕಂಠ ಸ್ವಾಮೀಜಿ, ನಯಾನಗರದ ಅಭಿನವ ಸಿದ್ದಲಿಂಗ ಸ್ವಾಮೀಜಿ, ಧಾರ್ಮಿಕ ದತ್ತಿ ಇಲಾಖೆ ನಿರ್ದೇಶಕ ಮಹಾಂತಯ್ಯ ಶಾಸ್ತ್ರಿ ಆರಾಧ್ರಿಮಠ, ಬ್ರಹ್ಮ ಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ರಾಜಯೋಗಿನಿ ಬಿ ಕೆ ಪ್ರಭಾ ಅಕ್ಕಾ ಮುಸ್ಲಿಂ ಧರ್ಮಗುರು ಮೌಲಾನಾ ಶೌಕತಅಲಿ ಬಾದಿ ವಹಿಸಲಿದ್ದಾರೆ ಎಂದರು.

ಶಾಸಕ ಮಹಾಂತೇಶ ಕೌಜಲಗಿ ಅಧ್ಯಕ್ಷತೆ, ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ, ಸಂಸದರಾದ ಜಗದೀಶ ಶೆಟ್ಟರ, ಈರಣ್ಣ ಕಡಾಡಿ, ಕೆಎಲ್‌ಇ ಕಾರ್ಯಾಧ್ಯಕ್ಷಡಾ। ಪ್ರಭಾಕರ ಕೋರೆ ಹಾಗೂ ಅತಿಥಿಗಳಾಗಿ ಶಾಸಕರಾದ ಬಾಬಾಸಾಹೇಬ ಪಾಟೀಲ, ವಿಶ್ವಾಸ ವೈದ್ಯ, ಮಾಜಿ ಶಾಸಕರಾದ ಜಗದೀಶ ಮೆಟಗುಡ್ಡ, ಡಾ।ವಿಶ್ವನಾಥ ಪಾಟೀಲ, ಮಹಾಂತೇಶ ದೊಡಗೌಡ್ರ, ಜಿಪಂ. ಮಾಜಿ ಸದಸ್ಯ ಶಂಕರ ಮಾಡಲಗಿ, ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಈಶ್ವರಪ್ಪ ಗಡಾದ, ತಾಲೂಕು ಆರೋಗ್ಯಾಧಿಕಾರಿ ಡಾ.ಸಂಜಯ ಸಿದ್ದನ್ನವರ, ಪುರಸಭೆ ಅಧ್ಯಕ್ಷ ವಿಜಯ ಬೋಳನ್ನವರ, ವಿಶೇಷ ಸನ್ಮಾನಿತರಾಗಿ ಡಾ॥ ಬಿ.ಎಸ್. ಮಹಾಂತಶೆಟ್ಟಿ ಹಿರಿಯ ವೈದ್ಯ ಡಾ।ಎ. ಎನ್.ಬಾಳಿ ಆಗಮಿಸಲಿದ್ದಾರೆ ಎಂದರು.

ಚಿಕ್ಕಮಕ್ಕಳ ತಜ್ಞ ಡಾ। ಶರಣಕುಮಾರ ಅಂಗಡಿ, ಸ್ತ್ರೀರೋಗ ತಜ್ಞ ಡಾ॥ ಅಶೋಕ ದೊಡವಾಡ ಮಾತನಾಡಿ, ನಾಡಿನ ಜನತೆ ಅನೂಕೂಲಕ್ಕಾಗಿ ಸುಸಜ್ಜಿತ ಆಸ್ಪತ್ರೆ ನಿರ್ಮಾಣ ಮಾಡಲಾಗಿದ್ದು ಇದರ ಸದುಪಯೋಗ ಪಡೆದುಕೊಳ್ಳಬೇಕು. ಕರೆಯ ಮೇರೆಗೆ ನುರಿತ ತಜ್ಞ ವೈದ್ಯರು ಸೌಲಭ್ಯ ಒದಗಿಸಲಿದ್ದಾರೆ ಎಂದರು. ಡಾ। ರವೀಂದ್ರಕುಮಾರ ಜಕನೂರ ಹಾಗೂ ಸಿಬ್ಬಂದಿ ಇದ್ದರು.

# ಐ ಬಿ ತುರುಮರಿ ಯವರಿಗೆ ಹೃದಯ ಸ್ಪರ್ಶಿ ಬೀಳ್ಕೊಡುಗೆ



ಕಿತ್ತೂರು: ತಾಲ್ಲೂಕಿನ ಕಲಭಾವಿ ಗ್ರಾಮದ ನೂತನ ಪ್ರೌಢ ಶಾಲೆಯ ಮುಖ್ಯಶಿಕ್ಷಕರಾದ ಐ ಬಿ ತುರುಮರಿ ಯವರು ಇಂದು ಸೇವಾ ನಿವೃತ್ತಿ ಹೊಂದಿರುವು ಪ್ರಯುಕ್ತ ಕಿತ್ತೂರು ತಾಲೂಕ ಕರ್ನಾಟಕ ರಾಜ್ಯ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘದ ತಾಲ್ಲೂಕಿನ ಸಮಸ್ತ ಗುರುಬಳಗದ ಪರವಾಗಿ ತಾಲೂಕ ಅಧ್ಯಕ್ಷರು (ನಿಪೂ) ರಾಜ್ಯ ಪರಿಷತ್ ನಿರ್ದೇಶಕರು ಡಾ ಸೋಮಶೇಖರ್ ಹಲಸಗಿ ಯವರು ಹಾಗೂ ಪ್ರಧಾನ ಕಾರ್ಯದರ್ಶಿ ಕೆ ಎಸ್ ತಳವಾರ, ಬಿ ಎಸ್ ಪಾಟೀಲ್, ಸಿ ಕೆ ಗುರುವಣ್ಣವರ, ಜಿ ಎಚ್ ನಾಯ್ಕ್, ಸರ್ಫಾರಾಜ ಮಾಮೂಲಾದರ, ಆರ್ ಕೆ ರಗಟಿ, ಜಗ್ಗಲ, ಲೆಂಕೇನ್ನವರ, ಮುಂತಾದ ಪದಾಧಿಕಾರಿಗಳು ಸಮ್ಮುಖದಲ್ಲಿ ಐ ಬಿ ತುರುಮರಿ ಯವರನ್ನು ಸನ್ಮಾನಿಸಲಾಯಿತು. ಸಮಾರಂಭದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷರಾದ ಸಂದೀಪ ದೇಶಪಾಂಡೆ ವಹಿಸಿದ್ದರು. ಶಾಲಾ ಆಡಳಿತ ಮಂಡಳಿಯ ನಿರ್ದೇಶಕರು ಹಾಗೂ ವಿವಿಧ ಶಾಲೆಯ ಮುಖ್ಯ ಗುರುಗಳು ಬಿ ಸಿ ಬಿದರಿ, ಚಂದ್ರಕಾಂತ ಮುರಗೋಡ, ಶ್ರೀಶೈಲ ಅಂಗಡಿ, ಎಸ್ ಎಸ್ ಪಾಟೀಲ, ಹಾರೋಗೋಪ್ಪ, ಬಿ ಎಸ್ ಪಾಟೀಲ್ ಮುಖ್ಯಶಿಕ್ಷಕ ಕದಂ, ಗ್ರಾಮದ ಗಣ್ಯರು ಸಮಾರಂಭದಲ್ಲಿ ಪಾಲ್ಗೊಂಡಿದ್ದರು ಪ್ರಾರಂಭದಲ್ಲಿ ಎಸ್ ಎಂ ಬುಳ್ಳಣ್ಣವರ ನಿರೂಪಣೆ, ಕದಂ ಸ್ವಾಗತಿಸದರು.ಶಾಲಾ ಗುರು ಬಳಗ ವಿದ್ಯಾರ್ಥಿಗಳು ಪಾಲ್ಗೊಂಡು ಸಂಭ್ರಮದಿ ಕಾರ್ಯಕ್ರಮ ನೆರವೇರಿಸಿದರು. ಸೇವಾ ಅವಧಿಯಲ್ಲಿ ಮಾಡಿದ ಕಾರ್ಯಗಳ ಕುರಿತು ಅತಿಥಿ ಗಣ್ಯರು ಮಾತನಾಡಿದರು.

# ಯೋಗವು ಜೀವನದ ಗುಣಮಟ್ಟ ಸುಧಾರಿಸಲು ಸಹಕಾರಿ ಅಂಚೆ ಅಧೀಕ್ಷಕ ರಮೇಶ ಮಡಿವಾಳರ



ಗದಗ: 'ಮಾನಸಿಕ ಮತ್ತು ದೈಹಿಕ ಆರೋಗ್ಯಕ್ಕೆ ಪ್ರತಿಯೊಬ್ಬರಿಗೂ ಯೋಗದ ಅಗತ್ಯವಿದೆ' ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ರಮೇಶ ಮಡಿವಾಳರ ಹೇಳಿದರು.

ಭಾರತೀಯ ಅಂಚೆ ಇಲಾಖೆ ಗದಗ ವಿಭಾಗೀಯ ಆಶ್ರಯದಲ್ಲಿ ಪ್ರಧಾನ ಅಂಚೆ ಕಚೇರಿ ಆವರಣದಲ್ಲಿ ಶನಿವಾರ ಏರ್ಪಡಿಸಲಾಗಿದ್ದ ಅಂತರರಾಷ್ಟ್ರೀಯ ಯೋಗ ದಿನದಲ್ಲಿ ಪಾಲ್ಗೊಂಡು ಚಾಲನೆ ನೀಡಿ ಅವರು ಮಾತನಾಡಿ, ದಿನನಿತ್ಯ ಯೋಗ ಅಭ್ಯಾಸ ರೂಢಿಸಿಕೊಳ್ಳಬೇಕು. ಇದರಿಂದ ರೋಗ-ರುಜಿನಗಳಿಂದ ದೂರವಿರಲು ಅನುಕೂಲವಾಗಿದೆ ಎಂದು ಹೇಳಿದರು.

ಯೋಗದಿಂದ ವೈಯಕ್ತಿಕ ಆರೋಗ್ಯವೃದ್ಧಿಯಾಗುವುದಲ್ಲದೆ ವ್ಯಕ್ತಿಯ ಸರ್ವತೋಮುಖ ಅಭಿವೃದ್ಧಿಗೂ ಪೂರಕವಾಗಲಿದೆ. ಹೀಗಾಗಿ ಎಲ್ಲರೂ ಯೋಗಾಭ್ಯಾಸವನ್ನು ಪ್ರತಿ ದಿನ ಕುಟುಂಬ ಸಮೇತ ಕೆಲವು ಗಂಟೆ ಯೋಗಭ್ಯಾಸಕ್ಕೆ ನೀಡಬೇಕು ಎಂದರು.

ಬ್ರಹ್ಮ ಕುಮಾರಿ ಶೋಭಾ ಅಕ್ಕ ಯೋಗ ಶಿಬಿರ ನಡೆಸಿ,ಯೋಗವು ಪ್ರಾಚೀನ ಭಾರತದ ಅಮೂಲ್ಯ ಕೊಡುಗೆಯಾಗಿದೆ. ನಮ್ಮ ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿಸುವಲ್ಲಿ ಯೋಗದ ಪಾತ್ರ ಮಹತ್ವದ್ದು. ಪ್ರತಿವರ್ಷ ಒಂದೊಂದಿ ಥೀಮ್‌ನಲ್ಲಿ ಯೋಗ ದಿನವನ್ನು ಆಚರಿಸಲಾಗುತ್ತದೆ. ಈ ವರ್ಷ ಒಂದು ದೇಶ ಒಂದು ಭೂಮಿಗಾಗಿ ಯೋಗ ಎಂಬುದು ಥೀಮ್ ಆಗಿದೆ. ಹಾಗಾಗಿ ಹಚ್ಚು ಹಸಿರಿನ ಪರಿಸರ ಮಧ್ಯದಲ್ಲಿ ನಾವು ಯೋಗಭ್ಯಾಸ ಜೊತೆಗೆ ಪರಿಸರ ಸಂರಕ್ಷಣೆಯೊಂದಿಗೆ ಭೂಮಿ ವಿಷಯುಕ್ತದಿಂದ ಮುಕ್ತ ಮಾಡಲು ಮುಂದಾಗಬೇಕು ಎಂದರು.

ಅಂಚೆ ಕಚೇರಿಗಳಲ್ಲಿ ಯೋಗ ಶಿಬಿರಗಳು, ಪ್ರದರ್ಶನಗಳು ಮತ್ತು ಅರಿವು ಮೂಡಿಸುವ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಆಯೋಜನೆ ಮಾಡುತ್ತಿರುವದು ಸಂತಸ ತಂದಿದೆ ಎಂದರು.

ಗದಗ ಅಂಚೆ ಸಹಾಯಕರಾದ ಶ್ರೀಕಾಂತ ಜಾದವ, ವಿ.ಸುನೀಲಕುಮಾರ, ಪ್ರಧಾನ ಅಂಚೆ ಪಾಲಕರಾದ ಮಂಜುಳಾ ದೇಗಿನಾಳ, ಉಪ ಅಂಚೆ ಪಾಲಕರಾದ ದೊಡ್ಡಪ್ಪ ಇಟಗಿ, ಬ್ರಹ್ಮಕುಮಾರಿ ಸಾವಿತ್ರಿ ಅಕ್ಕ ಬ್ರಹ್ಮಕುಮಾರಿ ಲತಾ ಅಕ್ಕ ಹಾಗೂ ವಿವಿಧ ಅಂಚೆ ಇಲಾಖೆ ಸಿಬ್ಬಂದಿ ಪಾಲ್ಗೊಂಡಿದ್ದರು.

## ಅಂತರ್ ರಾಷ್ಟ್ರೀಯ ಯೋಗ ದಿನಾಚರಣೆ

# ನಿರಂತರ ಯೋಗದಿಂದ ದೇಹ - ಮನಸ್ಸು ಒಗ್ಗೂಡುತ್ತವೆ : ಜಿಲ್ಲಾಧಿಕಾರಿ ದಿವ್ಯ ಪ್ರಭು

ಧಾರವಾಡ : ಯೋಗವು ಭಾರತವು ವಿಶ್ವಕ್ಕೆ ನೀಡಿದ ಬಹು ದೊಡ್ಡ ಕೊಡುಗೆ. ಮುನಷ್ಯನ ದೇಹ ಮತ್ತು ದೇಶ ಶಾಂತ, ತಂಪಾಗಿದ್ದರೆ ಇಡೀ ವಿಶ್ವದಲ್ಲಿ ಶಾಂತಿ ನೆಲೆಸುತ್ತದೆ. ಯೋಗ ಪದದ ಅರ್ಥ, ನಮ್ಮ ದೇಹ ಮತ್ತು ಮನಸ್ಸನ್ನು ಒಟ್ಟುಗೂಡಿಸುವುದು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ಇಂದು (ಜೂ.21) ಬೆಳಿಗ್ಗೆ ಆರ್. ಎನ್.ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆಯುಷ್ಯ ಇಲಾಖೆ ಹಾಗೂ ವಿವಿಧ ಯೋಗ ಸಂಘಟನೆಗಳ ಸಹಯೋಗದಲ್ಲಿ ಆಯೋಜಿಸಿದ್ದ 11 ನೇ ಅಂತರ್ ರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದರು.

ಯೋಗ ಎಂದರೆ ಕೂಡುವುದು. ಎಲ್ಲರನ್ನು ಸೇರಿಸುವುದು ಯೋಗವಾಗಿದೆ. ವಿಶ್ವದಲ್ಲಿ ಚದುರಿರುವ ಮನಸ್ಸುಗಳನ್ನು ಒಂದೆಡೆ ಸೇರಿಸುವ ಶಕ್ತಿ ಯೋಗಕ್ಕಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಪ್ರತಿ ವರ್ಷದಂತೆ ಈ ವರ್ಷವು ಯೋಗ ದಿನಾಚರಣೆಗೆ ಒಂದು ದೇಶ ; ಒಂದು



ಆರೋಗ್ಯ ಎಂಬ ಘೋಷ ವಾಕ್ಯ ನೀಡಿದ್ದಾರೆ. ವಿಶ್ವದ ಶಾಂತಿ, ಸಮಾನತೆ, ಸಮಾಧಾನಕ್ಕಾಗಿ ಎಲ್ಲರೂ ಶ್ರಮಿಸುತ್ತಿದ್ದಾರೆ. ಪ್ರತಿಯೊಬ್ಬ ವ್ಯಕ್ತಿ ಅನುಭವಿಸುವ ಸಮಾಧಾನ, ನೆಮ್ಮದಿಯೂ ವಿಶ್ವದ ಸಮಾಧಾನವಾಗಿದೆ. ಯೋಗ ಸಾಧನೆಯು ಶಾಂತಿ, ನೆಮ್ಮದಿಯನ್ನು ನಮಗೆ ತಂದುಕೊಡುತ್ತದೆ. ಈ ಘೋಷ ವಾಕ್ಯದ ಉದ್ದೇಶ ಇಡೀ ಜಗತ್ತಿನಲ್ಲಿ, ಜಾಗತಿಕ ಮಟ್ಟದಲ್ಲಿ ಶಾಂತಿ,ನೆಮ್ಮದಿ,ನೆಲಸಲಿ. ಎಲ್ಲರೂ ಪರಸ್ಪರ ಆರೋಗ್ಯದಿಂದ ಇರಲಿ ಎಂದು ಅರ್ಥೈಸುತ್ತದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ಮನುಷ್ಯ ಆರೋಗ್ಯದಿಂದ ಇರಲು, ಯೋಗ ಮಾಡುವ ಅಭ್ಯಾಸ ಮುಖ್ಯವಾಗಿದೆ. ಪ್ರತಿದಿನ ಯೋಗ ಮಾಡುವುದನ್ನು ನಮ್ಮ ಜೀವನ ಶೈಲಿಯಾಗಿ ರೂಡಿಸಿಕೊಳ್ಳಬೇಕು. ನಿರಂತರ ಯೋಗ ಆರೋಗ್ಯವನ್ನು ಹೆಚ್ಚಿಸುತ್ತದೆ. ಯೋಗ ನಮ್ಮ ಜೀವನ ಶೈಲಿ ಆಗಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಬ್ಯಾಕೋಡ, ಐಎಎಸ್ ಪ್ರೊಬೇಷನರಿ ಅಧಿಕಾರಿ ರೀತಿಕಾ ವರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳ, ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಸಂಗಪ್ಪ ಗಾಬಿ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಎಸ್.ಎಂ. ಹೊನಕೇರಿ, ಜಿಲ್ಲಾ ಆಯುಷ್ ಅಧಿಕಾರಿ ಡಾ. ಗಣೇಶ ಕಬಾಡೆ ವೇದಿಕೆಯಲ್ಲಿ ಇದ್ದರು.

ಯೋಗ ಶಿಕ್ಷಕ ಜಗದೀಶ ಮಳಗಿ ಅವರು ಯೋಗ ಅಭ್ಯಾಸ ಮಾಡಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್. ಎಸ್. ಕೆಳದಿಮಠ, ಧಾರವಾಡ ತಹಶಿಲ್ದಾರಡಾ ಡಿ.ಎಚ್.ಹೂಗಾರ, ಸರಕಾರಿ ನೌಕರ ಸಂಘದ ಜಿಲ್ಲಾ ಅಧ್ಯಕ್ಷ ಎಸ್.ಎಫ್.ಸಿದ್ದನಗೌಡರ ಹಾಗೂ ವಿವಿಧ ಇಲಾಖೆಯ ಅಧಿಕಾರಿ ವರ್ಗದವರು, ವಿವಿಧ ಸಂಘ ಸಂಸ್ಥೆಯವರು, ಯೋಗ ಕೂಟದ ಸದಸ್ಯರು, ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯದವರು, ಸಾರ್ವಜನಿಕರು, ವಿದ್ಯಾರ್ಥಿಗಳು ಇಂದಿನ ಸಾಮೂಹಿಕ ಯೋಗ ಅಭ್ಯಾಸದಲ್ಲಿ ಭಾಗವಹಿಸಿದ್ದರು.

# ಪಂಚ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನಗೊಳಿಸಿ: ಅರ್ಹ ಫಲಾನುಭವಿಗಳು ಹೊರಗುಳಿಯದಂತೆ ನೋಡಿಕೊಳ್ಳಿ -ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಎಸ್.ಆರ್.ಪಾಟೀಲ

ವಿಜಯಪುರ, ಪಂಚ ಗ್ಯಾರಂಟಿ ಯೋಜನೆಗಳು ಜಿಲ್ಲೆಯಲ್ಲಿ ಸಮರ್ಪಕ ಅನುಷ್ಠಾನಗೊಳಿಸುವ ಮೂಲಕ ಯಾವುದೇ ಅರ್ಹಫಲಾನುಭವಿಗಳು ಹೊರಗುಳಿಯದಂತೆ ನೋಡಿಕೊಳ್ಳಬೇಕು ಎಂದು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಆರ್.ಪಾಟೀಲ ಸೂಚಿಸಿದರು.

ಶುಕ್ರವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಡವರ ಪಾಲಿನ ಅಕ್ಕಿ ದುರುಪಯೋಗವಾಗದಂತೆ ಕಟ್ಟುನಿಟ್ಟಿನ ಕ್ರಮವಹಿಸಬೇಕು ಎಂದು ಅವರು ತಿಳಿಸಿದರು. ಸರ್ಕಾರ ಅಧಿಕಾರ ವಹಿಸಿಕೊಂಡು 2 ವರ್ಷಗಳನ್ನು ಪೂರೈಸಿದೆ. ಅಧಿಕಾರ ವಹಿಸಿಕೊಂಡ ಒಂದು ವರ್ಷದಲ್ಲಿಯೇ ಪಂಚ ಗ್ಯಾರಂಟಿಗಳನ್ನು ಸಮರ್ಪಕವಾಗಿ ಜಾರಿಗೊಳಿಸಿ, ಜನರಿಗೆ ಅನುಕೂಲ ಕಲ್ಪಿಸಲು ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗಿದೆ. ಜಿಲ್ಲೆಯಲ್ಲಿ ಈವರೆಗೆ ಪಂಚ ಗ್ಯಾರಂಟಿ ಯೋಜನೆಯಡಿ 3177.78 ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗಿದೆ. ಈ ಯೋಜನೆಗಳು ಪ್ರತಿಯೊಬ್ಬ ಅರ್ಹ ಫಲಾನುಭವಿಗಳಿಗೆ ತಲುಪುವಂತಾಗಬೇಕು. ಈ ಕುರಿತು ಪ್ರತಿ ಗ್ರಾಮ ಪಂಚಾಯತಿಗಳಲ್ಲಿ ಪ್ರಚಾರ ಫಲಕಗಳನ್ನು ಅಳವಡಿಸಬೇಕು. ಕಟ್ಟ ಕಡೆಯ ಅರ್ಹ ಫಲಾನುಭವಿಗಳಿಗೆ ಯೋಜನೆ ಲಾಭ ದೊರಕಿಸಬೇಕು. ಪಂಚಾಯತಿ



ಮಟ್ಟಗಳಲ್ಲಿ ಶಿಬಿರಗಳನ್ನು ಆಯೋಜಿಸಿ ಯೋಜನೆಗಳ ಲಾಭ ದೊರಕಿಸಲು ಕ್ರಮ ವಹಿಸಬೇಕು ಎಂದು ಅವರು ಹೇಳಿದರು.

ಗೃಹ ಜ್ಯೋತಿ ಯೋಜನೆಯಡಿ ಪ್ರತಿ ಫಲಾನುಭವಿಗಳಿಗೆ 200 ಯೂನಿಟ್ ಉಚಿತ ವಿದ್ಯುತ್ ನೀಡಲಾಗುತ್ತಿದೆ. ಈ ಯೋಜನೆಯಿಂದ ಯಾವುದೇ ಫಲಾನುಭವಿ ವಂಚಿತರಾಗದಂತೆ ಫಲಾನುಭವಿಗಳನ್ನು ಗುರುತಿಸಿ, ಮಾಹಿತಿ ಒದಗಿಸಿ ಯೋಜನೆಯ ಲಾಭ ದೊರಕಿಸಬೇಕು. ಗೃಹ ಲಕ್ಷ್ಮೀ ಯೋಜನೆಯಡಿ ಪಡೆದ ಹಣದಿಂದ ತಮ್ಮ ಬದುಕಿನಲ್ಲಿ ಆದ ಬದಲಾವಣೆಗಳ ಕುರಿತ ಫಲಾನುಭವಿಗಳ ಯಶೋಗಾಥೆ ಪ್ರಕಟಿಸುವ ಮೂಲಕ ಯೋಜನೆಗಳ ಮಾಹಿತಿ ಪ್ರತಿಯೊಬ್ಬರಿಗೂ ತಲುಪಿಸಲು ವ್ಯಾಪಕವಾಗಿ ಪ್ರಚಾರ ಕೈಗೊಳ್ಳುವಂತೆ ಅವರು ಸೂಚಿಸಿದರು.

ಶಕ್ತಿ ಯೋಜನೆಯಡಿ ಮೇ.2025ರ ಅಂತ್ಯದವರೆಗೆ 13.18 ಕೋಟಿ ಮಹಿಳೆಯರು ಪ್ರಯಾಣ ಬೆಳೆಸಿದ್ದು, ಒಟ್ಟು 426 ಕೋಟಿ ರೂ. ವೆಚ್ಚ ಮಾಡಲಾಗಿದೆ. ಪ್ರತಿ ಬಸ್ ನಿಲ್ದಾಣಗಳಲ್ಲಿ ಸಿಸಿಟಿವಿ, ಶೌಚಾಲಯ, ಶುದ್ಧ ಕುಡಿಯುವ ನೀರು, ಮಹಿಳೆಯರಿಗೆ ವಿಶ್ರಾಂತಿ ಕೊಠಡಿಗಳ ಸೌಲಭ್ಯ ಸೇರಿದಂತೆ ನಿಲ್ದಾಣಗಳಲ್ಲಿ ಸ್ವಚ್ಛತೆ ಕಾಪಾಡುವಂತೆ ಅವರು ತಿಳಿಸಿದರು.

ಯುವ ನಿಧಿ ಯೋಜನೆಯಿಂದ ಹಲವು ನಿರುದ್ಯೋಗಿಗಳಿಗೆ ಸಹಕಾರಿಯಾಗಿದೆ. ಯುವಕರಿಗೆ ತರಬೇತಿ ಮತ್ತು ಉದ್ಯೋಗ ಮೇಳಗಳನ್ನು ಆಯೋಜಿಸಬೇಕು. ನಿರುದ್ಯೋಗಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಲು ಆಸಕ್ತಿ ತೋರುವಂತೆ ಕ್ರಮವಹಿಸಬೇಕು ಎಂದು ಅವರು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಮಾತನಾಡಿ, ಜಿಲ್ಲೆಯ ಪ್ರತಿಯೊಂದು ಗ್ರಾಮ ಪಂಚಾಯತ್‌ಗಳಲ್ಲಿ ಹಾಗೂ ಎಲ್ಲ ಸರ್ಕಾರಿ ಕಚೇರಿಗಳಲ್ಲಿ, ಪಡಿತರ ಅಂಗಡಿಗಳಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಪ್ರಚಾರ ಫಲಕಗಳನ್ನು ಅಳವಡಿಸಬೇಕು. ಮುಂದಿನ ಸಭೆಯೊಳಗಾಗಿ ಪ್ರಚಾರ ಫಲಕ ಅಳವಡಿಸಿರುವ ಮಾಹಿತಿ ಒದಗಿಸಬೇಕು ಎಂದು ಹೇಳಿದರು.

ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನದಲ್ಲಿ ವಿಜಯಪುರ ಜಿಲ್ಲೆ ರಾಜ್ಯದಲ್ಲಿಯೇ ಎರಡನೇ ಸ್ಥಾನದಲ್ಲಿದೆ. ಜಿಲ್ಲೆಯಲ್ಲಿ ತಿಕೋಟಾ ತಾಲೂಕು ಗೃಹಲಕ್ಷ್ಮಿ ಯೋಜನೆ ಅನುಷ್ಠಾನದಲ್ಲಿ ಪ್ರಥಮ ಸ್ಥಾನ ಪಡೆದಿದೆ. ಯೋಜನೆಯಿಂದ ಹೊರಗುಳಿದ ಫಲಾನುಭವಿಗಳನ್ನು ಗುರುತಿಸಿ ಅರ್ಹ ಫಲಾನುಭವಿಗಳಿಗೆ ಯೋಜನೆ ವ್ಯಾಪ್ತಿಗೊಳಪಡಿಸಲು ಕ್ರಮ ವಹಿಸಲಾಗುತ್ತಿದೆ ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಇಲಿಯಾಸ ಬೋರಾಮಣಿ, ಉಪಾಧ್ಯಕ್ಷ ಹೊನ್ನಮಲ್ಲ ಸಾರವಾಡ, ಸುಂದರಪಾಲ ರಾಠೋಡ, ನಬಿಲಾಲ ನಾಯ್ಕೊಡಿ, ಆನಂದ ಜಾಧವ, ಮಹಾದೇವಿ ಗೋಕಾಕ, ಸದ್ಯರಾದ ಆರತಿ ನಾವಿ, ಸಾಹೇಬಗೌಡ ಬಿರಾದಾರ, ಮಲ್ಲಪ್ಪ ದಳವಾಯಿ, ಗುರುಪಾದಗೌಡ ದಾಶ್ಯಾಳ, ಶ್ರೀಶೈಲ ಕವಲಗಿ, ರವಿದಾಸ ಜಾಧವ, ಮೈಬೂಬಸಾಬ ನಾಯ್ಕೊಡಿ, ಸಂತೋಷ ಗಣಾಚಾರಿ, ಶಂಕರಗೌಡ ಹಿರೇಗೌಡರ, ಚಂದ್ರಶೇಖರ ಹಳೆಮನಿ, ರಾಜಶೇಖರ ಅವಜಿ, ಪ್ರಶಾಂತ ಕಾಳೆ, ಸಂಗನಗೌಡ ದೇಸಾಯಿ, ಶರಣಬಸಪ್ಪ ಚೌರ ಸೇರಿದಂತೆ ತಾಲೂಕಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು

# ಲಿಂ. ಮಹಾಂತ ಶಿವಯೋಗಿಗಳ 156 ನೇ ಜಯಂತ್ಯೋತ್ಸವ-ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟನೆ

ಯರಗಟ್ಟಿ: ಗುರು ಹಿರಿಯರನ್ನು ಸ್ಮರಿಸಿಕೊಂಡು ಲಿಂಗಪೂಜೆ, ನಿರಂತರ ಕಾಯಕದಲ್ಲಿ ತೊಡಗಿ, ಮಕ್ಕಳ್ಳನ್ನ ಸಂಸ್ಕಾರವಂತರನ್ನಾಗಿ ಮಾಡಿ ಶಿವಾನುಭವಗಳನ್ನು ನಡೆಸುತ್ತ ಬದುಕು ಸಾರ್ಥಕ ಮಾಡಿಕೊಳ್ಳಬೇಕು ಎಂದು ಉಪ್ಪಿನಬೆಟಗೇರಿ ವಿರಕ್ತಮಠದ ಶ್ರೀ ಕುಮಾರ ವಿರೂಪಾಕ್ಷ ಸ್ವಾಮೀಗಳು ಹೇಳಿದರು.

ಇಲ್ಲಿನ ಮಹಾಂತ ದುರದುಂಡಿಶ್ವರ ಮಠದಲ್ಲಿ ಹಮ್ಮಿಕೊಂಡ ಲಿಂ. ಮಹಾಂತ ಶಿವಯೋಗಿಗಳ 156 ನೇ ಜಯಂತ್ಯೋತ್ಸವ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಮಾತನಾಡಿದ ಅವರು, ಮುನವಳ್ಳಿಯ ಶ್ರೀ ಮುರಘೇಂದ್ರ ಸ್ವಾಮಿಗಳು ಮಾತನಾಡಿ, ಮಹಾನ ತಪಸ್ವಿಗಳಾದ ಮಹಾಂತ ಶಿವಯೋಗಿಗಳು ಬಸವ ತತ್ವ ಪರಿಪಾಲಕರಾಗಿದ್ದರು. ಬಸವ ತತ್ವ ಹಾಗೂ ವಚನ ಸಾಹಿತ್ಯವನ್ನು ಬೆಳೆಸುವ ನಿಟ್ಟಿನಲ್ಲಿ ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಬಸವ ಅದ್ಯಯನ ಪೀಠ ಸ್ಥಾಪಿಸಿದರು ಎಂದರು.

ಮಾಜಿ ಸಂಸದೆ ಮಂಗಲಾ ಅಂಗಡಿ ಮಾತನಾಡಿ, ಇಂತಹ ಸಂತ ಮಹಾಂತರ ಜಯಂತಿ ಉತ್ಸವ, ಆದ್ಯಾತ್ಮೀಕ ಕಾರ್ಯಗಳಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವುದರಿಂದ ಮಕ್ಕಳು ಸೇರಿ ಇಡೀ ಕುಟುಂಬವೇ ಸಂಸ್ಕಾರಯುತವಾಗುವುದು ಎಂದರು.

ಸಂಜೆ ಮಹಾಂತ ಶಿವಯೋಗಿಗಳ ಪಲ್ಲಕ್ಕಿ ಉತ್ಸವ, ತೊಟ್ಟಿಲೋತ್ಸ ನಡೆಯಿತು. ನಿವೃತ್ತರಿಗೆ ಸನ್ಮಾನ ಹಾಗೂ ಪ್ರತಿಭಾ ಪುರಸ್ಕಾರ ನಡೆಯಿತು.

ಪ್ರಾದ್ಯಾಪಕ ರಮೇಶ ಮುರಂಕರ ಉಪನ್ಯಾಸ ನೀಡಿದರು, ಮಹಾಬಳೇಶ್ವರ ಹಾದಿಮನಿ ಅಧ್ಯಕ್ಷತೆ ವಹಿಸಿದ್ದರು. ಜಿಪಂ



ಮಾಜಿ ಸದಸ್ಯ ಅಜಿತಕುಮಾರ ದೇಸಾಯಿ, ಬಾಪೂಜಿ ರಾಯರ, ಎನ್.ಕೆ. ಹುಚರಡ್ಡಿ, ವೀರೂಪಾಕ್ಷ ಜಕಾತಿ, ಎಂ. ವಿ. ನಂದಿಮಠ, ಮಹಾಂತೇಶ ಜಕಾತಿ, ಮಡಿವಾಳಪ್ಪ ಬಿದರಗಡ್ಡಿ, ರಾಜೇಂದ್ರ ವಾಲಿ, ಶಿವಾನಂದ ಪಟ್ಟಣಶೆಟ್ಟಿ, ಗುರುಲಿಂಗಪ್ಪ ವಾಲಿ, ಪ್ರಕಾಶ ಪಾಟೀಲ, ಸುರೇಶಗೌಡ ಪಾಟೀಲ, ಮಹಾಂತಯ್ಯ ಮಠ, ಬಿ.ಕೆ. ಪಾಟೀಲ, ಎಸ್.ಎಸ್. ಕಿಣಗಿ, ಎ. ಕೆ. ನದಾಫ್, ಸದಾನಂದ ಹಣಬರ, ಕುಮಾರ ಹಿರೇಮಠ, ಕುಮಾರ ಜಕಾತಿ, ಇತರರು ಇದ್ದರು

# ಯೋಗ ಪ್ರಪಂಚಕ್ಕೆ ನೀಡಿದ ಭಾರತದ ಅದ್ಭುತ ಕೊಡುಗೆ -ಜಿಲ್ಲಾ ನ್ಯಾ. ಶ್ರೀಮತಿ ನಾಗವೇಣಿ

ಗದಗ : ಪ್ರಪಂಚಕ್ಕೆ ಯೋಗದ ಮಹತ್ವದ ಬಗ್ಗೆ ತಿಳಿಸಿಕೊಟ್ಟ ಭಾರತದ ಕೊಡುಗೆ ಅದ್ಭುತ. ಎಲ್ಲಾ ದೈಹಿಕ ಹಾಗೂ ಮಾನಸಿಕ ಕಾಯಿಲೆಗಳಿಗೆ ಯೋಗ ರಾಮಬಾಣವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀಮತಿ ನಾಗವೇಣಿ ಅವರು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯಾಂಗ ಇಲಾಖೆ, ಜಿಲ್ಲಾ ವಕೀಲರ ಸಂಘ, ಜಿಲ್ಲಾ ಆಯುಷ್ಯ ಇಲಾಖೆ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಗದಗ ಜಿಲ್ಲಾ ನ್ಯಾಯಾಲಯದ ಸಂಕೀರ್ಣದಲ್ಲಿ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಯಾವುದೇ ಹಣವಿಲ್ಲದೆ ರೋಗ ಗುಣಪಡಿಸುವ ಶಕ್ತಿ ಯೋಗಕ್ಕಿದೆ, ಯೋಗ ಮಾಡುವುದರಿಂದ ಜ್ಞಾಪಕಶಕ್ತಿ ವೃದ್ಧಿಸುತ್ತದೆ, ಮಾನಸಿಕ ಮತ್ತು ದೈಹಿಕ ಸಮತೋಲನ ಕಾಪಾಡಲು ಯೋಗ ಸಹಕಾರಿಯಾಗಿದೆ. ಕೆಲಸದ ಮಧ್ಯೆಯು ಕೂಡಾ ಪ್ರತಿದಿನ ಯೋಗ ಪ್ರಾಣಾಯಾಮ ಮಾಡುವುದರಿಂದ ಮನುಷ್ಯ ಮತ್ತು ಮನಸ್ಸು ಲವಲವಿಕೆಯಿಂದ ಉಲ್ಲಾಸದಿಂದ ಇರಲು ಸಾಧ್ಯವಾಗುತ್ತದೆ, ಒಂದು ಭೂಮಿ ಒಂದು ಆರೋಗ್ಯ ಈ ವರ್ಷದ ಘೋಷವಾಕ್ಯವಾಗಿದ್ದು, ಆರೋಗ್ಯದ ಕಡೆಗೆ ಎಲ್ಲರೂ ಗಮನಹರಿಸಿ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ನಿಮಿತ್ಯವಾಗಿ ಜರುಗಿದ



ಯೋಗಾಸನದ ಕಾರ್ಯಕ್ರಮವನ್ನು ಎಲ್ಲರೂ ಪ್ರತಿದಿನ ಯೋಗಾಸನ ಮಾಡುವುದರ ಮೂಲಕ ತಮ್ಮ ಆರೋಗ್ಯದ ಜೊತೆಗೆ ಸಧೃಡ ಭಾರತ ನಿರ್ಮಾಣಕ್ಕೆ ಕೈಜೋಡಿಸಿ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀಮತಿ ನಾಗವೇಣಿ ತಿಳಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ಗದಗ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಆರ್.ಜಿ.ಕಲ್ಲೂರ ಅವರು ವಹಿಸಿದ್ದರು.

ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗಂಗಾಧರ ಸಿ.ಎಮ್., ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್.ಶಿವನಗೌಡ್ರ, ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರಾದ ಜಿ.ಆರ್.ಶೆಟ್ಟರ, ಪ್ರಧಾನ ದಿವಾಣಿ ನ್ಯಾಯಾಧೀಶರಾದ ದೀಪ್ತಿ ನಾಡಗೌಡ, 1ನೇ ಜೆಎಂಎಫ್‌ಸಿ ನ್ಯಾಯಾಧೀಶರಾದ ಶ್ರೀಮತಿ ಶಿಲ್ಪಾ ತಿಮ್ಮಾಪೂರ, 2ನೇ ಜೆಎಂಎಫ್‌ಸಿ ನ್ಯಾಯಾಧೀಶರಾದ ಬೀರಪ್ಪ ಕಾಂಬಳೆ ಹಾಗೂ ಗದಗ ಜಿಲ್ಲಾ ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಎಮ್.ಎ.ನಾಯ್ಕರ, ಉಪಾಧ್ಯಕ್ಷರಾದ ಎಮ್.ಎ.ಸಂಗನಾಳ, ವಕೀಲರ ಸಂಘದ ಸದಸ್ಯರುಗಳು, ಕಾನೂನು ನೆರವು ಅಭಿರಕ್ಷಕ ವಕೀಲರು, ಪ್ಯಾನಲ್ ವಕೀಲರು, ಪಿ.ಎಲ್.ವಿ ಗಳು ಹಾಗೂ ನ್ಯಾಯಾಲಯದ ಸಿಬ್ಬಂದಿ ವರ್ಗ , ವಕೀಲರ ಸಂಘದ ಸದಸ್ಯರುಗಳು, ಕಾನೂನು ನೆರವು ಅಭಿರಕ್ಷಕ ವಕೀಲರು, ಪ್ಯಾನಲ್ ವಕೀಲರು, ಪಿ.ಎಲ್.ವಿ ಗಳು ಹಾಗೂ ನ್ಯಾಯಾಲಯದ ಸಿಬ್ಬಂದಿ ವರ್ಗ ಪಾಲ್ಗೊಂಡಿದ್ದರು.

ಶ್ರೀಮತಿ ಶಶಿಕಲಾ ಜೋಗರಡ್ಡಿ ಅವರು ಯೋಗ ಕಾರ್ಯಕ್ರಮವನ್ನು ಜರುಗಿಸಿಕೊಟ್ಟರು.

## ವಿದ್ಯುತ್ ಅದಾಲತ್ ಹಾಗೂ ಗ್ರಾಹಕರ ಸಂವಾದ ಸಭೆ

ಕಾರವಾರ. ಹೊನ್ನಾವರ ಉಪ-ವಿಭಾಗ ವ್ಯಾಪ್ತಿಯಲ್ಲಿ ಜೂ.21 ರಂದು ಬೆಳಗ್ಗೆ 11 ಗಂಟೆಗೆ ವಿದ್ಯುತ್ ಅದಾಲತ್ ಹಾಗೂ ಮಧ್ಯಾಹ್ನ 3.30 ಗಂಟೆಗೆ ಗ್ರಾಹಕರ ಸಂವಾದ ಸಭೆಯನ್ನು ಹೊನ್ನಾವರ ಉಪ- ವಿಭಾಗ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ತಮ್ಮ ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬಹುದು ಎಂದು ಹೊನ್ನಾವರ ಉಪ-ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್(ವಿ) ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನವೋದಯ ವಿದ್ಯಾಲಯ: 6 ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

ಕಾರವಾರ, ಜವಾಹರ ನವೋದಯ ವಿದ್ಯಾಲಯದ 2026-27 ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ 6ನೇ ತರಗತಿಯಲ್ಲಿ ಖಾಲಿ ಇರುವ ಸ್ಥಾನಗಳನ್ನು ಭರ್ತಿ ಮಾಡಲು, ಆನ್‌ಲೈನ್ **www.navodaya.gov.in** ನಲ್ಲಿ ಅರ್ಜಿ ಸಲ್ಲಿಸಲು ಜುಲೈ 29 ಕೊನೆಯ ದಿನವಾಗಿದ್ದು, ಡಿಸೆಂಬರ್ 13 ರಂದು ಸದರಿ ಪರೀಕ್ಷೆಯು ನಡೆಯಲಿದೆ ಎಂದು ಅಪರ ಜಿಲ್ಲಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




ಯರಗಟ್ಟಿ : ತಾಲೂಕಾ ಆಡಳಿತ ಹಾಗೂ ಪಟ್ಟಣ ಪಂಚಾಯತ ಯರಗಟ್ಟಿ ಇವರ ಆಶ್ರಯದಲ್ಲಿ ಪಟ್ಟಣದ ಸರಕಾರಿ ಮಾದರಿ ಕನ್ನಡ ಪ್ರಾಥಮಿಕ ಶಾಲಾ ಆವರಣದಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸಲಾಯಿತು.

ಈ ವೇಳೆ ಪ. ಪಂ. ಮುಖ್ಯಾಧಿಕಾರಿ ಮಹೇಶ ಭಜಂತ್ರಿ, ಶಾಲಾ ಪ್ರಧಾನಗುರುಗಳಾದ ಎ. ಎ. ಮಕ್ತುಮನ್ನವರ, ರಾಜ್ಯ ಸಂಪನ್ಮೂಲ ವ್ಯಕ್ತಿಯಾದ ಎಂ ಎಂ ಚೀಲದ, ದೈಹಿಕ ಶಿಕ್ಷಕ ಬಿ. ಎಂ. ಸರದಾರ, ಕಿರಿಯ ಆರೋಗ್ಯ ನಿರೀಕ್ಷಕ ನಾಗರಾಜ ಚವಡಪ್ಪನವರ, ಎಸ್. ಬಿ. ಮಿಕಲಿ, ಆರ್. ಕೆ. ಹುಣಸಿಕಟ್ಟಿ, ಆನಂದ ಬೆಳವಿ, ಅಡಿವೆಪ್ಪ ಇಟಗೌಡರ, ಶಿಕ್ಷಕ, ಶಿಕ್ಷಕಿಯರು ಮತ್ತು ಮಕ್ಕಳು ಇದ್ದರು.

# ದೇಹ - ಮನಸ್ಸಿನ ಸದೃಢತೆಗೆ ಯೋಗ ಅವಶ್ಯ: ಪಿ ರಾಜೀವ್

ಮುಗಳಖೋಡ: ದೇಹದ ಕ್ಷೇಮತೆಗೆ ಮಾಡುವ ಆಸನಗಳನ್ನು ಯೋಗಾಸನ ಎನ್ನುವರು, ದೈಹಿಕ ಮತ್ತು ಮಾನಸಿಕ ಕ್ಷೇಮತೆ, ಉಳಿವು ಮತ್ತು ಬೆಳವಣಿಗೆಗೆ ಮಾಡುವ ಆಸನಗಳನ್ನು ಒಟ್ಟುಗೂಡಿ ಯೋಗ ಎನ್ನುವರು ಎಂದು ಭಾಜಪಾ ರಾಜ್ಯ ಪ್ರಧಾನ ಕಾರ್ಯದರ್ಶಿ, ಪಿ ರಾಜೀವ್ ಹೇಳಿದರು.

ಅವರು ಮುಗಳಖೋಡ ಪಟ್ಟಣದ ಶ್ರೀ ಯಲ್ಲಾಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಶಾಲಾ ಆವರಣದಲ್ಲಿ ಕೇಂದ್ರ ಆಯುಷ್ಯ ಸಚಿವಾಲಯ ನವದೆಹಲಿ, ಮುರಾರ್ಜಿ ದೇಸಾಯಿ ರಾಷ್ಟ್ರೀಯ ಯೋಗ ಸಂಸ್ಥೆ ನವದೆಹಲಿ ಹಾಗೂ ಶ್ರೀ ಯಲ್ಲಾಲಿಂಗೇಶ್ವರ ಶಿಕ್ಷಣ ಮತ್ತು ಸಾಮಾಜಿಕ ಕಲ್ಯಾಣ ಸಂಸ್ಥೆ ಇದರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ



ದೇಹ ಸದೃಢತೆಗೆ ಯೋಗಾಸನ, ಉಸಿರಿನ ಬೆಳವಣಿಗೆಗೆ ಪ್ರಾಣಾಯಾಮ, ಆತ್ಮಸುದ್ದಿಗೆ ಯೋಗ ಮತ್ತು ಧ್ಯಾನ ಅವಶ್ಯವಾದದ್ದು. ದೇಹಕ್ಕಿಂತ ಶಕ್ತಿಶಾಲಿ ಮನಸ್ಸು, ಮನಸ್ಸು ನಿರ್ದೇಶನ ಕೊಟ್ಟ ನಂತರ ದೇಹ ಕೆಲಸ ಮಾಡುತ್ತದೆ ಕಾರಣ ಮನಸ್ಸನ್ನು ಸದೃಢಗೊಳಿಸುವುದು ಯೋಗ ಎಲ್ಲರೂ ದಿನನಿತ್ಯ ತಮ್ಮ ಜೀವನದಲ್ಲಿ 20 ರಿಂದ 30 ನಿಮಿಷ ಯೋಗಾಭ್ಯಾಸ ಅಳವಡಿಸಿಕೊಳ್ಳಿ ಎಂದರು. ಕಾರ್ಯಕ್ರಮದ ದಿವ್ಯ ಸಾನಿಧ್ಯವಹಿಸಿದ ಜಾರಕಿಹೊಳಿ ಗ್ರಾಮದ ಕೃಪಾನಂದ ಸ್ವಾಮೀಜಿ ಪತಂಜಲಿ ಮಹರ್ಷಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಯೋಗದಿಂದ ರೋಗ ಮುಕ್ತಿ ಎಂದು ಆಶೀರ್ವಚನ ನೀಡಿದರು. ಸಂಸ್ಥೆಯ ಅಧ್ಯಕ್ಷ ರಮೇಶ ಖೇತಗೌಡರ ಎಲ್ಲರನ್ನು ಸ್ವಾಗತಿಸಿ ಕಾರ್ಯಕ್ರಮದ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಈ ಸಂದರ್ಭದಲ್ಲಿ ಸಿದ್ದು ಮೂಡಲಗಿ, ವಸಂತ್ ಲಾಳಿ, ಶಿವಾನಂದ ಗೋಕಾಕ, ಕಾಂತು ಬ್ಯಾಡಗಿ, ಲತಾ ಹುದ್ದಾರ, ಅಣ್ಣಪೂರ್ಣಾ ಯರಡತ್ತಿ, ಸಂತೋಷ್ ಅರಭಾವಿ, ಬಸಗೌಡ ಖೇತಗೌಡರ , ಸಂಸ್ಥೆಯ ಕಾರ್ಯದರ್ಶಿ ಮಹಾದೇವ ಶೇಗುಣಸಿ, ನಿವೃತ್ತ ಸೈನಿಕರಾದ ಮುರೆಪ್ಪ ಶೇಗುಣಸಿ, ಬಾಹುಬಲಿ ಬಾಬಣ್ಣವರ, ಪ್ರವೀಣ ಗವನ್ನವರ ಸೇರಿದಂತೆ ಪಟ್ಟಣದ ಮುಖಂಡರು, ಹಿರಿಯರು, ಯುವಕರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

## ಯೋಗ ಪರಂಪರೆ ವಿಶ್ವವ್ಯಾಪಿಯಾಗಿ ಬೆಳೆದಿದೆ: ಪ್ರೊ.ಕೆ.ವಿ. ಪ್ರಸಾದ್

ಕೊಪ್ಪಳ : ದೇಹ ಮತ್ತು ಮನಸ್ಸಿನ ಸಂಯೋಗವೇ ಯೋಗ ಭಾರತೀಯ ಯೋಗ ಪರಂಪರೆಯಿಂದು ವಿಶ್ವವ್ಯಾಪಿಯಾಗಿ ಬೆಳೆದಿದೆ ಎಂದು ಕೊಪ್ಪಳ ವಿಶ್ವ ವಿದ್ಯಾಲಯದ ಕುಲಸಚಿವರಾದ ಪ್ರೊ.ಕೆ.ವಿ. ಪ್ರಸಾದ್ ಹೇಳಿದರು.

ಕೊಪ್ಪಳ ವಿಶ್ವ ವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಯೋಗಾಭ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ದಿನ ನಿತ್ಯ ಯೋಗ ಮಾಡಿದರೆ ನಮ್ಮ್ ಮಾನಸಿಕ ಒತ್ತಡ ಕಡಿಮೆ ಮಾಡಿಕೊಳಬಹುದು ಹಾಗೂ ಆತ್ಮಕ್ಕೆ ಸಮತೋಲನ ತರುವ ಪ್ರಕ್ರಿಯಲ್ಲಿ ಯೋಗ ಮಹತ್ವದಾಗಿದು ಎಂದರು.

ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು, ಉಪನ್ಯಾಸಕರು ಯೋಗಾಭ್ಯಾಸ ಮಾಡಿದರು, ಯೋಗ ಉಪನ್ಯಾಸಕರಾದ ಶರಣಪ್ಪ ಮಣ್ಣೂರು, ದೈಹಿಕ ಉಪನ್ಯಾಸಕ ಮಂಜುನಾಥ್, ಕೊಪ್ಪಳ ವಿಶ್ವವಿದ್ಯಾಲಯದ ಆಡಳಿತಾಧಿಕಾರಿ ತಿಮ್ಮಾರೆಡ್ಡಿ ಮೇಟಿ ಮತ್ತಿತರರು ಉಪಸ್ಥಿತರಿದ್ದರು.

## ಯೋಗ ಪರಂಪರೆ ವಿಶ್ವವ್ಯಾಪಿಯಾಗಿ ಬೆಳೆದಿದೆ: ಪ್ರೊ.ಕೆ.ವಿ. ಪ್ರಸಾದ್

ಕೊಪ್ಪಳ : ದೇಹ ಮತ್ತು ಮನಸ್ಸಿನ ಸಂಯೋಗವೇ ಯೋಗ ಭಾರತೀಯ ಯೋಗ ಪರಂಪರೆಯಿಂದು ವಿಶ್ವವ್ಯಾಪಿಯಾಗಿ ಬೆಳೆದಿದೆ ಎಂದು ಕೊಪ್ಪಳ ವಿಶ್ವ ವಿದ್ಯಾಲಯದ ಕುಲಸಚಿವರಾದ ಪ್ರೊ.ಕೆ.ವಿ. ಪ್ರಸಾದ್ ಹೇಳಿದರು.

ಕೊಪ್ಪಳ ವಿಶ್ವ ವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಯೋಗಾಭ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ದಿನ ನಿತ್ಯ ಯೋಗ ಮಾಡಿದರೆ ನಮ್ಮ್ ಮಾನಸಿಕ ಒತ್ತಡ ಕಡಿಮೆ ಮಾಡಿಕೊಳಬಹುದು ಹಾಗೂ ಆತ್ಮಕ್ಕೆ ಸಮತೋಲನ ತರುವ ಪ್ರಕ್ರಿಯಲ್ಲಿ ಯೋಗ ಮಹತ್ವದಾಗಿದು ಎಂದರು.

ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು, ಉಪನ್ಯಾಸಕರು ಯೋಗಾಭ್ಯಾಸ ಮಾಡಿದರು, ಯೋಗ ಉಪನ್ಯಾಸಕರಾದ ಶರಣಪ್ಪ ಮಣ್ಣೂರು, ದೈಹಿಕ ಉಪನ್ಯಾಸಕ ಮಂಜುನಾಥ್, ಕೊಪ್ಪಳ ವಿಶ್ವವಿದ್ಯಾಲಯದ ಆಡಳಿತಾಧಿಕಾರಿ ತಿಮ್ಮಾರೆಡ್ಡಿ ಮೇಟಿ ಮತ್ತಿತರರು ಉಪಸ್ಥಿತರಿದ್ದರು.

## ಪ್ರಶಸ್ತಿಗೆ ಅರ್ಜಿ ಆಹ್ವಾನ

ಹಾವೇರಿ: : ಯುವ ವ್ಯವಹಾರ ಮತ್ತು ಕ್ರೀಡಾ ಮಂತ್ರಾಲಯದಿಂದ 2024ನೇ ಸಾಲಿನ ತೇನ್ಸಿಂಗ್ ನೋರ್ಗೆ ರಾಷ್ಟ್ರೀಯ ಸಾಹಸ ಪ್ರಶಸ್ತಿ **(Tenzing Norjy National Adventure Award (INNAA))**ಗೆ ಅರ್ಜಿ ಆಹ್ವಾನಿಸಲಾಗಿದೆ.

ಕಳೆದ 2022, 2023, 2024ನೇ ಸಾಲಿನಲ್ಲಿ ಜಲಸಾಹಸ, ವಾಯು ಸಾಹಸ ಮತ್ತು ಭೂ ಸಾಹಸ ಕ್ರೀಡೆಗಳಲ್ಲಿ ಸಾಧನೆ ಮಾಡಿರುವ ಕ್ರೀಡಾಪಟುಗಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಅರ್ಹರಾಗಿದ್ದಾರೆ. ಅರ್ಹ ಕ್ರೀಡಾಪಟುಗಳು ದಿನಾಂಕ 30-06-2025ರೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ವೆಬ್‌ಸೈಟ್ **http://awards.gov.in/** ಮೂಲಕ ಅರ್ಜಿ ಸಲ್ಲಿಸಬಹುದು.

ಆನ್‌ಲೈನ್ ಅರ್ಜಿ ನಮೂನೆಯಲ್ಲಿ ಯಾವುದೇ ಸಮಸ್ಯೆಗಳು ಎದುರಾದರೆ, ಅರ್ಜಿದಾರರು ಸಹಾಯಕ್ಕಾಗಿ ಟೋಲ್ ಫ್ರೀ ನಂಬರ್ 01123386898ಗೆ ಕರೆ ಮಾಡಬಹುದು.

ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ 08375-232443/232070 ಅಥವಾ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಹಾವೇರಿ ಅವರನ್ನು ಸಂಪರ್ಕಿಸಬಹುದೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ದಿ. ಕೆ.ಎಚ್.ಪಾಟೀಲ್ ರವರ ಮೂರ್ತಿ ಅನಾವರಣ ಕಾರ್ಯಕ್ರಮ

ಕೊಪ್ಪಳ : ಜಲ ಸಂಪನ್ಮೂಲ ಇಲಾಖೆಯ ಕರ್ನಾಟಕ ನೀರಾವರಿ ನಿಗಮ ನಿಯಮಿತದ ವತಿಯಿಂದ ಮಾಜಿ ಮಂತ್ರಿಗಳಾದ ದಿ. ಶ್ರೀಯುತ ಕೆ.ಎಚ್. ಪಾಟೀಲ್ ರವರ ಮೂರ್ತಿ ಅನಾವರಣ ಕಾರ್ಯಕ್ರಮವನ್ನು ಜೂನ್ 22ರ ರವಿವಾರ ಬೆಳಿಗ್ಗೆ 11 ಗಂಟೆಗೆ ಕುಕನೂರು ತಾಲ್ಲೂಕಿನ ಶಿರೂರು ಪುನರ್‌ವಸತಿ ಗ್ರಾಮದಲ್ಲಿ ನಡೆಯಲಿದೆ. ಉಪ ಮುಖ್ಯಮಂತ್ರಿಗಳು, ಜಲ ಸಂಪನ್ಮೂಲ ಸಚಿವರು ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವರಾದ ಡಿ.ಕೆ. ಶಿವಕುಮಾರ ಮತ್ತು ಗೃಹ ಸಚಿವರಾದ ಡಾ. ಜಿ. ಪರಮೇಶ್ವರ ಅವರು ನೂತನ ಮೂರ್ತಿ ಅನಾವರಣ ಮಾಡುವರು. ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸವರಾಜ ರಾಯರಡ್ಡಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಸರ್ಕಾರದ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷರಾದ ಆರ್.ವಿ. ದೇಶಪಾಂಡೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ, ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರಾದ ಹೆಚ್.ಕೆ. ಪಾಟೀಲ, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್. ಎಸ್. ಭೋಸರಾಜು ಹಾಗೂ ಕರ್ನಾಟಕ ವಿಧಾನಸಭೆ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ವಿಧಾನಸಭಾ ಕ್ಷೇತ್ರದ ಶಾಸಕರಾದ ದೊಡ್ಡನಗೌಡ ಹನುಮನಗೌಡ ಪಾಟೀಲ್ ಅವರು ಘನ ಉಪಸ್ಥಿತರಿರುವರು.

ಮುಖ್ಯ ಅತಿಥಿಗಳಾಗಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ, ವಿಧಾನ ಪರಿಷತ್ ಸದಸ್ಯರುಗಳಾಗ ಶಶೀಲ್ ಜಿ. ನಮೋಶಿ, ಡಾ. ಚಂದ್ರಶೇಖರ ವಿ. ಪಾಟೀಲ್, ಶರಣಗೌಡ ಅನ್ನದಾನಗೌಡ ಪಾಟೀಲ್ ಬಯ್ಯಾಪೂರ ಹಾಗೂ ಹೇಮಲತಾ ನಾಯಕ, ಮುನಿರಾಬಾದ್ ತುಂಗಭದ್ರಾ ಯೋಜನೆಯ (ಕಾಡಾ) ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಹಸನಸಾಬ ನಬಿಸಾಬ ದೋಟಿಹಾಳ ಪಾಲ್ಗೊಳ್ಳುವರು. ವಿಶೇಷ ಆಹ್ವಾನಿತರಾಗಿ ಜಲಸಂಪನ್ಮೂಲ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ, ಕೊಪ್ಪಳ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಕೆ.ಪಿ. ಮೋಹನರಾಜ್, ಜಲಸಂಪನ್ಮೂಲ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಕೃಷ್ಣಮೂರ್ತಿ ಬಿ. ಕುಲಕರ್ಣಿ, ಕರ್ನಾಟಕ ನೀರಾವರಿ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕ ರಾಜೇಶ್ ಅಮ್ಮಿನಭಾವಿ, ಮಾಜಿ ಜಿ.ಪಂ. ಉಪಾಧ್ಯಕ್ಷರಾದ ಯಂಕಣ್ಣ ಯರಾಶಿ ಹಾಗೂ ಹನಮಂತಗೌಡ ಪಾಟೀಲ್, ಕುಕನೂರಿನ ಸತ್ಯನಾರಾಯಣ ಹರಪನಹಳ್ಳಿ, ಮಾಜಿ ಜಿ.ಪಂ. ಸದಸ್ಯರಾದ ಅಶೋಕ ತೋಟದ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಉಪಾಧ್ಯಕ್ಷರಾದ ಕಾಶಿಂಸಾಬ ತಳಕಲ್, ಕುಕನೂರ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲೂಕ ಅಧ್ಯಕ್ಷರಾದ ಸಂಗಮೇಶ ಗುತ್ತಿ ಭಾಗವಹಿಸುವರು.

ಕಾರ್ಯಕ್ರಮದಲ್ಲಿ ಕೊಪ್ಪಳ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಕನೀನಿನಿ ನೀರಾವರಿ ಕೇಂದ್ರ ವಲಯ ಮುನಿರಾಬಾದನ ಮುಖ್ಯ ಇಂಜೀನಿಯರ್ ಎಲ್. ಬಸವರಾಜ, ಕನೀನಿನಿ ಸಿಂಗಟಾಲೂರ ಏತ ನೀರಾವರಿ ಯೋಜನೆ ವಿಭಾಗ ನಂ.1 ಮುಂಡರಗಿಯ ಕಾರ್ಯ ನಿರ್ವಾಹಕ ಅಭಿಯಂತರರಾದ ಐ. ಪ್ರಕಾಶ, ಕನೀನಿನಿ ಸಿಂಗಟಾಲೂರ ಏತ ನೀರಾವರಿ ಯೋಜನೆ ಉಪ ವಿಭಾಗ ನಂ.3 ಅಳವಂಡಿಯ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ರಾಘವೇಂದ್ರಚಾರ್ಯ ಜೋಶಿ ಹಾಗೂ ಶಿರೂರು ಗ್ರಾಮ ಪಂಚಾಯತ್ ಸರ್ವ ಸದಸ್ಯರು, ಯೋಜನಾ ಅನುಷ್ಠಾನ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಮತ್ತು ಗ್ರಾಮದ ಗುರು-ಹಿರಿಯರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ವಿಶ್ವ ತಂಬಾಕು ರಹಿತ ದಿನ ಆಚರಣೆ

ಕಾರವಾರ. : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆರೋಗ್ಯ ಮತ್ತು ಕು.ಕ. ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ, ಕಾರವಾರ ಇವರ ಸಂಯುಕ್ತ ಆಶ್ರಯದಲ್ಲಿ ಸೇಂಟ್ ಜೊಸೇಫ್ ಪದವಿ ಪೂರ್ವ ಕಾಲೇಜು ಸಭಾಭವನದಲ್ಲಿ ಗುರುವಾರ ಆಯೋಜಿಸಲಾದ 'ವಿಶ್ವ ತಂಬಾಕು ರಹಿತ ದಿನವನ್ನು' ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ದಿವ್ಯಶ್ರೀ ಸಿ.ಎಮ್ ಉದ್ಘಾಟಿಸಿದರು. ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸರ್ವೇಕ್ಷಣಾಧಿಕಾರಿ ಹಾಗೂ ಕಾರ್ಯಕ್ರಮಾಧಿಕಾರಿ ಡಾ. ಅರ್ಚನಾ ನಾಯಕ ವಿಶ್ವ ತಂಬಾಕು ರಹಿತ ದಿನಾಚರಣೆ ಮತ್ತು ಧ್ಯೇಯ ವಾಕ್ಯ "ಆಕರ್ಷಕ



ಉತ್ಪನ್ನಗಳು-ಕರಾಳ ಉದ್ದೇಶಗಳು, ತಂಬಾಕು ಮತ್ತು ನಿಕೋಟಿನ್ ಉದ್ಯಮಗಳ ಮುಖವಾಡ ಬಿಚ್ಚಿಡುವುದರ" ಕುರಿತು ಪ್ರಾಸ್ತವಿಕವಾಗಿ ಮಾತನಾಡಿದರು.

ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಪ್ರೇಮಕುಮಾರ ನಾಯ್ಕ ತಂಬಾಕು ಸೇವನೆಯಿಂದ ಆರೋಗ್ಯದ ಮೇಲಾಗುವ ದುಷ್ಪರಿಣಾಮಗಳ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು. ಕಾರವಾರದ ಸೇಂಟ್ ಜೊಸೇಫ್ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ಫಾದರ್ ಸ್ಟ್ಯಾನಿ ಪಿಂಟೋ, ತಾಲೂಕಾ ಆರೋಗ್ಯಾಧಿಕಾರಿ ಡಾ.ಸುಧೀತಾ ಪೆಡ್ನೇಕರ ಮತ್ತು ಸಮಾಜ ಕಾರ್ಯಕರ್ತ ಗೋರೇಸಾಬ ನದಾಫ ರವರು ಉಪಸ್ಥಿತರಿದ್ದರು. ವೃಂದಾ ತಾಮ್ಸೆ ವಂದಿಸಿದರು.

# ಸಂಯೋಜಿತ ಪದವಿಗಳ ಕಾರ್ಯಗಾರ ನಮ್ಮ ಭಾಗದ ವಿದ್ಯಾರ್ಥಿಗಳಿಗಾಗಿ ಮದರಿಯವರು ಮಾಡಿದ ಕಾರ್ಯ ಅಮೋಘ




ಮುದ್ದೇಬಿಹಾಳ :ಸಂಯೋಜಿತ ಪದವಿಗಳ ಕಾರ್ಯಗಾರ ನಮ್ಮ ಭಾಗದ ವಿದ್ಯಾರ್ಥಿಗಳಿಗಾಗಿ ಮದರಿಯವರು ಮಾಡಿದ ಕಾರ್ಯ ಅಮೋಘದದು ಎಂದು ಹಿರಿಯ ಸಾಹಿತಿ ನಿವೃತ್ತ ಪ್ರಾಧ್ಯಾಪಕ ಬಿ ಎಂ ಹಿರೇಮಠ ಹೇಳಿದರು. ಶುಕ್ರವಾರ ಸಂಜೆ ಪಟ್ಟಣದ ಹೊಳ್ಕರ ಬಡಾವಣೆಯ ಅಹಿಲ್ಯಾದೇವಿ ಹೊಳ್ಕರ ಸಮೂಹ ಶಿಕ್ಷಣ ಸಂಸ್ಥೆಯಲ್ಲಿ ಧಾರವಾಡ ವಿವಿ ನಿವೃತ್ತ ಕುಲಪತಿ ಹೆಚ್ ಬಿ ವಾಲಿಕಾರ ಮಾರ್ಗದರ್ಶನದಲ್ಲಿ ನಡೆದ 2 ದಿನ ನಡೆದ ಸಂಯೋಜಿತ ಪದವಿಗಳ ಕಾರ್ಯಾಗಾರ ಸಮಾರೋಪ ಸಮಾರಂಭದ ಮುಖ್ಯ ಅತಿಥಿಯಾಗಿ ಮಾತನಾಡಿದರು ಸ್ವಾತಂತ್ರ್ಯ ಪೂರ್ವ ಹಾಗೂ ಸ್ವಾತಂತ್ರ್ಯ ನಂತರದಲ್ಲಿ ಭಾರತದಲ್ಲಿಯ ಶಿಕ್ಷಣ ಪದ್ಧತಿ ಶಿಕ್ಷಣ ಕಲಿಯಲು ಏಷ್ಟೆಲ್ಲಾ ಕಷ್ಟಪಡಬೇಕಿತ್ತು ಎಂದು ವಿವರಿಸಿದರು , ಸಂಯೋಜಿತ ಪದವಿಗಳ ಕಾರ್ಯಗಾರದ ಮೂಲಕ ವಿದ್ಯಾರ್ಥಿಗಳಿಗೆ ಸರಕಾರಿ ಹುದ್ದೆಗಳನ್ನು ಪಡೆಯಲು ನೇರವಾಗಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಸಂಸ್ಥೆಯ ಕಾರ್ಯದರ್ಶಿ ಶಿಕ್ಷಣ ಪ್ರೇಮಿ ಮಲ್ಲಿಕಾರ್ಜುನ ಮದರಿ ಮಾತನಾಡಿ ಸಂಯೋಜಿತ ಪದವಿಗಳ ಕಾರ್ಯಗಾರದ ಪರಿಕಲ್ಪನೆ ನೀಡಿದವರು ಧಾರವಾಡ ವಿವಿ ನಿವೃತ್ತ ಕುಲಪತಿಗಳಾದ ಹೆಚ್ ಬಿ ವಾಲಿಕಾರ ಅವರು ಕಾರ್ಯಗಾರದ ಸಂಪೂರ್ಣ ಜವಾಬ್ದಾರಿ ವಹಿಸಿಕೊಂಡು ಧಾರವಾಡದಿಂದ ನುರಿತ ಶಿಕ್ಷಣ ತಜ್ಞರು ತರಬೇತುದಾರರಿಂದ ನಮ್ಮ ಭಾಗದ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ತಯಾರಿ ಹಾಗೂ ಸರಕಾರಿ ಹುದ್ದೆಗಳನ್ನು ಪಡೆಯಲು ಸಕಾರಾತ್ಮಕ ಚಿಂತನೆ ತುಂಬಿದ್ದಾರೆ ಎಂದ ಅವರು ನಮ್ಮ ಪದವಿ ವಿದ್ಯಾರ್ಥಿಗಳಿಗೆ ಹೈಬ್ರೀಡ್ ಕ್ಲಾಸ್ ( ಸ್ಮಾರ್ಟ್ ಕ್ಲಾಸ್) ಮೂಲಕ ತರಬೇತಿ ನೀಡಲಾಗುತ್ತದೆ ಹಾಗೆ ಹೊರಗಿನ ವಿದ್ಯಾರ್ಥಿಗಳಿಗೆ ಸಹ ಸ್ಮಾರ್ಟ್ ಕ್ಲಾಸ್ ವ್ಯವಸ್ಥೆ ಮಾಡುತ್ತವೆ ನಮ್ಮ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆಯಬೇಕು ಎಂದರು.

ಬಿ .ಜಿ ಜಗ್ಗಲ ವಕೀಲರು ಮಾತನಾಡಿದರು. ಕಾರ್ಯಗಾರದಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಳಾದ ತಿಪ್ಪಣ್ಣ ಓಡಿ, ಕಾವೇರಿ ಪತ್ತಾರ ಅನಿಸಿಕೆಯನ್ನು ಹಂಚಿಕೊಂಡರು.

ಎರಡನೇ ದಿನದ ಕಾರ್ಯಾಗಾರದಲ್ಲಿ ಡಾ.ಹೆಚ್ ಬಿ ವಾಲಿಕಾರ ,ಪ್ರಿಯಾಂಕಾ ಪತ್ತಾರ,ಡಾ.ಕೆ ಅಶೋಕ,ಶೇಖಪ್ಪ ಮೇಟಿ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ಸಂಸ್ಥೆ ನಿರ್ದೇಶಕ ಕಿರಣ ಮದರಿ, ಪಿಎಲ್ಡಿ ಬ್ಯಾಂಕ್ ನ ಅಧ್ಯಕ್ಷ ಬಿ.ಕೆ ಬಿರಾದಾರ,ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಎಂ ಎಂ ಬೆಲಗಲ್ಲ, ಲೆಕ್ಕ ವ್ಯವಸ್ಥಾಪಕ ಬಸವರಾಜ ಬಿಜ್ಜೂರ,ಆಡಳಿತಧಿಕಾರಿ ಬಿ ಜಿ ಬಿರಾದಾರ, ಪದವಿ ಪ್ರಾಂಶುಪಾಲರು ಆರ್ ಎಸ್ ಜಡಗಿ, ಪಿಯು,ಪ್ರಾಚಾರ್ಯ ಎಂ ಎಂ ಧನೂರ,ಮುಖ್ಯ ಗುರುಗಳು ಪ್ರಶಾಂತ ಬಿರಾದಾರ, ಉಪನ್ಯಾಸಕರಾದರಂಗಸ್ವಾಮಿ ಎಸ್,ವಿರೇಶ ಹುಲಿಕೆರಿ,ರವಿ ಛಲವಾದಿ,ರವಿ ಜಗಲಿ,ಬಸವರಾಜ ಗುಡಲಮನಿ,ಶ್ರೀಮತಿ ಎಸ್ ಎಂ ದೇಶಮುಖ ಎಸ್ ಎಂ ನದಾಫ,-ಎಂ ಸಿ ಹೆಬ್ಬಾಳ,ಎಂ ಎಚ್ ವನಕಿಹಾಳ,-ಎಸ್ ಯು ತಾರಾನಾಳ, ಪಿ ಬಿ ಕುಲಕರ್ಣಿ,ಎ ಎಫ್ ಭುವಾಜಿ, ಜಯಶ್ರೀ ಕುಂಬಾರ, ಜಿ ಬಿ ನಾಗರಾಳ,ಎಸ್ ಎಲ್ ಮಡಿವಾಳರ, ಎನ್ ಟಿ ಗೌಡರ,ಕೆ ಬಿ ರೂಡಗಿ,ಸೇರಿದಂತೆ ಉಪಸ್ಥಿತರಿದ್ದರು.

# ಪ್ರಧಾನಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಕಾರವಾರ, : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯ, ಭಾರತ ಸರಕಾರದಿಂದ 2025ನೇ ಸಾಲಿಗೆ ಪ್ರಧಾನಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

2025 ರ ಜುಲೈ 31ಕ್ಕೆ ಅನ್ವಯವಾಗುವಂತೆ 5 ವರ್ಷ ಮೇಲ್ಪಟ್ಟ ಹಾಗೂ 18 ವರ್ಷದೊಳಗಿನ ವಿವಿಧ ಕ್ಷೇತ್ರಗಳ ಸಾಧಕರಾದ (ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ, ಕ್ರೀಡೆ,ಸಮಾಜ ಸೇವೆ, ತಂತ್ರಜ್ಞಾನ, ಪರಿಸರ ಸಂರಕ್ಷಣೆ, ಕಲೆ,ಸಂಸ್ಕೃತಿ ಮತ್ತು ನೂತನ ಆವಿಷ್ಕಾರಗಳು) ಎಲ್ಲಾ ಮಕ್ಕಳ ಪ್ರಶಸ್ತಿಗೆ ಅರ್ಜಿಯನ್ನು ಆನ್‌ಲೈನ್ **https://awards.gov.in** ಮೂಲಕ ಸಲ್ಲಿಸಲು ಜುಲೈ 31 ಕೊನೆಯ ದಿನವಾಗಿದೆ ಎಂದು ಜಿಲ್ಲಾ ಮಕ್ಕಳ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಿಣಿಗೇರಾ ಗ್ರಾಮದ ಅಮೃತ ಸರೋವರ ದಡದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ



ಕೊಪ್ಪಳ : ಅಂತರಾಷ್ಟ್ರೀಯ ಯೋಗ ದಿನ ಪ್ರಯುಕ್ತ ಗಿಣಿಗೇರಾ ಗ್ರಾಮ ಪಂಚಾಯತಿ ಹಾಗೂ ಕೆರೆ ಅಭಿವೃದ್ಧಿ ಸಮಿತಿ ವತಿಯಿಂದ ಗಿಣಿಗೇರಾ ಗ್ರಾಮದ ಅಮೃತ ಸರೋವರ ದಡದಲ್ಲಿ ಶನಿವಾರ ಯೋಗಭ್ಯಾಸ ಮತ್ತು ಪ್ರಾಣಾಯಮ ಅಭ್ಯಾಸಗಳನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಕುರಿತು ಗಿಣಿಗೇರಿ ಕೆರೆ ಸಮಿತಿ ಅಧ್ಯಕ್ಷರಾದ ಸುಬ್ಬಣ್ಣಚಾರ ಮಾತನಾಡಿ, ಪ್ರಸ್ತುತ ದಿನದಲ್ಲಿ ಆಹಾರ ಪದ್ಧತಿ ಬಹು ಮುಖ್ಯವಾದದು. ಆಹಾರ ಪದ್ಧತಿಯನ್ನು ನಾವು ಬದಲಾವಣೆ ಮಾಡಿಕೊಳ್ಳುವದು ಸೂಕ್ತ. ಬದಲಾವಣೆ ಮಾಡಿಕೊಳ್ಳದೇ ಇದ್ದಲ್ಲಿ ಮುಂದಿನ ದಿನಗಳಲ್ಲಿ ಆರೋಗ್ಯದ ಮೇಲೆ ಪರಿಣಾಮ ಬೀರುವದು ಖಂಡಿತವೆಂದರು. ಆಧುನಿಕ ಜಗತ್ತಿನಲ್ಲಿರುವ ನಾವುಗಳು ಪ್ರತಿನಿತ್ಯ ಬದುಕಿನಲ್ಲಿ ಒತ್ತಡ ಜೀವನ ಸಾಗಿಸುತ್ತಿದ್ದೇವೆಂದರು. ಪ್ರತಿ ದಿನ ನಾವುಗಳು ಆರೋಗ್ಯದಿಂದ ಇರಬೇಕಾದ ದಿನದ 24 ಗಂಟೆಗಳಲ್ಲಿ 1 ಗಂಟೆಯಾದರು ಯೋಗ ಮತ್ತು ಪ್ರಾಣಾಯಮವನ್ನು ರೂಢಿಸಿಕೊಳ್ಳಬೇಕು. ಹಿಂದಿನ ಕಾಲದಲ್ಲಿ ಋಷಿಮುನಿಗಳು ಯೋಗ ಮತ್ತು ಪ್ರಾಣಾಯಮದಿಂದ ಆರೋಗ್ಯವನ್ನು ಗೆಲ್ಲುವದಕ್ಕೆ ಸಾಧ್ಯ ಎಂಬುದನ್ನು ಮನಗಂಡು ಸಾಧನೆಗೈದು ಇತರರಿಗೆ ಮಾದರಿಯಾಗಿದ್ದಾರೆ. ಗ್ರಾಮದ ಕೆರೆಗಳು ಜೀವಂತ ಆಗರಗಳು ಎನ್ನುವ ಪದಕ್ಕೆ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯವು ಅಮೃತ ಸರೋವರ ದಡದಲ್ಲಿ ಯೋಗ ಮತ್ತು ಪ್ರಾಣಾಯಮ ಶಿಬಿರಗಳನ್ನು ಆಯೋಜಿಸಲು ನಿರ್ದೇಶನ ನೀಡಿರುವದು ಕೆರೆಯ ಮಹತ್ವಕ್ಕೆ ಆದ್ಯತೆ ನೀಡಿದೆ ಎಂದರು.

ಯೋಗ ಮತ್ತು ಪ್ರಾಣಾಯಮಕ್ಕೆ ಯಾವುದೇ ರೀತಿಯ ವಯಸ್ಸಿನ ಇತಿ ಮಿತಿ ಇರುವದಿಲ್ಲ. ಆದರೆ ಕ್ರಮಬದ್ಧವಾಗಿ ಯೋಗಭ್ಯಾಸ ರೂಢಿಸಿಕೊಳ್ಳಬೇಕೆಂದರು.

ಕಾಮನೂರು ಆಯುಷ್ ಆಸ್ಪತ್ರೆಯ ಯೋಗ ವಿಭಾಗದ ಡಾ. ಕಳಕೇಶ್ ಮಾತನಾಡಿ, ಯೋಗದಿಂದ ಅನೇಕ ಮಹತ್ ಸಾಧನೆಗಳನ್ನು ಮಾಡಬಹುದಾಗಿದೆ. ಮನಸ್ಸು ಮತ್ತು ದೇಹ ಆರೋಗ್ಯ ಇರಬೇಕಾದಲ್ಲಿ ನಾವುಗಳು ಕ್ರಮಬದ್ಧವಾಗಿ ಯೋಗಭ್ಯಾಸ ರೂಢಿಸಿಕೊಂಡು ನಮ್ಮ ಮನೆಯಲ್ಲಿರುವ ಸದಸ್ಯರಿಗೆ, ಸುತ್ತ-ಮುತ್ತಲಿನವರಿಗೆ ಅದರ ಮಹತ್ವ ಬಗ್ಗೆ ತಿಳಿ ಹೇಳಬೇಕೆಂದರು.

ಕಾರ್ಯಕ್ರಮದಲ್ಲಿ ಯೋಗ ಅಭ್ಯಾಸ ಮತ್ತು ಪ್ರಾಣಾಯಮ ಭಂಗಿಗಳನ್ನು ಡಾ. ಕಳಕೇಶ್, ದೈಹಿಕ ಶಿಕ್ಷಕ ಬಸನಗೌಡ ಮಾಹಿತಿ ನೀಡಿದರು. ಕಾರ್ಯಕ್ರಮವನ್ನು ಪಿಡಿಓ ಮಂಜುಳಾದೇವಿ ನಿರ್ವಹಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ರೇಣುಕಾ ಫಕೀರಪ್ಪ ವಡ್ಡರ, ಗ್ರಾ.ಪಂ ಸದಸ್ಯರಾದ ಕರಿಯಪ್ಪ ಮೇಟಿ, ರಂಜಿತಾ ಚವ್ಹಾಣ್, ಜಿಲ್ಲಾ ಐಇಸಿ ಸಂಯೋಜಕ ಶ್ರೀನಿವಾಸ ಚಿತ್ರಗಾರ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ಪಂಚಾಯತ ಅಭಿವೃದ್ಧಿ ಅಧಿಕಾರಿ ಮಂಜುಳಾದೇವಿ ಹೂಗಾರ, ಮುಖಂಡರಾದ ಕೊಟ್ರಬಸಯ್ಯ, ಯಮನೂರಪ್ಪ ಚವ್ಹಾಣ್, ನೀಲಪ್ಪ ಮೂರಮನಿ, ಗುರಪ್ಪ ಗುಡೇಕಾರ, ಶಂಕರ ಲಮಾಣಿ, ಹನಮೇಶ್ ನಾಯಕ, ಕೆರೆ ಅಭಿವೃದ್ಧಿ ಸದಸ್ಯರಾದ ಅನಿಲ್ ಜಾನಾ, ಪ್ರೌಢಶಾಲಾ ಮುಖ್ಯೋಪಾಧ್ಯಾಯರಾದ ಸದಾನಂದ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಮಂಜುನಾಥ, ಗ್ರಾಮ ಪಂಚಾಯತಿ ಸಿಬ್ಬಂದಿಗಳಾದ ಈಶ್ವರಯ್ಯ ಪೋಲಿಸ್ ಪಾಟೀಲ, ರಾಜಾ, ರಾಜಾಭಕ್ಷಿ, ಆಶಾ ಕಾರ್ಯಕರ್ತರು, ಶಾಲಾ ಮಕ್ಕಳು, ಶಿಕ್ಷಕರು ಹಾಜರಿದ್ದರು.

## ಶಿಶುಪಾಲನಾ ಕೇಂದ್ರದಲ್ಲಿ ಮಕ್ಕಳಿಂದ ಯೋಗ ದಿನಾಚರಣೆ



ಗದಗ : ಜಿಲ್ಲಾಡಲೀತದಲ್ಲಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶಿಶುಪಾಲನಾ ಕೇಂದ್ರದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ, ಶಿಶುಪಾಲನಾ ಕೇಂದ್ರದ ಮಕ್ಕಳು ಹಾಗೂ ಶಿಕ್ಷಕಿಯರಿಂದ ಯೋಗಾದಿನಾಚರಣೆಯನ್ನು ಆಚರಿಸಲಾಯಿತು.

## ಜೂ.23 ರಂದು ಪ್ರಜಾಸ್ನೇಹಿ ಆಡಳಿತ ಕಾರ್ಯಾಗಾರ-ಪ್ರಮಾಣ ಪತ್ರ ವಿತರಣಾ ಸಮಾರಂಭ

ಹಾವೇರಿ: : ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಹಾವೇರಿ ಜಿಲ್ಲಾ ಶಾಖೆ ವತಿಯಿಂದ ಪ್ರಜಾಸ್ನೇಹಿ ಆಡಳಿತ ಕಾರ್ಯಾಗಾರ, 2ನೇ ಬಾರಿಗೆ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾದ ಸಿ.ಎಸ್.ಷಡಾಕ್ಷರಿ ಅವರಿಗೆ ಅಭಿನಂದನಾ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಹಾವೇರಿ ಜಿಲ್ಲಾ ಶಾಖೆ ಪದಾಧಿಕಾರಿಗಳಿಗೆ ಪ್ರಮಾಣಪತ್ರ ವಿತರಣಾ ಸಮಾರಂಭ ಜೂನ್ 23 ರಂದು ಮಧ್ಯಾಹ್ನ 3 ಗಂಟೆಗೆ ಹಾವೇರಿ ನಗರದ ಜಿಲ್ಲಾ ಗುರುಭವನದಲ್ಲಿ ಜರುಗಲಿದೆ. ಕೇಂದ್ರ ಗ್ರಾಹಕ ವ್ಯವಹಾರಗಳ ಆಹಾರ ಮತ್ತು ಸಾರ್ವಜನಿಕ ವಿತರಣಾ ಹಾಗೂ ಹೊಸ ಮತ್ತು ನವೀಕರಸಬಹುದಾದ ಇಂಧನ ಸಚಿವರಾದ ಪ್ರಹ್ಲಾದ ಜೋಶಿ, ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ ಹಾಗೂ ಜವಳಿ, ಕಬ್ಬು ಅಭಿವೃದ್ಧಿ ಸಕ್ಕರೆ ಮತ್ತು ಕೃಷಿ ಮಾರುಕಟ್ಟೆ ಹಾಗೂ ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವಾನಂದ ಪಾಟೀಲ ಅವರ ಘನ ಉಪಸ್ಥಿತಿಯಲ್ಲಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್.ಷಡಾಕ್ಷರಿ ಉದ್ಘಾಟನೆ ನೆರವೇರಿಸಲಿದ್ದಾರೆ.

ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಕಾರ್ಯಾಗಾರಕ್ಕೆ ಚಾಲನೆ ನೀಡಲಿದ್ದಾರೆ. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಹಾವೇರಿ ಜಿಲ್ಲಾ ಶಾಖೆ ಅಧ್ಯಕ್ಷ ಮಲ್ಲೇಶ ಕರಿಗಾರ ಅಧ್ಯಕ್ಷತೆ ವಹಿಸಲಿದ್ದಾರೆ.

ಶಾಸಕರು ಹಾಗೂ ವಿಧಾನಸಭೆ ಉಪ ಸಭಾಧ್ಯಕ್ಷರಾದ ರುದ್ರಪ್ಪ ಮಾನಪ್ಪ ಲಮಾಣಿ ಹಾಗೂ ಬ್ಯಾಡಗಿ ಶಾಸಕರು ಹಾಗೂ ಕರ್ನಾಟಕ ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಸವರಾಜ ಶಿವಣ್ಣನವರ ಅವರ ಘನ ಉಪಸ್ಥಿತಿಯಲ್ಲಿ, ಗೌರವಾನ್ವಿತ ಅತಿಥಿಗಳಾಗಿ ಮಾಜಿ ಮುಖ್ಯ ಮಂತ್ರಿಗಳು ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ ಹಾಗೂ ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್ ಅವರು ಭಾಗವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಅಧ್ಯಕ್ಷ ಸೈಯದ್ ಅಜೀಮ್‌ಪೀರ್ ಎಸ್ ಖಾದ್ರಿ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಎಸ್.ಆರ್.ಪಾಟೀಲ, ವಿಧಾನ ಪರಿಷತ್ ಶಾಸಕರಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ, ಶಾಸಕರಾದ ಶ್ರೀನಿವಾಸ ಮಾನೆ, ಯು.ಬಿ.ಬಣಕಾರ, ಪ್ರಕಾಶ ಕೋಳಿವಾಡ, ಯಾಸೀರ್ ಅಹ್ಮದಖಾನ್ ಪಠಾಣ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಸೋಮಣ್ಣ ಬೇವಿನಮರದ, ನಗರಸಭೆ ಅಧ್ಯಕ್ಷೆ ಶಶಿಕಲಾ ರಾಮು ಮಾಳಗಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಸ್.ಎಫ್.ಎನ್.ಗಾಜಿಗೌಡ್ರ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಎಂ.ಹಿರೇಮಠ ಹಾಗೂ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಎಂ.ಮೈದೂರ, ಡಿ.ಸಿ.ಸಿ.ಬ್ಯಾಂಕ್ ನಿರ್ದೇಶಕ ಕೊಟ್ರೇಶಪ್ಪ ಬಸೇಗಣ್ಣಿ ಹಾಗೂ ನಗರಸಭೆ ಮಾಜಿ ಅಧ್ಯಕ್ಷ ಸಂಜೀವಕುಮಾರ ನೀರಲಗಿ ಅವರು ಭಾಗವಹಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ವಿವಿಧ ಇಲಾಖೆ ಅಧಿಕಾರಿಗಳು ಭಾಗವಹಿಸಲಿದ್ದಾರೆ.

# ಉತ್ತಮ ಸಾಧನೆ ಮಾಡಿದ ಸಕ್ಕರೆ ಕಾರ್ಖಾನೆಗಳಿಗೆ ಪ್ರಶಸ್ತಿ ಪ್ರಧಾನ

ಬೆಳಗಾವಿ : ಮಹಾರಾಷ್ಟ್ರ ಸಕ್ಕರೆ ಉದ್ಯಮಕ್ಕೆ ಸ್ಪರ್ಧೆ ನೀಡುವುದು ಸರ್ಕಾರದ ಆಶಯವಾಗಿದ್ದು, ಈ ನಿಟ್ಟಿನಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳು ಅಗತ್ಯ ಸಹಾಯ, ಸಹಕಾರ ನೀಡಲಾಗುವುದೆಂದು ಸಕ್ಕರೆ ಮತ್ತು ಕಬ್ಬು ಅಭಿವೃದ್ಧಿ ಸಚಿವರು ಶಿವಾನಂದ ಪಾಟೀಲ ಹೇಳಿದರು.

ವಿವಿಧ ವಿಭಾಗಗಳಲ್ಲಿ ಉತ್ತಮ ಸಾಧನೆ ಮಾಡಿದ ಸಕ್ಕರೆ ಕಾರ್ಖಾನೆಗಳಿಗೆ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಿಂದ ಪ್ರಶಸ್ತಿ ಪ್ರಧಾನ ಮಾಡಿ ಮಾತನಾಡಿದ ಸಚಿವರು, ಸಕ್ಕರೆ ಕಾರ್ಖಾನೆಗಳು ತಮ್ಮ ಪ್ರಗತಿಯೊಂದಿಗೆ ರೈತರ ಹಿತರಕ್ಷಣೆಯನ್ನು ಗಮನದಲ್ಲಿಟ್ಟುಕೊಳ್ಳಬೇಕೆಂದು ಕಿವಿ ಮಾತು ಹೇಳಿದರು.

ಸಕ್ಕರೆ ಕಾರ್ಖಾನೆಗಳಿಗೆ ಸ್ವಯಂ ನಿಯಂತ್ರಣ ಅಗತ್ಯ. ಕಾರ್ಖಾನೆಗಳ ನಡುವೆ ಆರೋಗ್ಯಕರ ಸ್ಪರ್ಧೆ ಒಳ್ಳೆಯದು. ಆದರೆ, ಸ್ವಾರ್ಥ ಸಾಧನೆಯ ಕಾರ್ಯಕ್ಷೇತ್ರವನ್ನು ಮೀರಿ ಹೋಗಬಾರದು. ಸರ್ಕಾರ ಈ ವಿಚಾರದಲ್ಲಿ ನಿಯಂತ್ರಿಸಲು ಶಾಸನ ರೂಪಿಸುವ ಪರಿಸ್ಥಿತಿ ನಿರ್ಮಾಣ ಆಗಬಾರದು ಎಂದರು.

ಸಕ್ಕರೆ ಕಾರ್ಖಾನೆಗಳ ಪ್ರಗತಿಯಲ್ಲಿ ರಾಜ್ಯ ಸರ್ಕಾರದ ಕೊಡುಗೆ ಗಣನೀಯವಾಗಿದೆ. ಸರ್ಕಾರ ರೈತರಿಗೆ ನೀರು, ವಿದ್ಯುತ್, ಕಬ್ಬಿನ ಬೀಜ ಸೇರಿದಂತೆ ಹಲವು ಸವಲತ್ತುಗಳನ್ನು ಒದಗಿಸದಿದ್ದರೆ ಕಾರ್ಖಾನೆಗಳು ಪ್ರಗತಿ



ಸಾಧಿಸಲು ಸಾಧ್ಯವಿಲ್ಲ. ಈ ಅಂಶಗಳು ಅವರ ಗಮನದಲ್ಲಿರಬೇಕು.

ಈಚಿನ ದಿನಗಳಲ್ಲಿ ಗುತ್ತಿಗೆ ಕೃಷಿ ಪದ್ಧತಿ ಬರುತ್ತಿದ್ದು, ಇದರಿಂದ ಭೂಮಿಯ ಫಲವತ್ತತೆ ನಾಶವಾಗುವ ಅಪಾಯವಿದೆ. ಕಾರ್ಖಾನೆಗಳು ಈ ಬಗ್ಗೆ ರೈತರಲ್ಲಿ ಅರಿವು ಮೂಡಿಸಬೇಕು. ರೈತರ ಭೂಮಿಯ ನಿರ್ವಹಣೆಯ ಜವಾಬ್ದಾರಿ ಕೂಡಾ ಕಾರ್ಖಾನೆಗಳ ಮೇಲೆ ಇದೆ ಎಂದರು.

ಕೇಂದ್ರ ಸರ್ಕಾರ ಎಥನಾಲ್ ಸೇರಿದಂತೆ ಹಲವು ಹೊಸ ಹೊಸ ಯೋಜನೆಗಳನ್ನು ಘೋಷಿಸಿದೆ. ರಾಜ್ಯ ಸರ್ಕಾರ ಕೂಡಾ ಅಗತ್ಯ ಸಹಕಾರ ನೀಡುತ್ತಿದೆ. ಈ ಸೌಲಭ್ಯಗಳನ್ನು ಬಳಸಿಕೊಂಡು ರಾಜ್ಯದ ಸಕ್ಕರೆ ಕಾರ್ಖಾನೆಗಳು ಇತರ ರಾಜ್ಯಗಳಿಗೂ ಮಾದರಿಯಾಗಲಿ ಎಂದರು.

ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯ ನಿರ್ದೇಶಕ ರಾಜಗೋಪಾಲ, ಮಲಗೌಂಡ ಪಾಟೀಲ, ಅಭಿನಂದನ ಪಾಟೀಲ, ಅಭಯ ಸರನಾಯಕ, ವಿ. ಜೆ. ರವಿ ಇದ್ದರು.

20 ಕೋಟಿ ರೂ. ವೆಚ್ಚದಲ್ಲಿ ಕಾಲೇಜು ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಿಂದ ಮದ್ಯಸಾರ ತಂತ್ರಜ್ಞಾನ ಮತ್ತು ಸಕ್ಕರೆ ತಂತ್ರಜ್ಞಾನದಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸ್‌ಗಳನ್ನು ಆರಂಭಿಸಲಾಗುತ್ತಿದ್ದು. 20 ಕೋಟಿ ರೂ. ವೆಚ್ಚದಲ್ಲಿ ಕಾಲೇಜು ಕಟ್ಟಡ ನಿರ್ಮಿಸಲಾಗುವುದೆಂದು ಸಚಿವ ಶಿವಾನಂದ ಪಾಟೀಲ ಹೇಳಿದರು.

ಸಕ್ಕರೆ ಉದ್ಯಮದ ಬೆಳವಣಿಗೆ ದೃಷ್ಟಿಯಿಂದ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ ಸ್ಥಾಪಿಸಲಾಗಿದ್ದು, ಸಕ್ಕರೆ ಉದ್ಯಮಕ್ಕೆ ಅಗತ್ಯ ಸಹಾಯ, ಸಹಕಾರ ನೀಡಲಾಗುತ್ತಿದೆ. ಕಬ್ಬು ಬೆಳೆಗಾರರಿಗೂ ಸಂಸ್ಥೆಯಿಂದ ಹೊಸ ತಳಿ ಸೇರಿದಂತೆ ಹಲವು ನೆರವು ನೀಡಲಾಗುತ್ತಿದೆ ಎಂದರು. ಎರಡು ವರ್ಷಗಳಿಂದ ರಾಜ್ಯದಲ್ಲಿ ಸುಮಾರು 6 ಲಕ್ಷ ಹೆಕ್ಟೇರ ಕ್ಷೇತ್ರದಲ್ಲಿ ಕಬ್ಬು ಬೆಳೆಯಲಾಗುತ್ತಿದ್ದು, ಉತ್ತಮ ಮಳೆ ಆಗುತ್ತಿರುವುದರಿಂದ ಇನ್ನೂ 1 ಲಕ್ಷ ಹೆಕ್ಟೇರ ಕ್ಷೇತ್ರ ಹೆಚ್ಚಾಗುವ ನಿರೀಕ್ಷೆ ಇದೆ. ಕಬ್ಬಿನ ಕೊರತೆ ಎದುರುಸುತ್ತಿರುವ ಕಾರ್ಖಾನೆಗಳಿಗೆ ಇನ್ನು ಮುಂದೆ ಕಬ್ಬಿನ ಸಮಸ್ಯೆಯಾಗದು. ಕೋಟ್ ಸಕ್ಕರೆ ಕಾರ್ಖಾನೆಗಳು ಸ್ವಯಂ ನಿಯಂತ್ರಣ ಹಾಕಿಕೊಳ್ಳುವುದು ಅಷ್ಟೇ ಅಲ್ಲದೆ ಸಾಮಾಜಿಕ ಬದ್ಧತೆಯನ್ನು ಹೊಂದಿರಬೇಕು. ಸ್ಪರ್ಧಾ ಮನೋಭಾವ ಒಳ್ಳೆಯದು, ಆದರೆ, ಸ್ವಾರ್ಥ ಇರಬಾರದು. ಶಿವಾನಂದ ಪಾಟೀಲ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

# ಕೆಲಸಕ್ಕೆ ಸಮಾನ ವೇತನ ನೀಡಬೇಕು' ಎಂದು ಆಗ್ರಹಿಸಿ ಮನವಿ



ಬೈಲಹೊಂಗಲ: 'ಪೋಡಿಮುಕ್ತ ಗ್ರಾಮ, ಇ–ಸ್ವತ್ತು ಸೇರಿದಂತೆ ವಿವಿಧ ರೀತಿಯಲ್ಲಿ ಭೂ ಮಾಪನ ಇಲಾಖೆಯ ಕೆಲಸ ಮಾಡುತ್ತಿರುವ ನಮಗೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು' ಎಂದು ಆಗ್ರಹಿಸಿ ರಾಜ್ಯ ಘಟಕ ಕರೆ ನೀಡಿದ ಹಿನ್ನೆಲೆಯಲ್ಲಿ ಸಾಂಕೇತಿಕವಾಗಿ ಪ್ರತಿಭಟಿಸಿ ಬೈಲಹೊಂಗಲ ಹಾಗೂ ಕಿತ್ತೂರು ವಿಭಾಗದ ಭೂ ಮಾಪಕರು, ಭೂ ದಾಖಲೆಗಳ ಸಹಾಯಕ ನಿರ್ದೇಶಕರಿಗೆ ಮನವಿ ಸಲ್ಲಿಸಿದರು.

ಮಿನಿವಿಧಾನ ಸೌಧ ಕಟ್ಟಡದಲ್ಲಿರುವ ಭೂ ದಾಖಲೆಗಳ ಸಹಾಯಕ ನಿರ್ದೇಶಕರ ಕಚೇರಿಗೆ ನಿಯೋಗದ ಮೂಲಕ ಭೇಟಿ ನೀಡಿದ ಪರವಾನಗಿ ಪಡೆದ ಭೂ ಮಾಪಕರು, 'ನಮ್ಮ ಬೇಡಿಕೆ ಈಡೇರಿಕೆಗಾಗಿ ಗುರುವಾರದಿಂದ ಲಾಗಿನ್‌ಗಳನ್ನು ನಿಷ್ಕ್ರಿಯಗೊಳಿಸಿ, ಕೆಲಸವನ್ನು ಸ್ಥಗಿತಗೊಳಿಸಲಾಗುವುದು. ಸರ್ಕಾರಿ ಭೂ ಮಾಪಕರು ಮಾಡುವ ಎಲ್ಲ ಕೆಲಸಗಳನ್ನು ನಾವೂ ಮಾಡುತ್ತೇವೆ. ಆದರೆ, ವೇತನದಲ್ಲಿ ಸಾಕಷ್ಟು ತಾರತಮ್ಯವಿದೆ. ಹೀಗಾಗಿ, ಕೆಲಸಕ್ಕೆ ತಕ್ಕಂತೆ ವೇತನ ನೀಡಬೇಕೆಂದು ಆಗ್ರಹಿಸಿ ಪ್ರತಿಭಟನೆ ಆರಂಭಿಸುತ್ತಿದ್ದೇವೆ' ಎಂದರು.

ಸರ್ಕಾರಿ ಹಾಗೂ ಖಾಸಗಿ ಜಾಗ–ಜಮೀನು ಅಳತೆಯನ್ನು ಪರವಾನಗಿ ಭೂಮಾಪಕರು ಅಳತೆ ಮಾಡುತ್ತಿದ್ದಾರೆ. ಪ್ರತಿ ಕಡತಕ್ಕೆ 1,200 ರೂಪಾಯಿ ಮಾತ್ರ ನೀಡಲಾಗುತ್ತಿದೆ. ಕಡತ ತಯಾರಿಸಲು ತಗುಲುವ ವೆಚ್ಚವೂ ಹೆಚ್ಚಾಗಿದೆ. ಅಗತ್ಯವಸ್ತುಗಳ ಬೆಲೆ ಹೆಚ್ಚಳವಾಗಿರುವ ಇಂದಿನ ದುಬಾರಿ ಯುಗದಲ್ಲಿ ಸರ್ಕಾರ ನೀಡುವ ಹಣ ಯಾವುದಕ್ಕೂ ಸಾಲುತ್ತಿಲ್ಲ. ಸರ್ಕಾರಿ ಭೂಮಾಪಕರ ರೀತಿಯಲ್ಲಿಯೇ ನಮಗೆ ತಿಂಗಳಿಗೆ 50 ಸಾವಿರ ದಿಂದ 60 ಸಾವಿರ ಕನಿಷ್ಠ ವೇತನ ನೀಡಬೇಕು. ನಮ್ಮನ್ನೂ ಕಾಯಂ ನೇಮಕಾತಿ ನೌಕರರೆಂದು ಪರಿಗಣನೆ ಮಾಡಿಕೊಳ್ಳಬೇಕು' ಎಂದು ಅವರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಬೈಲಹೊಂಗಲ ಹಾಗೂ ಕಿತ್ತೂರು ತಾಲೂಕಿನ ಪರವಾನಿಗೆ ಪಡೆದ ಎಲ್ಲ ಭೂ ಮಾಪಕರು ಉಪಸ್ಥಿತರಿದ್ದರು.

****

## ವಿವಿಧ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನ

ಹಾವೇರಿ: : ಬೆಂಗಳೂರು ಭಾರತ ಸರ್ಕಾರದ ಸಿಬ್ಬಂದಿ ನೇಮಕಾತಿ ಆಯೋಗ(ಕರ್ನಾಟಕ, ಕೇರಳ ಪ್ರದೇಶ) ದಲ್ಲಿ ಖಾಲಿ ಇರುವ ಸ್ಟೇನೋ ಗ್ರೇಡ್ 'ಸಿ' ಹಾಗೂ ಸ್ಟೆನೋ 'ಡಿ' ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಸ್ಟೇನೋ ಗ್ರೇಡ್ 'ಸಿ' ಹುದ್ದೆಗೆ ದಿನಾಂಕ 01–08–2025 ರಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ 18ರಿಂದ 30 ವರ್ಷದೊಳಗಿರಬೇಕು. ಸ್ಟೆನೋ 'ಡಿ' ಹುದ್ದೆಗೆ 18 ರಿಂದ 27ವರ್ಷದೊಳಗಿರಬೇಕು. ಇತರೆ ವರ್ಗದವರಿಗೆ ಸಡಲಿಕೆ ಇದೆ. ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ 12ನೇ ತರಗತಿ ಅಥವಾ ತತ್ಸಮಾನ ಉತ್ತೀರ್ಣರಾಗಿರಬೇಕು. ಶೀಘ್ರಲಿಪಿ ಮತ್ತು ಬೆರಳಚ್ಚು ಕೌಶಲ್ಯ ಹೊಂದಿರುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿದ್ದಾರೆ.

ಆಸಕ್ತ ಅಭ್ಯರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ದಿನಾಂಕ 26–06–2025 ರೊಳಗಾಗಿ ವೆಬ್ ಸೈಟ್ **https://ssc.nic.in** ನಲ್ಲಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ **SSC** ಮುಖ್ಯ ಕಚೇರಿ ನವದೆಹಲಿಯ ವೆಬ್‌ಸೈಟ್ ಃಣಣಠಿ:// ಛಿ.ಟುಛಿ.ಟಿ ಮತ್ತು ಕರ್ನಾಟಕ–ಕೇರಳದ ಜಾಲತಾಣ **www.ssckkr.kar.nic.in** ಅಥವಾ ದೂರವಾಣಿ ಸಂಖ್ಯೆ 080–25502520, 08375–249291ನ್ನು ಸಂಪರ್ಕಿಸಬಹುದಾಗಿದೆ.

## ಅಬಕಾರಿ ದಾಳಿ :
## 6 ಲೀ.ಕಳ್ಳಭಟ್ಟಿ ಸಾರಾಯಿ ಜಪ್ತಿ



ವಿಜಯಪುರ, ವಿಜಂಎಂಪಂರ ಅಬಕಾರಿ ಇಲಾಖೆ ಅಧಿಕಾರಿಗಳು ತಿಕೋಟಾ ತಾಲೂಕಿನ ಕಳ್ಳಕವಟಗಿ ತಾಂಡಾ–2ದ ಮನೆಯೊಂದರ ಮೇಲೆ ದಾಳಿ ನಡೆಸಿ, 06 ಲೀ. ಕಳ್ಳಭಟ್ಟಿ ಸಾರಾಯಿ ಜಪ್ತಿ ಮಾಡಿಕೊಂಡು ಆರೋಪಿತ ಅನೀಲ ಪವಾರ ಎಂಬುವವರ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.

ದಾಳಿಯಲ್ಲಿ ಅಬಕಾರಿ ಉಪ ನಿರೀಕ್ಷಕರಾದ ಅನೀಲ ಪತ್ತಾರ, ಮುಖ್ಯ ಪೇದೆ ಎ.ಎ.ನಾಗೂರ, ಎಂ.ಎಸ್.ಕೊಟ್ಟಲಗಿ, ಶ್ರೀಶೈಲ ಬಂಡಗಾರ ಭಾಗವಹಿಸಿದ್ದರು ಎಂದು ಅಬಕಾರಿ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಮಟಾ: ವಸತಿ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

ಕಾರವಾರ. :– ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಆವಾಸ್ 2.0 ಯೋಜನೆಯಡಿ ನಗರದ ವಸತಿ ರಹಿತ ಹಾಗೂ ನಿವೇಶನ ರಹಿತ ಕುಟುಂಬಗಳಿಗೆ (ಕಚ್ಚಾ ಮನೆ ಹೊಂದಿರುವ) ವಸತಿ ಸೌಲಭ್ಯ ಕಲ್ಪಿಸಲು ಕೇಂದ್ರ ಸರ್ಕಾರದ **Unified web portal** ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಕುಮಟಾ ಪುರಸಭಾ ವ್ಯಾಪ್ತಿಯೊಳಗಿನ ಎಲ್ಲಾ ವಾರ್ಡಗಳಲ್ಲಿರುವ ವಸತಿ ರಹಿತ (ಕಚ್ಚಾ ಮನೆ ಹೊಂದಿರುವ) ಮತ್ತು ನಿವೇಶನ ರಹಿತ ಅರ್ಹ ಫಲಾನುಭವಿಗಳಿಗೆ ವಸತಿ ಸೌಲಭ್ಯ ಪಡೆಯಲು ಕೇಂದ್ರ ಸರ್ಕಾರದ **https//pmay.urban.gov.in** ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ 15 ಕೊನೆಯ ದಿನವಾಗಿದೆ. (ಅರ್ಜಿ ಸಲ್ಲಿಸಿದ ಒಂದು ಪ್ರತಿಯನ್ನು ದಾಖಲೆಗಳೊಂದಿಗೆ ಈ ಕಚೇರಿಗೆ ಸಲ್ಲಿಸಲು ಸೂಚಿಸಿದೆ) ಹೆಚ್ಚಿನ ಮಾಹಿತಿಗಾಗಿ ಪುರಸಭೆ ಕಾರ್ಯಾಲಯದ ವಸತಿ ಶಾಖೆಯನ್ನು ಸಂಪರ್ಕಿಸುವಂತೆ ಕುಮಟಾ ಪುರಸಭೆ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಲ್ಲಮ್ಮನ ದರ್ಶನಕ್ಕಾಗಿ ನಿತ್ಯ ಸಾವಿರಾರು ಜನ ಭಕ್ತರು ನಾನಾ ಭಾಗದಿಂದ ಆಗಮನ

# ಇಂಡಿಯಿಂದ ನೇರವಾಗಿ ಸೌದತ್ತಿ ಎಲ್ಲಮ್ಮ ಗುಡ್ಡಕ್ಕೆ ಹೋಗಲು ಕೆಸ್‌ಆರ್‌ಟಿಸಿ ಬಸ್ ಪ್ರಾರಂಭ

ಇಂಡಿ: ಸುಕ್ಷೇತ್ರ ಸೌದತ್ತಿ ಎಲ್ಲಮ್ಮನ ದರ್ಶನಕ್ಕಾಗಿ ನಿತ್ಯ ಸಾವಿರಾರು ಜನ ಭಕ್ತರು ನಾನಾ ಭಾಗದಿಂದ ಆಗಮಿಸುತ್ತಾರೆ. ಹಾಗಾಗಿ ನಮ್ಮ ಭಾಗದ ಜನ ಸಮಾನ್ಯರಿಗೂ ಅನುಕೂಲವಾಗಬೇಕು ಎಂಬ ಸದಾಶಯದಿಂದ ನೂತನವಾಗಿ ಇಂಡಿ ನಗರದಿಂದ ನೇರವಾಗಿ ಸೌದತ್ತಿ ಎಲ್ಲಮ್ಮ ಗುಡ್ಡಕ್ಕೆ ಹೋಗಲು ಕೆಸ್‌ಆರ್‌ಟಿಸಿ ಬಸ್ ಪ್ರಾರಂಭಿಸಲಾಗಿದೆ ಎಂದು ಶಾಸಕ ಯಶವಂತರಾಯಗೌಡ ಪಾಟೀಲ ಹೇಳಿದರು.

ಅವರು ಪಟ್ಟಣದ ಕೃಷಿ ವಿಜ್ಞಾನ ಕೇಂದ್ರದ ಆವರಣದಲ್ಲಿ ಇಂಡಿ ಕೆಸ್‌ಆರ್‌ಟಿಸಿ ಘಟಕದಿಂದ ನೂತನವಾಗಿ ಸೌದತ್ತಿ ಎಲ್ಲಮ್ಮ ಗುಡ್ಡಕ್ಕೆ ಹೊರಡುವ ಬಸ್ಸಿಗೆ ಚಾಲನೆ ನೀಡಿ ಮಾತನಾಡಿದರು.

ಸಾಕಷ್ಟು ಜನ ಎಲಮ್ಮದೇವಿ ಭಕ್ತರಿರುವುದರಿಂದ ಅವರಿಗೆ ಅನುಕೂಲವಾಗಲಿದ್ದು ಅಲ್ಲದೆ ಶಕ್ತಿ ಯೊಜನೆ ಅನ್ವಯವಾಗುವುದರಿಂದ ನಮ್ಮ ತಾಯಂದಿರರಿಗೆ ಹೆಚ್ಚಿನ ಅನುಕೂಲವಾಗಲಿದೆ. ಹಾಗೆ ಎಲ್ಲ




ಜನ ಸಾಮಾನ್ಯರಿಗೂ ಇದು ಸಹಕಾರಿಯಾಗುತ್ತಿದ್ದು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಕಂದಾಯ ಉಪವಿಭಾಗಾಧಿಕಾರಿ ಅನುರಾಧಾ ವಸ್ತ್ರದ, ಎಚ್.ಎಸ್.ಪಾಟೀಲ, ಮಹಾದೇವಪ್ಪ ಏವೂರ, ಘಟಕ ವ್ಯವಸ್ಥಾಪಕ ರೇವಣಸಿದ್ದ ಖೈನೂರ, ಕಾಸು ಹೊಸಮನಿ, ಗಂಗಾಧರ ಸಾಲಿಗಾಂವ ಸೇರಿದಂತೆ ಅನೇಕರಿದ್ದರು.

# ಸಮುದಾಯ ಭವನ ನಿರ್ಮಾಣದ ಅಂದಾಜು ಮೊತ್ತ ರೂ. 10 ಲಕ್ಷಗಳ ಕಾಮಗಾರಿ ಭೂಮಿ ಪೂಜೆ



ಯರಗಟ್ಟಿ: ಸನ್ 2023–24 ನೇ ಸಾಲಿನ ಮಾಜಿ ಲೋಕಸಭಾ ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಪಟ್ಟಣದ ಶ್ರೀ ಮಹಾಂತ ದುರದುಂಡೀಶ್ವರ ಮಠದ ಆವರಣದಲ್ಲಿ ಸಮುದಾಯ ಭವನ ನಿರ್ಮಾಣದ ಅಂದಾಜು ಮೊತ್ತ ರೂ. 10 ಲಕ್ಷಗಳ ಕಾಮಗಾರಿ ಭೂಮಿ ಪೂಜೆ ನೆರವೇರಿಸಿ ಮಾಜಿ ಸಂಸದೆ ಮಂಗಲಾ ಅಂಗಡಿ. ಈ ಸಂದರ್ಭದಲ್ಲಿ ಭಾರತೀಯ ಜನತಾ ಪಾರ್ಟಿ ಸವದತ್ತಿ ಮಂಡಲ ಅಧ್ಯಕ್ಷರಾದ ವಿರೂಪಾಕ್ಷಣ್ಣಾ ಮಾಮನಿ, ಅಜೀತಕುಮಾರ ದೇಸಾಯಿ, ಜಗದೀಶ ಕೌಜಗೇರಿ, ಈರಣ್ಣ ಚಂದರಗಿ, ಕುಮಾರ ಹಿರೇಮಠ, ಪುಂಡಲೀಕ ಮಾದರ, ಕೃಷ್ಣಮೂರ್ತಿ ತೊರಗಲ್, ಶ್ರೀ ಸದಾನಂದ ಪಾಟೀಲ, ಶಿವಾನಂದ ಪಟ್ಟಣಶೆಟ್ಟಿ, ಸದಾನಂದ ಹಣಬರ, ಗೀರಿಶ ಪಾಟೀಲ, ಬಸವರಾಜ ಇಂಚಲ, ಮಹಾಂತೇಶ ಜಕಾತಿ, ಮೋಹನ ಹಾದಿಮನಿ, ಶ್ರೀಶೈಲ ವಾಲಿ, ವಾಯ್. ಎಸ್. ಪಾಳೇಕರ, ಚಂದ್ರಶೇಖರ ಹಾದಿಮನಿ, ರಾಜೇಂದ್ರ ವಾಲಿ ರಾಮ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಯೋಗವು ಭಾರತದ ಪ್ರಾಚೀನ ಸಂಸ್ಕೃತಿಯ ಅಮೂಲ್ಯ ಕೊಡುಗೆ : ಚಂದ್ರಶೇಖರ ಬಿ ಕಂದಕೂರ



ರೋಣ : ಹಿರೇಹಾಳ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಯನ್ನು ಉತ್ಸಾಹದಿಂದ ಆಚರಿಸಲಾಯಿತು. ಈ ಕಾರ್ಯಕ್ರಮವು ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಸ್ಥಳೀಯ ಗಣ್ಯರ ಭಾಗವಹಿಸುವಿಕೆಯೊಂದಿಗೆ ಅತ್ಯಂತ ಯಶಸ್ವಿಯಾಗಿ ನಡೆಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಬಿ ಕಂದಕೂರ ವಹಿಸಿದ್ದರು. ಕಾರ್ಯಕ್ರಮವು ಬೆಳಿಗ್ಗೆ 8 ಗಂಟೆಗೆ ಪ್ರಾರ್ಥನೆಯೊಂದಿಗೆ ಆರಂಭವಾಯಿತು. ತದನಂತರ, ಶಾಲಾ ವಿದ್ಯಾರ್ಥಿಗಳು ಯೋಗ ಶಿಕ್ಷಕರ ಮಾರ್ಗದರ್ಶನ ದಲ್ಲಿ ಸೂರ್ಯ ನಮಸ್ಕಾರ, ಪ್ರಾಣಾಯಾಮ ಮತ್ತು ವಿವಿಧ ಯೋಗಾಸನಗಳನ್ನು ಪ್ರದರ್ಶಿಸಿದರು. ವಿದ್ಯಾರ್ಥಿಗಳ ಉತ್ಸಾಹಭರಿತ ಭಾಗವಹಿಸುವಿಕೆ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು. ಯೋಗಾಸನಗಳಾದ ತಾಡಾಸನ, ವೃಕ್ಷಾಸನ, ಭುಜಂಗಾಸನ ಮತ್ತು ಶವಾಸನದಂತಹ ಸರಳ ಆಸನಗಳನ್ನು ಮಕ್ಕಳು ಸುಲಲಿತವಾಗಿ ಪ್ರದರ್ಶಿಸಿದರು, ಇದು ಎಲ್ಲರಿಂದಲೂ ಪ್ರಶಂಸೆಗೆ ಪಾತ್ರವಾಯಿತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾರ್ಯ ನಿರ್ವಾಹಕ ಅಧಿಕಾರಿಗಳ ಯೋಗದ ಮಹತ್ವವನ್ನು ವಿವರಿಸಿದ ಅವರು, ಯೋಗವು ಭಾರತದ ಪ್ರಾಚೀನ ಸಂಸ್ಕೃತಿಯ ಅಮೂಲ್ಯ ಕೊಡುಗೆಯಾಗಿದ್ದು, ಇದನ್ನು ಜಗತ್ತಿಗೆ ಪರಿಚಯಿಸಿದ ಕೀರ್ತಿ ಭಾರತಕ್ಕೆ ಸಲ್ಲುತ್ತದೆ ಎಂದರು. "ಯೋಗವು ಕೇವಲ ದೈಹಿಕ ವ್ಯಾಯಾಮವಲ್ಲ, ಇದು ಮನಸ್ಸು, ದೇಹ ಮತ್ತು ಆತ್ಮದ ಸಾಮರಸ್ಯವನ್ನು ಸಾಧಿಸುವ ಒಂದು ಜೀವನ ಕಲೆ. ಇದು ವಿದ್ಯಾರ್ಥಿಗಳಲ್ಲಿ ಏಕಾಗ್ರತೆ, ಆತ್ಮವಿಶ್ವಾಸ ಮತ್ತು ಆರೋಗ್ಯಕರ ಜೀವನಶೈಲಿಯನ್ನು ಬೆಳೆಸುತ್ತದೆ," ಎಂದು ಹೇಳಿದರು. ಯೋಗವು ಒತ್ತಡವನ್ನು ಕಡಿಮೆ ಮಾಡುವುದರ ಜೊತೆಗೆ, ಜೀವನದಲ್ಲಿ ಶಿಸ್ತು ಮತ್ತು ಸಂಯಮ ವನ್ನು ತರುವಲ್ಲಿ ಪ್ರಮುಖ ಪಾತ್ರವಹಿಸುತ್ತದೆ ಎಂದು ಅವರು ತಿಳಿಸಿದರು. ಯೋಗವನ್ನು ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಎಲ್ಲರನ್ನು ಪ್ರೋತ್ಸಾಹಿಸಿದರು.

ಈ ಸಂದರ್ಭದಲ್ಲಿ ತಾಲೂಕ ಪ್ರಬಾರಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಎಮ್ ಏ ಫನಿಬಂಧ ಮಾತನಾಡಿ, ಯೋಗವನ್ನು ಪ್ರತಿಯೊಬ್ಬ ಮನುಷ್ಯನು ಮಾಡಬೇಕು, ಇದರಿಂದ ಮಾನಸಿಕ ನೆಮ್ಮದಿ ದೊರಕುತ್ತದೆ. ವಿದ್ಯಾರ್ಥಿಗಳಿಗೆ ಯೋಗದ ಮೂಲಕ ಆರೋಗ್ಯಕರ ಜೀವನಶೈಲಿಯ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ಗ್ರಾಮದ ಗಣ್ಯರು, ಪಾಲಕರು ಮತ್ತು ಶಿಕ್ಷಕರು ಕಾರ್ಯಕ್ರಮದ ಯಶಸ್ಸಿಗೆ ಶುಭ ಹಾರೈಸಿದರು. ಕಾರ್ಯಕ್ರಮವು ರಾಷ್ಟ್ರಗೀತೆಯೊಂದಿಗೆ ಸಂಪನ್ನಗೊಂಡಿತು. ಈ ಯೋಗ ದಿನಾಚರಣೆಯು ವಿದ್ಯಾರ್ಥಿಗಳಲ್ಲಿ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವ ಜೊತೆಗೆ ಯೋಗವನ್ನು ಜೀವನದ ಅವಿಭಾಜ್ಯ ಅಂಗವಾಗಿ ಅಳವಡಿಸಿಕೊಳ್ಳಲು ಪ್ರೇರಣೆ ನೀಡಿತು...

ಈ ಸಂದರ್ಭದಲ್ಲಿ ತಾಲೂಕ ಅಕ್ಷರ ದಾಸೋಹದ ಸಹಾಯಕ ನಿರ್ದೇಶಕರಾದ ಆರ್ ಎನ್ ನಾಯ್ಕರ್, ಕ್ಷೇತ್ರ ಸಮೊಹ ಸಂಪನ್ಮೂಲ ವ್ಯಕ್ತಿಗಳಾದ ಶಿವಾನಂದ ಪರಸನ್ನವರ, ಬಿ ಎಲ್ ಕ್ಯಾತನಗೌಡರ, ಮುಖ್ಯ ಉಪಾಧ್ಯಾಯರಾದ ಎಂ ಜಿ ತೊನಶ್ಯಾಳ, ಶ್ರೀಮತಿ ಜಿ. ಬಿ ತುಮ್ಮನಿಕಟ್ಟಿ, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ಬಿ.ಎಸ್ ದಳವಾಯಿ ಸೇರಿದಂತೆ ಗ್ರಾಮ ಪಂಚಾಯತಿ ಸಿಬ್ಬಂದಿಗಳು ಶಾಲಾ ಶಿಕ್ಷಕರು ಹಾಗೂ ಗ್ರಾಮದ ಎರಡು ಪ್ರಾಥಮಿಕ ಶಾಲೆಯ ಮಕ್ಕಳು ಭಾಗವಹಿಸಿದ್ದರು..

### ವಿಶ್ವ ಪರಂಪರೆ ತಾಣ ಪಟ್ಟದಕಲ್ಲಿನಲ್ಲಿ ವಿಶ್ವ ಯೋಗ ದಿನಾಚರಣೆ

# ಸಾಮರಸ್ಯ ಸಾಧಿಸುವ ವಿಶಿಷ್ಟ ಶಕ್ತಿ ಯೋಗಕ್ಕಿದೆ : ಜೋಶಿ

ಬಾಗಲಕೋಟ : ಯೋಗವು ನಮ್ಮ ದೇಹ, ಮನಸ್ಸು ಮತ್ತು ಆತ್ಮಬಲ ಹೆಚ್ಚಿಸುವುದು ಮಾತ್ರವಲ್ಲದೆ, ಜಗತ್ತಿನಲ್ಲಿ ಸಾಮರಸ್ಯ ಸಾಧಿಸುವ ವಿಶಿಷ್ಟ ಶಕ್ತಿ ಸಹ ಹೊಂದಿದೆ ಎಂದು ಕೇಂದ್ರ ಆಹಾರ ಹಾಗೂ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಹ್ಲಾದ್ ಜೋಶಿ ಹೇಳಿದರು.

ವಿಶ್ವ ಪಾರಂಪರಿಕ ತಾಣ ಪಟ್ಟದಕಲ್ಲಿನ ವಿರೂಪಾಕ್ಷ ದೇವಸ್ಥಾನದ ಆವರಣದಲ್ಲಿ ಭಾರತೀಯ ಪುರಾತತ್ವ ಸರ್ವೇಕ್ಷಣ ಇಲಾಖೆ ಹಮ್ಮಿಕೊಂಡ 11ನೇ ಅಂತರರಾಷ್ಟ್ರೀಯ ಯೋಗದಿನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಯೋಗ ನಮ್ಮ ಪ್ರಾಚೀನ ಆಧ್ಯಾತ್ಮಿಕ, ಶಾರೀರಿಕ ಮತ್ತು ಮಾನಸಿಕ ಸದೃಢತೆಗೆ ಉತ್ತಮ ಅಭ್ಯಾಸವಾಗಿದೆ. ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ ಈ ವರ್ಷದ ಅಂತರಾಷ್ಟ್ರೀಯ ಯೋಗ ದಿನದ ಧ್ಯೇಯ ವಾಕ್ಯವಾಗಿದೆ ಎಂದರು.

ಭಾರತೀಯ ನೆಲದಲ್ಲಿ ಅರಳಿದ ಯೋಗವು ಪ್ರಧಾನಿ ಮಂತ್ರಿಗಳ ಆಶಯದಂತೆ ಜಾಗತಿಕ ಆರೋಗ್ಯ ಮತ್ತು ಶಾಂತಿಯನ್ನು ಉತ್ತೇಜಿಸುವ ಸಾಧನವಾಗಿದೆ. ಪ್ರಸ್ತುತದ ಪ್ರತಿಕೂಲಕ ಪರಿಸ್ಥಿತಿಯಲ್ಲಿ ಯೋಗ ಅನುಸರಣೆ ವಿಶ್ವಕ್ಕೆ ಅತ್ಯಗತ್ಯವಾಗಿದೆ ಎಂಬುದನ್ನು ಪ್ರಧಾನ ಮಂತ್ರಿಗಳು



ಪ್ರತಿಪಾದಿಸಿದ್ದಾರೆ. ಅದರ ಪ್ರತಿಫಲವಾಗಿ ಇಂದು ವಿಶ್ವವೇ ಯೋಗಭ್ಯಾಸದಲ್ಲಿ ನಿರತವಾಗಿದೆ. 21ನೇ ಶತಮಾನ ಭಾರತದ ಶತಮಾನ ಆಗುವಲ್ಲಿ ಯೋಗ ಅನನ್ಯ ಕೊಡುಗೆ ನೀಡುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಂಸದ ಪಿ.ಸಿ.ಗದ್ದಿಗೌಡರ್, ವಿಧಾನ ಪರಿಷತ್ ಶಾಸಕ ಹನುಮಂತ ನಿರಾಣಿ, ಜಿಲ್ಲಾಧಿಕಾರಿ ಸಂಗಪ್ಪ ಎಂ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಭಾರತೀಯ ಪುರಾತತ್ವ ಸಮೀಕ್ಷೆಯ ಹಿರಿಯ ಅಧಿಕಾರಿ ನವರತ್ನಿ ಕುಮಾರ್ ಪಾಟಕ್ ಹಾಗೂ ಅಧಿಕಾರಿ ವರ್ಗ ಸೇರಿದಂತೆ ಸಾರ್ವಜನಿಕರು ಪಾಲ್ಗೊಂಡಿದ್ದರು.

### ನಿಕಟಪೂರ್ವ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಅವರಿಗೆ ಆತ್ಮೀಯ ಬೀಳ್ಗೊಡುಗೆ


# ಕನಸು ನನಸು ಮಾಡಿದ ಬಾಗಲಕೋಟೆ ಜಿಲ್ಲೆ : ಡಿಸಿ ಜಾನಕಿ

ಬಾಗಲಕೋಟ : : ಬಾಲ್ಯದಲ್ಲಿ ಅಂದು ಕೊಂಡಂತಹ ಜಿಲ್ಲಾಧಿಕಾರಿಯಾಗುವ ಕನಸನ್ನು ಬಾಗಲಕೋಟೆ ಜಿಲ್ಲೆ ಈಡೇರುವಂತೆ ಮಾಡಿದೆ ಎಂದು ಬಾಗಲಕೋಟೆಯ ನಿಕಟಪೂರ್ವ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಶುಕ್ರವಾರ ನಿಕಟಪೂರ್ವ ಜಿಲ್ಲಾಧಿಕಾರಿಗಳಿಗೆ ಬೀಳ್ಕೊಡುಗೆ ಹಾಗೂ ನೂತನ ಜಿಲ್ಲಾಧಿಕಾರಿಗಳಿಗೆ ಸ್ವಾಗತ ಕಾರ್ಯಕ್ರಮಲ್ಲಿ ಆತ್ಮೀಯ ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ಅವರು ಹಾಸನ ಜಿಲ್ಲೆಯ ಒಂದು ಸಣ್ಣ ಗ್ರಾಮದಲ್ಲಿ ಹುಟ್ಟಿ ಪ್ರಾಥಮಿಕ ಶಿಕ್ಷಣವನ್ನು ಕನ್ನಡ ಮಾಧ್ಯಮದಲ್ಲಿ ಪ್ರಾರಂಭ ಮಾಡಿ 5ನೇ ತರಗತಿಯಲ್ಲಿದ್ದಾಗ ಜಿಲ್ಲಾಧಿಕಾರಿ ಆಗುವ ಕನಸನ್ನು ಕಂಡಿದ್ದೆ. ಆ ಕನಸು ಬಾಗಲಕೋಟೆಯಲ್ಲಿ ನನಸು ಆಗಿದ್ದು, ಈ ಜಿಲ್ಲೆ ನನ್ನ ಮನಸ್ಸಿನಲ್ಲಿ ಅಚ್ಚಳಿಯಾಗಿ ಉಳಿಯುವಂತೆ ಮಾಡಿದೆ ಎಂದರು.

ಜಿಲ್ಲಾಧಿಕಾರಿಯಾಗಿ ಕೆಲಸ ಮಾಡಿದ ಈ ಎರಡು ವರ್ಷಗಳ ಅವಧಿಯಲ್ಲಿ ಹೆಚ್ಚಿನ ಪ್ರೀತಿ, ವಿಶ್ವಾಸವನ್ನು ಜಿಲ್ಲೆಯ ಜನರು ಮತ್ತು ಅಧಿಕಾರಿ ವರ್ಗದವರು ನೀಡಿದ್ದು, ಅವರೆಲ್ಲರಿಗೂ ಕೃತಜ್ಞತೆ ಸಲ್ಲಿಸುತ್ತೇನೆ. ಕೆಲಸದ ವಿಷಯಕ್ಕೆ ನಾನು ನಿಮ್ಮಗಳ ಜೊತೆ ಜೋರಾಗಿ ಮಾತಾಡಿದ್ದೀನಿ, ಜಗಳ ಆಡಿದ್ದೀನೀ, ಆದರೆ ನನ್ನನ್ನು ದ್ವೇಷ ಮಾಡುವಂತವರು ಯಾರಿಲ್ಲ ಎಂಬ ದೃಢ ವಿಶ್ವಾಸ ನನಗಿದೆ. ಜಿ.ಪಂ ಸಿಇಒ ಶಶಿಧರ ಕುರೇರ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಈ ಇಬ್ಬರು ಸದಾ ನನ್ನ ತಮ್ಮಂದಿರಂತೆ ಜೊತೆಗಿದ್ದು, ಕಾರ್ಯನಿರ್ವಹಿಸಿದ್ದಾರೆ. ಇವರಿಬ್ಬರೂ ವಯಸ್ಸು, ಅನುಭವದಲ್ಲಿ ನನಗಿಂತ ಚಿಕ್ಕವರಾದರು ಪ್ರಜ್ಞಾವಂತಿಕೆ, ಪ್ರೌಡಿಮೆ, ಬದ್ಧತೆಯಲ್ಲಿ ಕಡಿಮೆ ಇಲ್ಲವೆಂದರು.

ಎರಡು ಬಾರಿ ಅಪರ ಜಿಲ್ಲಾಧಿಕಾರಿಗಳಾಗಿ ಕೆಲಸ ಮಾಡಿದ ಅನುಭವವನ್ನು ನಿಕಟಪೂರ್ವ ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ ಅವರಲ್ಲಿ ಹಂಚಿಕೊಂಡಿದ್ದೆ. ಆ ಅನುಭವ ಮಾತುಗಳಿಂದ ಕೆಲಸವನ್ನು ಅಚ್ಚುಕಟ್ಟಾಗಿ ನಿರ್ವಹಿಸಿದ್ದಾರೆ. ನನ್ನಲ್ಲಿನ ಉತ್ತಮ



ಗುಣಗಳಿಗೆ ಕಾರಣರಾದ ಎಲ್ಲ ಕನ್ನಡದ ಬರಹಗಾರರಿಗೆ, ಮಹಿಳಾ ಜಿಲ್ಲಾಧಿಕಾರಿಯಾಗಿ ಸಂಭ್ರಮಿಸಿದ ಜಿಲ್ಲೆಯ ಸಮಸ್ತ ಮಹಿಳೆಯರಿಗೆ ಧನ್ಯವಾದಗಳನ್ನು ಹೇಳಿದರು. ಜಿಲ್ಲೆಯ ನೆನಪುಗಳು ಬದುಕಿನೂದ್ದಕ್ಕೂ ನನ್ನ ಜೊತೆಗಿರಲಿವೆ. ಜಿಲ್ಲೆ ಇನ್ನಷ್ಟು ಪ್ರಗತಿಯತ್ತ ಸಾಗಲಿ ಎಂದು ಹೇಳಿದರು.

ನೂತನ ಜಿಲ್ಲಾಧಿಕಾರಿಯಾಗಿ ಆಗಮಿಸಿದ ಸಂಗಪ್ಪ ಎಂ. ಅವರು ನಾನು ಹುಟ್ಟಿ ಬೆಳೆದ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಯಾಗಿರುವುದು ನನ್ನ ಭಾಗ್ಯ. ಹಿಂದಿನ ಜಿಲ್ಲಾಧಿಕಾರಿಗಳು ನಡೆಸಿಕೊಂಡ ಬಂದ ಆಡಳಿತವನ್ನು ಮುಂದುವರೆಸಿಕೊಂಡು ಹೋಗುವದರ ಜೊತೆಗೆ ಜಿಲ್ಲೆಯ ಅಭಿವೃದ್ದಿಗೆ ಶ್ರಮಿಸುವುದಾಗಿ ತಿಳಿಸಿದರು. ಸಮಸ್ಯೆಯನ್ನು ಹೊತ್ತುಕೊಂಡು ಬಂದವರ ಜೊತೆ ಸೌಜನ್ಯದಿಂದ ವರ್ತಿಸಿ ಅವರ ಸಮಸ್ಯೆಗಳನ್ನು ಆಲಿಸಿ ಬಗೆಹರಿಸುವದಲ್ಲಿ ಇರುವ ತೃಪ್ತಿ ಬೇರೆನು ಇಲ್ಲ ಎಂದರು.

ಹಿಂದಿನ ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ ತಹಶೀಲ್ದಾರ, ಉಪವಿಭಾಗಾಧಿಕಾರಿಯಾಗಿ ಕೆಲಸ ಮಾಡುವುದು ಮತ್ತು ಅಪರ ಜಿಲ್ಲಾಧಿಕಾರಿಯಾಗಿ ಕೆಲಸ ಮಾಡುವುದು ತುಂಬಾ ಬದಲಾವಣೆ ಇದೆ. ಬಾಗಲಕೋಟೆಯಲ್ಲಿ ಬಹಳಷ್ಟು ವಿಷಯವನ್ನು ಕಲಿತಿದ್ದೇನೆ. ಉತ್ತಮವಾಗಿ ಕಾರ್ಯನಿರ್ವಹಿಸಿದ ತೃಪ್ತಿ ನನಗೆ ಇದೆ. ಇಲ್ಲಿ ಕಲಿತಿರುವ ವಿಷಯ ವಸತಿ ಯೋಜನೆಯ ವ್ಯವಸ್ಥಾಪಕ ನಿರ್ದೇಶ್ಕರ ಹುದ್ದೆ ನಿಭಾಯಿಸಲು ಅನುಕೂಲವಾಗಿದೆ ಎಂದು ಹೇಳಿ ಬಾಗಲಕೋಟೆ ಜಿಲ್ಲೆ ಕುರಿತು ಸ್ವ–ರಚಿತ ಕವನವನ್ನು ಹೇಳಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ಸರಕಾರಿ ನೌಕರರಿಗೆ ವರ್ಗಾವಣೆ ಅನಿವಾರ್ಯ. ಆದರೆ ಆ ಅವಧಿಯಲ್ಲಿ ಮಾಡಿದ ಕಾರ್ಯವನ್ನು ಮರೆಯುವಂತಿಲ್ಲ. ಜಿಲ್ಲಾಧಿಕಾರಿಗಳನ್ನು ಹತ್ತಿರದಿಂದ ನೋಡಿದ್ದು, ಅವರಿಂದ ಸಾಕಷ್ಟು ಕಲಿತಿದ್ದೇನೆ. ಪ್ರತಿಯೊಂದು ಅಭಿವೃದ್ದಿ ವಿಷಯದಲ್ಲಿ ಚರ್ಚೆ ಮಾಡಿ ಮುಂದುವರೆಯುತ್ತಿದ್ದೇವೆ. ಇದರಿಂದ ಎಲ್ಲ ಕೆಲಸಗಳು ಸರಾಗವಾಗಿ ನಡೆಯತ್ತಿದ್ದವು ಎಂದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಮಾತನಾಡಿ ಜವಾಬ್ದಾರಿ ಹೆಚ್ಚಾದಾಗ ಬಹಳಷ್ಟು ತಾಳ್ಮೆ ಇರಬೇಕಾಗುತ್ತದೆ. ಅಂತಹ ತಾಳ್ಮೆ ಅವರಲ್ಲಿ ಇತ್ತು. ಪ್ರತಿಯೊಂದು ಸಂದರ್ಭದಲ್ಲಿ ಸಲಹೆಗಳನ್ನು ನೀಡಿದ್ದರಿಂದ ಜಿಲ್ಲೆಯ ಕಾನೂನು ಸುವ್ಯವಸ್ಥೆ ಕಾಪಾಡಲು ಸಾಧ್ಯವಾಯಿತು ಎಂದರು.

ಕಾರ್ಯಕ್ರಮದಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ ರುಥ್ರೇನ್, ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಾರ್ವಜನಿಕರು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಬಾಗಲಕೋಟೆ ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :118, Postal Reg No. PMG/KA/NK/BM/135/25-27 / POST AT Vantamury Colony Post Office